VOLUME: 16 | 25 JULY 2026 | ಶನಿವಾರ | RS: 2 | PAGE: 06 ISSUE: 161 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ದಳಪತಿ ವಿಜಯ್ ನಟನೆಯ ಕೊನೆಯ ಚಿತ್ರ 'ಜನ ನಾಯಗನ್' ಜಾಗತಿಕವಾಗಿ ಒಳ್ಳೆಯ ಓಪನಿಂಗ್ ಪಡೆದುಕೊಂಡಿದೆ. ಮೊದಲ ದಿನವೇ ಒಟ್ಟು 78.27 ಕೋಟಿ ರೂಪಾಯಿ ಗಳಿಸಿದೆ. ಕರ್ನಾಟಕದಲ್ಲೂ ವಿಜಯ್ ಹವಾ ಮುಂದುವರಿದಿದ್ದು, ಬೆಂಗಳೂರಿನ ಸಿಂಹಪಾಲಿನ ನೆರವಿನೊಂದಿಗೆ ರಾಜ್ಯಾದ್ಯಂತ ಬರೋಬ್ಬರಿ 10 ಕೋಟಿ ರೂಪಾಯಿ ಕಲೆಕ್ಷನ್ ಮಾಡಿದೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಎನ್‌ಟಿಎಯ 47 ಅಧಿಕಾರಿಗಳಿಗೆ ಗೇಟ್‌ಪಾಸ್

ನವದೆಹಲಿ: ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮಗಳ ವಿರುದ್ಧ ದೇಶಾದ್ಯಂತ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರಗೊಳ್ಳುತ್ತಿರುವ ಬೆನ್ನಲ್ಲೇ ಕೇಂದ್ರ ಸರ್ಕಾರ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಯಲ್ಲಿ ಮಹತ್ವದ ಪುನರ್‌ರಚನಾ ಕ್ರಮಕ್ಕೆ ಮುಂದಾಗಿದೆ. ಪರೀಕ್ಷಾ ವ್ಯವಸ್ಥೆಯಲ್ಲಿ ಅಕ್ರಮಗಳು ಮತ್ತು ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳ ಹಿನ್ನೆಲೆಯಲ್ಲಿ ಎನ್‌ಟಿಎಯ 47 ಅಧಿಕಾರಿಗಳನ್ನು ಸೇವೆಯಿಂದ ವಜಾಗೊಳಿಸಲಾಗಿದೆ ಎಂದು ವರದಿಯಾಗಿದೆ.

ರಾಷ್ಟ್ರೀಯ ಮಟ್ಟದ ಪ್ರಮುಖ ಪ್ರವೇಶ ಪರೀಕ್ಷೆಗಳನ್ನು ನಡೆಸುವ ಎನ್‌ಟಿಎ ಸತತವಾಗಿ ವಿವಾದಗಳಿಗೆ ಗುರಿಯಾಗುತ್ತಿರುವ ಹಿನ್ನೆಲೆಯಲ್ಲಿ ಸಂಸ್ಥೆಯ ಕಾರ್ಯವೈಖರಿಯಲ್ಲಿ ಸಮಗ್ರ ಶುದ್ಧೀಕರಣ ಕೈಗೊಳ್ಳುವ ಭಾಗವಾಗಿ ಈ ಕ್ರಮ ತೆಗೆದುಕೊಳ್ಳಲಾಗಿದೆ ಎನ್ನಲಾಗಿದೆ. ಸೇವೆಯಿಂದ ವಜಾಗೊಂಡಿರುವ ಕೆಲವು ಅಧಿಕಾರಿಗಳ ವಿರುದ್ಧ ಕಾನೂನು ಮತ್ತು ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸುವ ಸಾಧ್ಯತೆಯೂ ಇದೆ ಎಂದು ಮೂಲಗಳು ತಿಳಿಸಿವೆ.

ಎನ್‌ಟಿಎಯನ್ನು ಮತ್ತಷ್ಟು ಪುನರ್‌ರಚಿಸುವ ಹಾಗೂ ಪರೀಕ್ಷಾ ಪ್ರಕ್ರಿಯೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮುಂದಿನ ದಿನಗಳಲ್ಲಿ ಇನ್ನಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳುವ ಸಾಧ್ಯತೆಯಿದೆ. ಸಂಸ್ಥೆಯ ಹೊರಗುತ್ತಿಗೆ ಆಧಾರಿತ ಕಾರ್ಯವಿಧಾನದಲ್ಲಿಯೂ ಪ್ರಮುಖ ಬದಲಾವಣೆಗಳನ್ನು ತರಲು ಸರ್ಕಾರ



ಚಿಂತನೆ ನಡೆಸುತ್ತಿದೆ ಎನ್ನಲಾಗಿದೆ. ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳಿಗೆ ಕಡಿವಾಣ ಹಾಕಿ, ಇಡೀ ಪರೀಕ್ಷಾ ವ್ಯವಸ್ಥೆಯನ್ನು ಹೆಚ್ಚು ಸುರಕ್ಷಿತ, ಪಾರದರ್ಶಕ ಹಾಗೂ ಸೋರಿಕೆ–ನಿರೋಧಕವಾಗಿಸುವ ನಿಟ್ಟಿನಲ್ಲಿ ಹಲವು ಸುಧಾರಣಾ ಕ್ರಮಗಳನ್ನು ಪರಿಶೀಲಿಸಲಾಗುತ್ತಿದೆ.

ಎನ್‌ಟಿಎ ದೇಶಾದ್ಯಂತ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ನೀಟ್, ಜೆಇಇ ಮತ್ತು ಸಿಯುಇಟಿ ಸೇರಿದಂತೆ ಸುಮಾರು 15ರಿಂದ 20 ಪ್ರಮುಖ ರಾಷ್ಟ್ರೀಯ ಮಟ್ಟದ ಪರೀಕ್ಷೆಗಳನ್ನು ನಡೆಸುತ್ತದೆ. ಹೀಗಾಗಿ ಸಂಸ್ಥೆಯ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಭದ್ರತೆಯನ್ನು ಹೆಚ್ಚಿಸುವುದು ಅತ್ಯಗತ್ಯವಾಗಿದೆ.

ನೀಟ್ ಸೇರಿದಂತೆ ರಾಷ್ಟ್ರೀಯ ಪ್ರವೇಶ ಪರೀಕ್ಷೆಗಳಲ್ಲಿನ ಅಕ್ರಮಗಳ ಆರೋಪಗಳು ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಆತಂಕ ಮೂಡಿಸಿರುವ ಹಿನ್ನೆಲೆಯಲ್ಲಿ ಎನ್‌ಟಿಎಯ ಕಾರ್ಯವೈಖರಿಯಲ್ಲಿ ಹೆಚ್ಚಿನ ಪರಿಶೀಲನೆ ನಡೆಸಬೇಕು ಮತ್ತು ಸಂಸ್ಥೆಯಲ್ಲಿ ಸಾಂಸ್ಥಿಕ ಸುಧಾರಣೆಗಳನ್ನು ಜಾರಿಗೆ ತರಬೇಕು ಎಂಬ ಬೇಡಿಕೆಗಳು ಹೆಚ್ಚಾಗಿವೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಇತ್ತೀಚಿನ ಕ್ರಮ ಮಹತ್ವ ಪಡೆದುಕೊಂಡಿದೆ.

ಮುಂದಿನ ದಿನಗಳಲ್ಲಿ ಎನ್‌ಟಿಎಯ ಆಡಳಿತಾತ್ಮಕ ವ್ಯವಸ್ಥೆ, ಪರೀಕ್ಷಾ ನಿರ್ವಹಣೆ, ಪ್ರಶ್ನೆಪತ್ರಿಕೆಗಳ ಸುರಕ್ಷತೆ ಮತ್ತು ಹೊರಗುತ್ತಿಗೆ ವ್ಯವಸ್ಥೆಯಲ್ಲಿ ಮತ್ತಷ್ಟು ಬದಲಾವಣೆಗಳನ್ನು ಜಾರಿಗೆ ತರುವ ಸಾಧ್ಯತೆಯಿದ್ದು, ಪರೀಕ್ಷಾ ವ್ಯವಸ್ಥೆಯ ಮೇಲಿನ ವಿದ್ಯಾರ್ಥಿಗಳ ನಂಬಿಕೆಯನ್ನು ಮರುಸ್ಥಾಪಿಸುವುದು ಕೇಂದ್ರ ಸರ್ಕಾರದ ಮುಂದಿರುವ ಪ್ರಮುಖ ಸವಾಲಾಗಿದೆ.

## ಜಕ್ಕೂರಿನಲ್ಲಿ ಮತ್ತೆ ವಿಮಾನ ಹಾರಾಟ

ಬೆಂಗಳೂರು: ದೇಶದ ಅತ್ಯಂತ ಹಳೆಯ ಸರ್ಕಾರಿ ವೈಮಾನಿಕ ತರಬೇತಿ ಸಂಸ್ಥೆಗಳಲ್ಲಿ ಒಂದಾಗಿರುವ ಜಕ್ಕೂರು ಸರ್ಕಾರಿ ವೈಮಾನಿಕ ತರಬೇತಿ ಶಾಲೆಗೆ ಮರುಜೀವ ನೀಡಲಾಗಿದ್ದು, ಪ್ರಸಕ್ತ ಸಾಲಿನಲ್ಲೇ ಮತ್ತೆ ತರಬೇತಿ ಆರಂಭಿಸಲಾಗುವುದು ಎಂದು ಉಪ ಮುಖ್ಯಮಂತ್ರಿ, ಕಂದಾಯ, ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮುಜರಾಯಿ ಸಚಿವ ಡಾ. ಜಿ. ಪರಮೇಶ್ವರ ತಿಳಿಸಿದ್ದಾರೆ.

ಜಕ್ಕೂರು ಸರ್ಕಾರಿ ವೈಮಾನಿಕ ತರಬೇತಿ ಶಾಲೆಗೆ ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದ ಅವರು, ಬಡ ಹಾಗೂ ಮಧ್ಯಮ ವರ್ಗದ ಮಕ್ಕಳ ವೈಮಾನಿಕ ಕನಸನ್ನು ನನಸು ಮಾಡುವ ಉದ್ದೇಶದಿಂದ 1940ರಲ್ಲಿ ಆರಂಭಿಸಲಾಗಿದ್ದ ಈ ಸಂಸ್ಥೆಯ ಪರವಾನಗಿ 2023ರ ಡಿಸೆಂಬರ್‌ನಲ್ಲಿ ರದ್ದಾಗಿತ್ತು. ಇದೀಗ ಕೇಂದ್ರ ಸರ್ಕಾರದ ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯದಿಂದ 2026ರ ಜುಲೈ 16ರಿಂದ 2031ರ ಜುಲೈ 15ರವರೆಗೆ ಐದು ವರ್ಷಗಳ ಅವಧಿಗೆ ಹೊಸ ಪರವಾನಗಿ ದೊರೆತಿದ್ದು, ಅಗತ್ಯ ಮೂಲಸೌಕರ್ಯಗಳನ್ನು ನವೀಕರಿಸಲಾಗಿದೆ ಎಂದು ತಿಳಿಸಿದರು.

ಜಕ್ಕೂರು ಸರ್ಕಾರಿ ವೈಮಾನಿಕ ತರಬೇತಿ ಶಾಲೆಯಲ್ಲಿ ಒಬ್ಬ ಮುಖ್ಯ ವಿಮಾನ ಬೋಧಕರು ಹಾಗೂ ಇಬ್ಬರು ವಿಮಾನ ಬೋಧಕರನ್ನು ನೇಮಕ ಮಾಡಲಾಗಿದೆ. ಸಂಸ್ಥೆಯಲ್ಲಿರುವ ಐದು ವಿಮಾನಗಳ ಪೈಕಿ ಮೂರು ವಿಮಾನಗಳು ಹಾರಾಟಕ್ಕೆ ಸಂಪೂರ್ಣ ಸಿದ್ಧವಾಗಿವೆ. ಉಳಿದ ಎರಡು ವಿಮಾನಗಳನ್ನು ಕೂಡ ಶೀಘ್ರದಲ್ಲೇ ದುರಸ್ತಿಗೊಳಿಸಿ ಕಾರ್ಯಾಚರಣೆಗೆ ಬಳಸಿಕೊಳ್ಳಲಾಗುವುದು ಎಂದು ಹೇಳಿದರು.

ಹಿಂದಿನಂತೆ ಖಾಸಗಿ ಪೈಲಟ್ ಪರವಾನಗಿ, ವಾಣಿಜ್ಯ ಪೈಲಟ್ ಪರವಾನಗಿ ಹಾಗೂ ಬಹು ಎಂಜಿನ್ ವಿಮಾನ ತರಬೇತಿ ಸೇರಿದಂತೆ ವಿವಿಧ ತರಬೇತಿಗಳನ್ನು ಮುಂದುವರಿಸಲಾಗುವುದು. ಸಂಸ್ಥೆಯಲ್ಲಿ ಒಟ್ಟು 30 ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಸಾಮರ್ಥ್ಯವಿದ್ದು, ಹೊಸ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಡಾ. ಪರಮೇಶ್ವರ ಹೇಳಿದರು.

ದೇಶದ ವೈಮಾನಿಕ ಕ್ಷೇತ್ರವು ವೇಗವಾಗಿ ಬೆಳೆಯುತ್ತಿದ್ದು, ಹಲವು ಖಾಸಗಿ ವಿಮಾನಯಾನ ಸಂಸ್ಥೆಗಳು ಹೊಸ ವಿಮಾನಗಳ ಖರೀದಿಗೆ ಮುಂದಾಗಿವೆ. ಇದರಿಂದ ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪೈಲಟ್‌ಗಳ ಬೇಡಿಕೆ ಸೃಷ್ಟಿಯಾಗಲಿದೆ. ಖಾಸಗಿ ವೈಮಾನಿಕ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ಪಡೆಯಲು ಕೋಟ್ಯಂತರ ರೂಪಾಯಿ ವೆಚ್ಚವಾಗುವ ಪರಿಸ್ಥಿತಿಯಲ್ಲಿ, ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಕೈಗೆಟುಕುವ ವೆಚ್ಚದಲ್ಲಿ ಪೈಲಟ್ ತರಬೇತಿ ನೀಡುವುದು ಸರ್ಕಾರದ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ವಿಮಾನಯಾನ ತರಬೇತಿಯ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ರನ್‌ವೇ ಸುರಕ್ಷತೆ ಹಾಗೂ ಹಾರಾಟ ಪರೀಕ್ಷೆ ನಡೆಸಿ ತೃಪ್ತಿ ವ್ಯಕ್ತಪಡಿಸಿದ್ದಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾರ್ಥಿವೇತನ ಸೌಲಭ್ಯವೂ ದೊರೆಯಲಿದೆ ಎಂದು ತಿಳಿಸಿದರು.



ಪೋಲ್ ವಾಲ್ಟ್ ಕ್ರೀಡೆಯಲ್ಲಿ ರಾಷ್ಟ್ರ ಮಟ್ಟದ ಸಾಧನೆ ಮಾಡಿ ಏಷಿಯನ್ ಗೇಮ್ಸ್‌ಗೆ ಆಯ್ಕೆಯಾಗಿರುವ ಶಿವಮೊಗ್ಗದ ಕುಮಾರಿ ಸಿಂಧುಶ್ರೀ ಅವರು ಕರ್ನಾಟಕ ಸರ್ಕಾರದ ಕ್ರೀಡಾ ಇಲಾಖೆವತಿಯಿಂದ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಂದ ಶುಕ್ರವಾರ ತಲಾ ಎರಡೂವರೆ ಲಕ್ಷ ಮೌಲ್ಯದ ಅಂತರರಾಷ್ಟ್ರೀಯ ಗುಣಮಟ್ಟದ 3 ಪೋಲ್ ಗಳನ್ನು ಹಾಗೂ ಅಗತ್ಯವಿರುವ ಮೂಲಸೌಕರ್ಯಕ್ಕಾಗಿ 5 ಲಕ್ಷ ರೂ ಸಹಾಯ ಧನ ಪಡೆದು ಸರ್ಕಾರಕ್ಕೆ ಕೃತಜ್ಞತೆಯನ್ನು ಅರ್ಪಿಸಿದರು. ಈ ಸಂದರ್ಭದಲ್ಲಿ ಕ್ರೀಡಾ ಇಲಾಖೆಯ ಆಯುಕ್ತ ಅನುಚೇತ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿವಾದಾತ್ಮಕ ಪೋಸ್ಟರ್ ಪ್ರದರ್ಶನ

**ಬೆಂಗಳೂರು:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಖಂಡಿಸಿ ಬೆಂಗಳೂರಿನಲ್ಲಿ ಕಳೆದ ಐದು ದಿನಗಳಿಂದ ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಪ್ರತಿಭಟನೆ ಮುಂದುವರಿದಿದೆ. ಶುಕ್ರವಾರ ನಡೆದ ಪ್ರತಿಭಟನೆಯ ವೇಳೆ ಕೆಲವರು ಪ್ರದರ್ಶಿಸಿದ ವಿವಾದಾತ್ಮಕ ಹಾಗೂ ಪ್ರಚೋದನಕಾರಿ ಬರಹಗಳಿದ್ದ ಪೋಸ್ಟರ್‌ಗಳು ಕೆಲಕಾಲ ಗೊಂದಲಕ್ಕೆ ಕಾರಣವಾದವು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕೆಲವರು 'ಗಙಖಚಜ ಐಜ ಃಐಖ ಕಠಟಬಭಿಜ' ಎಂಬ ಬರಹವಿದ್ದ ಪೋಸ್ಟರ್‌ಗಳನ್ನು ಪ್ರದರ್ಶಿಸಿದರು. ಮತ್ತೊಂದೆಡೆ ಉಮರ್ ಖಾಲಿದ್ ಮತ್ತು ಶಾರ್ಜೀಲ್ ಇಮಾಮ್ ಪರವಾದ ಘೋಷಣೆಗಳನ್ನು ಒಳಗೊಂಡ ಪೋಸ್ಟರ್‌ಗಳನ್ನೂ ಕೆಲವರು ಹಿಡಿದುಕೊಂಡಿದ್ದರು ಎನ್ನಲಾಗಿದೆ. ಇದನ್ನು ಗಮನಿಸಿದ ಪೊಲೀಸರು ಪರಿಸ್ಥಿತಿ ಉದ್ವಿಗ್ನಗೊಳ್ಳದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪೋಸ್ಟರ್‌ಗಳನ್ನು ವಶಕ್ಕೆ ಪಡೆದರು.

ಪೊಲೀಸರು ಪೋಸ್ಟರ್‌ಗಳನ್ನು ವಶಪಡಿಸಿಕೊಳ್ಳುವ ಸಂದರ್ಭದಲ್ಲಿ ಕೆಲಕಾಲ ಸ್ಥಳದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಆದರೆ ಯಾವುದೇ ಅಹಿತಕರ ಘಟನೆ ಸಂಭವಿಸಿಲ್ಲ. ಪ್ರತಿಭಟನೆ




ಶಾಂತಿಯುತವಾಗಿ ಮುಂದುವರಿಯುವಂತೆ ಪೊಲೀಸರು ಮತ್ತು ಪ್ರತಿಭಟನೆಯ ಆಯೋಜಕರು ಪರಿಸ್ಥಿತಿಯನ್ನು ನಿಯಂತ್ರಿಸಿದರು.

ಇದೇ ವೇಳೆ, ಉಮರ್ ಖಾಲಿದ್ ಪರವಾದ ಪೋಸ್ಟರ್ ಹಿಡಿದು ಪ್ರತಿಭಟನಾ ಸ್ಥಳಕ್ಕೆ ಬಂದಿದ್ದ ಯುವತಿಗೆ ಇತರ ಪ್ರತಿಭಟನಾಕಾರರು ಆಕ್ಷೇಪ ವ್ಯಕ್ತಪಡಿಸಿದರು. ಇಂತಹ ಪೋಸ್ಟರ್‌ಗಳಿಂದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಯ ಮೂಲ ಉದ್ದೇಶಕ್ಕೆ ಧಕ್ಕೆಯಾಗುತ್ತದೆ ಎಂದು ಹೇಳಿ, ಸ್ಥಳದಿಂದ ತೆರಳುವಂತೆ ಮನವಿ ಮಾಡಿದರು.

ಬಳಿಕ ಯುವತಿ ಪ್ರತಿಭಟನಾ ಸ್ಥಳದಿಂದ ಹೊರನಡೆದರು ಎಂದು ತಿಳಿದುಬಂದಿದೆ.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ನ್ಯಾಯಸಮ್ಮತ ಹಾಗೂ ಸಮಗ್ರ ತನಿಖೆ ನಡೆಸಬೇಕು ಮತ್ತು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿದೆ. ಆದರೆ ಪ್ರತಿಭಟನೆಯ ವೇಳೆ ಕಾಣಿಸಿಕೊಂಡ ವಿವಾದಾತ್ಮಕ ಪೋಸ್ಟರ್‌ಗಳು ಪ್ರತಿಭಟನೆಯ ಮೂಲ ಉದ್ದೇಶಕ್ಕಿಂತ ಹೆಚ್ಚಿನ ಗಮನ ಸೆಳೆದಿದ್ದು, ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ.

## ನಕಲಿ ಪಿಎಚ್‌ಡಿ: ಕ್ರಿಮಿನಲ್ ಪ್ರಕರಣ ದಾಖಲಿಸಲು ಸೂಚನೆ

ಬೆಂಗಳೂರು: ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದ 249 ಮಂದಿ ನಕಲಿ ಪಿಎಚ್‌ಡಿ ಪ್ರಮಾಣಪತ್ರಗಳನ್ನು ಸಲ್ಲಿಸಿ ನೇಮಕಾತಿ ಪಡೆದಿರುವುದು ಬೆಳಕಿಗೆ ಬಂದಿದ್ದು, ಸಂಬಂಧಪಟ್ಟವರ ವಿರುದ್ಧ ಕೂಡಲೇ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಆಯುಕ್ತರು ಸೂಚಿಸಿದ್ದಾರೆ.

ಈ ಕುರಿತು ಜುಲೈ 21ರಂದು ಆದೇಶ ಹೊರಡಿಸಿರುವ ಆಯುಕ್ತರು, ನಕಲಿ ಪಿಎಚ್‌ಡಿ ಪ್ರಮಾಣಪತ್ರ ಸಲ್ಲಿಸಿರುವ ಅತಿಥಿ ಉಪನ್ಯಾಸಕರನ್ನು ತಕ್ಷಣವೇ ಸೇವೆಯಿಂದ ಬಿಡುಗಡೆಗೊಳಿಸುವಂತೆ ಸಂಬಂಧಪಟ್ಟ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರಿಗೆ ನಿರ್ದೇಶನ ನೀಡಿದ್ದಾರೆ.

ಅಲ್ಲದೆ, ಇಂತಹ ಅಭ್ಯರ್ಥಿಗಳನ್ನು ಮುಂದಿನ ಯಾವುದೇ ನೇಮಕಾತಿ ಅಥವಾ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸುವಂತೆಯೂ ಸೂಚಿಸಲಾಗಿದೆ. ಪ್ರಕರಣ ದಾಖಲಿಸಿದ ಬಳಿಕ ಒಂದು ವಾರದೊಳಗೆ ಸಂಪೂರ್ಣ ವರದಿ ಸಲ್ಲಿಸುವಂತೆ ಪ್ರಾಂಶುಪಾಲರಿಗೆ ಆದೇಶಿಸಲಾಗಿದೆ.

ಅತಿಥಿ ಉಪನ್ಯಾಸಕರ ನೇಮಕಾತಿ ಸಂದರ್ಭದಲ್ಲಿ ಅಭ್ಯರ್ಥಿಗಳು ಸಲ್ಲಿಸುವ ಶೈಕ್ಷಣಿಕ ದಾಖಲೆಗಳನ್ನು ಪರಿಶೀಲಿಸಿ ನೇಮಕಾತಿ ಆದೇಶ ನೀಡಲಾಗುತ್ತದೆ. ಬಳಿಕ ಪ್ರಮಾಣಪತ್ರಗಳ ಅಸಲಿತನವನ್ನು ಖಚಿತಪಡಿಸಿಕೊಳ್ಳಲು ಸಂಬಂಧಪಟ್ಟ ವಿಶ್ವವಿದ್ಯಾಲಯಗಳಿಗೆ ಕಳುಹಿಸಲಾಗುತ್ತದೆ. ಈ ರೀತಿಯ ಪರಿಶೀಲನೆ ವೇಳೆ 249 ಅಭ್ಯರ್ಥಿಗಳು ಸಲ್ಲಿಸಿದ್ದ ಪಿಎಚ್‌ಡಿ ಪ್ರಮಾಣಪತ್ರಗಳು ಅಸಲಿಯಲ್ಲ ಎಂಬುದನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ದೃಢಪಡಿಸಿವೆ ಎಂದು ತಿಳಿದುಬಂದಿದೆ.

ಪತ್ತೆಯಾಗಿರುವ ನಕಲಿ ಪ್ರಮಾಣಪತ್ರಗಳ ಪೈಕಿ 148 ಪ್ರಕರಣಗಳು ಕಲ್ಯಾಣ ಕರ್ನಾಟಕ ಭಾಗದಲ್ಲೇ ಬೆಳಕಿಗೆ ಬಂದಿರುವುದು ಆತಂಕಕ್ಕೆ ಕಾರಣವಾಗಿದೆ. ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 33 ಪ್ರಕರಣಗಳು ವರದಿಯಾಗಿವೆ.

ಬೀದರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 19 ಮಂದಿ, ಕಲಬುರಗಿ ಸೇಡಂ ರಸ್ತೆಯ ಸ್ವಾಯತ್ತ ಸರ್ಕಾರಿ ಕಾಲೇಜಿನಲ್ಲಿ 17 ಮಂದಿ ಹಾಗೂ ಕಲಬುರಗಿ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 15 ಮಂದಿ ನಕಲಿ ಪಿಎಚ್‌ಡಿ ಪ್ರಮಾಣಪತ್ರಗಳನ್ನು ಸಲ್ಲಿಸಿರುವುದು ಪರಿಶೀಲನೆಯಿಂದ ಬಹಿರಂಗವಾಗಿದೆ.

ನಕಲಿ ಪ್ರಮಾಣಪತ್ರಗಳ ಮೂಲಕ ಅರ್ಹತೆ ಇಲ್ಲದಿದ್ದರೂ ಅತಿಥಿ ಉಪನ್ಯಾಸಕರಾಗಿ ನೇಮಕಗೊಂಡಿರುವ ಪ್ರಕರಣವನ್ನು ಇಲಾಖೆ ಗಂಭೀರವಾಗಿ ಪರಿಗಣಿಸಿದ್ದು, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸೂಚಿಸಿದೆ. ನಕಲಿ ಶೈಕ್ಷಣಿಕ ದಾಖಲೆಗಳ ಮೂಲಕ ಸರ್ಕಾರಿ ಸೇವೆ ಪಡೆಯಲು ಯತ್ನಿಸಿರುವುದು ಮಾತ್ರವಲ್ಲದೆ, ಅರ್ಹ ಅಭ್ಯರ್ಥಿಗಳ ಅವಕಾಶಗಳನ್ನು ಕಸಿದುಕೊಂಡಿರುವ ಸಾಧ್ಯತೆಯೂ ಇರುವುದರಿಂದ ಪ್ರಕರಣದ ಸಮಗ್ರ ತನಿಖೆಗೆ ಒತ್ತಾಯ ಕೇಳಿಬಂದಿದೆ.

# ಬಿಯಾಂಡ್ ಬೆಂಗಳೂರು ನೀತಿಯಿಂದ ಉದ್ಯಮಗಳ ವೆಚ್ಚ ಇಳಿಕೆ

ಬೆಂಗಳೂರು: ರಾಜ್ಯದ ಇತರೆ ನಗರಗಳಿಗೆ ಉದ್ಯಮಗಳನ್ನು ವಿಸ್ತರಿಸುವ ಮೂಲಕ ಕಚೇರಿ ಸ್ಥಳದ ವೆಚ್ಚವನ್ನು ಕಡಿಮೆ ಮಾಡಲು ಬಿಯಾಂಡ್ ಬೆಂಗಳೂರು ನೀತಿಯಡಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಬೆಂಗಳೂರು ಟೆಕ್ ಶೃಂಗಸಭೆಯ ಕೃತಕ ಬುದ್ಧಿಮತ್ತೆ ಹಾಗೂ ಬಿಯಾಂಡ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಐಟಿ ಕ್ಷೇತ್ರದ 250ಕ್ಕೂ ಹೆಚ್ಚು ಕಂಪನಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಭಾಗವಹಿಸಿದ್ದ ಸಭೆಯಲ್ಲಿ ರಾಜ್ಯದ ತಂತ್ರಜ್ಞಾನ ಕ್ಷೇತ್ರದ ಭವಿಷ್ಯದ ಯೋಜನೆಗಳನ್ನು ವಿವರಿಸಿದರು.

ಉದ್ಯಮಗಳಿಗೆ ಕಚೇರಿ ಜಾಗದ ವೆಚ್ಚ ಬೆಂಗಳೂರಿನಲ್ಲಿ ದೇಶದ ಇತರೆ ಪ್ರಮುಖ ನಗರಗಳಿಗೆ ಹೋಲಿಸಿದರೆ ಕಡಿಮೆಯಿದೆ. ಇತರೆ ನಗರಗಳಲ್ಲಿ ಕಚೇರಿ ಜಾಗಕ್ಕೆ ಸುಮಾರು 3.5




ಡಾಲರ್ ವೆಚ್ಚವಾಗುತ್ತಿದ್ದರೆ, ಬೆಂಗಳೂರಿನಲ್ಲಿ ಒಂದು ಡಾಲರ್‌ನಷ್ಟು ವೆಚ್ಚವಾಗುತ್ತಿದೆ. ಬಿಯಾಂಡ್ ಬೆಂಗಳೂರು ನೀತಿಯ ಮೂಲಕ ಉದ್ಯಮಗಳನ್ನು ರಾಜ್ಯದ ಇತರೆ ನಗರಗಳಿಗೆ ವಿಸ್ತರಿಸಿದರೆ ಕಚೇರಿ ಜಾಗದ ವೆಚ್ಚವನ್ನು ಅರ್ಧ ಡಾಲರ್‌ನಷ್ಟು ಕಡಿಮೆ ಮಾಡಲು ಸಾಧ್ಯವಾಗಲಿದೆ ಎಂದು ಮುಖ್ಯಮಂತ್ರಿ ಆಶಾಭಾವನೆ ವ್ಯಕ್ತಪಡಿಸಿದರು.

ಬೆಂಗಳೂರಿನ ಯಶಸ್ಸಿಗೆ ಇಲ್ಲಿನ ಪ್ರತಿಭೆ, ಹವಾಮಾನ ಹಾಗೂ ಬಲಿಷ್ಠ ತಂತ್ರಜ್ಞಾನ ಪರಿಸರ ವ್ಯವಸ್ಥೆಯೇ ಪ್ರಮುಖ ಕಾರಣ ಎಂದು ಹೇಳಿದ ಅವರು, ಹಲವು ದಶಕಗಳಿಂದ ನಗರದಲ್ಲಿ ನೆಲೆಸಿರುವ ಉದ್ಯಮಿಗಳು ಹಾಗೂ ಕಂಪನಿಗಳು ಬೆಂಗಳೂರಿನ ಮತ್ತು ಕರ್ನಾಟಕದ ರಾಯಭಾರಿಗಳಿದ್ದಂತೆ ಎಂದು ಬಣ್ಣಿಸಿದರು.

ಕರ್ನಾಟಕದ ಸಾಫ್ಟ್‌ವೇರ್ ರಫ್ತು 2024–25ರಲ್ಲಿ 4.36 ಲಕ್ಷ ಕೋಟಿ ದಾಟಿದ್ದು, ಪ್ರಸಕ್ತ ಸಾಲಿನಲ್ಲಿ 5.50 ಲಕ್ಷ ಕೋಟಿ ತಲುಪುವ ನಿರೀಕ್ಷೆಯಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ರಾಜ್ಯದ ಜಾಗತಿಕ ಸಾಮರ್ಥ್ಯ ಕೇಂದ್ರಗಳು ಕೇವಲ ಹಿಂಬದಿ ಕಚೇರಿಗಳಾಗಿ ಉಳಿಯದೆ, ನಾವೀನ್ಯತೆ, ಉತ್ಪನ್ನ ಅಭಿವೃದ್ಧಿ ಹಾಗೂ ಹೆಚ್ಚಿನ ಮೌಲ್ಯದ ಭವಿಷ್ಯಾಧಾರಿತ ಕಾರ್ಯಗಳ ಕೇಂದ್ರಗಳಾಗಿ ರೂಪುಗೊಂಡಿವೆ. ಬೆಂಗಳೂರು ದೇಶದ ಕಚೇರಿ ಮಾರುಕಟ್ಟೆಯ ಬಳಕೆಯಲ್ಲಿಯೂ ಮುಂಚೂಣಿಯಲ್ಲಿದೆ ಎಂದರು.

ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಅಪಾರ ಪ್ರತಿಭೆ ಇದ್ದು, ಅವರಿಗೆ ಗುಣಮಟ್ಟದ ಶಿಕ್ಷಣ ಹಾಗೂ ಅಗತ್ಯ ಅವಕಾಶಗಳನ್ನು ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಕಂಪನಿಗಳು ತಮ್ಮ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ನಿಧಿಯ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಶಾಲೆಗಳನ್ನು ಅಭಿವೃದ್ಧಿಪಡಿಸಲು ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ಬಿಯಾಂಡ್ ಬೆಂಗಳೂರು ನೀತಿಯಡಿ ರಾಜ್ಯದ ಇತರೆ ನಗರಗಳಲ್ಲಿ ಉದ್ಯಮಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಕೆಲವು ನಗರಗಳಲ್ಲಿ ಹೆಚ್ಚುವರಿ ನಿರ್ಮಾಣ ಸಾಂದ್ರತೆಗೆ ಅವಕಾಶ ನೀಡುವ ಕ್ರಮಗಳನ್ನು ಕೈಗೊಳ್ಳಲಾಗಿದೆ. ನೀತಿಗಳು ಕೇವಲ ದಾಖಲೆಗಳಲ್ಲಿ ಉಳಿಯದೆ ಕಾರ್ಯರೂಪಕ್ಕೆ ಬರಬೇಕು. ಭವಿಷ್ಯದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಈಗಾಗಲೇ ಯೋಜನೆ ರೂಪಿಸುತ್ತಿದೆ ಎಂದು ಹೇಳಿದರು.

ಕೃತಕ ಬುದ್ಧಿಮತ್ತೆ, ರೋಬಾಟಿಕ್ಸ್, ಆಳ ತಂತ್ರಜ್ಞಾನ, ಡಿಜಿಟಲ್ ಮೂಲಸೌಕರ್ಯ, ಕ್ವಾಂಟಮ್ ತಂತ್ರಜ್ಞಾನ ಹಾಗೂ ಸುಸ್ಥಿರ ಮೂಲಸೌಕರ್ಯ ಕ್ಷೇತ್ರಗಳಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ.

ಉದ್ಯಮ ಮತ್ತು ಶೈಕ್ಷಣಿಕ ಸಂಸ್ಥೆಗಳ ನಡುವಿನ ಸಹಭಾಗಿತ್ವವನ್ನು ಬಲಪಡಿಸುವ ಮೂಲಕ ಸಂಶೋಧನೆ ಮತ್ತು ನಾವೀನ್ಯತೆಗೆ ಉತ್ತೇಜನ ನೀಡಲಾಗುತ್ತಿದೆ ಎಂದರು.

ಕರ್ನಾಟಕವನ್ನು ಭಾರತದ ಪ್ರಮುಖ ಬಾಹ್ಯಾಕಾಶ ತಂತ್ರಜ್ಞಾನ ಕೇಂದ್ರವನ್ನಾಗಿ ರೂಪಿಸುವ ಗುರಿಯನ್ನು ಸರ್ಕಾರ ಹೊಂದಿದೆ. ರಾಜ್ಯದಲ್ಲಿ ಹಲವು ದಶಕಗಳಿಂದ ಬಲಿಷ್ಠ ವೈಜ್ಞಾನಿಕ ಮತ್ತು ತಾಂತ್ರಿಕ ಸಂಸ್ಥೆಗಳನ್ನು ನಿರ್ಮಿಸಲಾಗಿದ್ದು, ಬೆಳೆಯುತ್ತಿರುವ ಜಾಗತಿಕ ಬಾಹ್ಯಾಕಾಶ ಆರ್ಥಿಕತೆಯಲ್ಲಿ ಕರ್ನಾಟಕವು ಪ್ರಮುಖ ಪಾತ್ರ ವಹಿಸಬೇಕು ಎಂಬುದು ಸರ್ಕಾರದ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಭಾರತ ಸಾರಥಿ
25/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಝೀ ಕನ್ನಡ ನ್ಯೂಸ್ ಛಾಯಾಗ್ರಾಹಕ ಯಶ್‌ಗೆ ಆತ್ಮೀಯರಿಂದ ಹುಟ್ಟುಹಬ್ಬದ ಶುಭಾಶಯ

ಬೆಂಗಳೂರು: ಝೀ ಕನ್ನಡ ನ್ಯೂಸ್‌ನ ಛಾಯಾಗ್ರಾಹಕ ಯಶ್ ಅವರ ಜನ್ಮದಿನವನ್ನು ಸ್ನೇಹಿತರು ಮತ್ತು ಮಾಧ್ಯಮ ಕ್ಷೇತ್ರದ ಗಣ್ಯರು ಆತ್ಮೀಯವಾಗಿ ಆಚರಿಸಿ ಶುಭಾಶಯ ಕೋರಿದರು.



ಈ ಸಂದರ್ಭದಲ್ಲಿ ಕೇಕ್ ಕತ್ತರಿಸುವ ಮೂಲಕ ಜನ್ಮದಿನವನ್ನು ಸಂಭ್ರಮದಿಂದ ಆಚರಿಸಲಾಯಿತು. ನಟ ಹಾಗೂ ನಿರ್ಮಾಪಕ ಗಂಡಸಿ ಸದಾನಂದ ಸ್ವಾಮಿ, ಮಧುಸೂದನ್, ಉದಯ ಕೀರ್ತಿ ಪತ್ರಿಕೆಯ ಸಂಪಾದಕರು, ನ್ಯೂಸ್ ಎಕ್ಸ್‌ನ ಹಿರಿಯ ಛಾಯಾಗ್ರಾಹಕ ಪವನ್ ಕುಮಾರ್, ಲೋಕೇಶ್ ಕುಮಾರ್, ಇಂಡಿಯಾ ಟುಡೇಯ ಹಿರಿಯ ಛಾಯಾಗ್ರಾಹಕ ಕಿರಣ್ ಕುಮಾರ್ ಸೇರಿದಂತೆ ಅನೇಕ ಆತ್ಮೀಯ ಸ್ನೇಹಿತರು ಹಾಗೂ ಮಾಧ್ಯಮ ಕ್ಷೇತ್ರದ ಸಹೋದ್ಯೋಗಿಗಳು ಭಾಗವಹಿಸಿ ಯಶ್ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ತಿಳಿಸಿದರು.

ಈ ವೇಳೆ ಮಾತನಾಡಿದ ಗಣ್ಯರು, ಛಾಯಾಗ್ರಾಹಕರಾಗಿ ಯಶ್ ಅವರು ತಮ್ಮ ವೃತ್ತಿಯಲ್ಲಿ ಇನ್ನಷ್ಟು ಯಶಸ್ಸು ಸಾಧಿಸಲಿ, ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಸುಖ–ಸಂತೋಷದಿಂದ ಕೂಡಿದ ಜೀವನ ಅವರದಾಗಲಿ ಎಂದು ಹಾರೈಸಿದರು.

ಕಾರ್ಯಕ್ರಮವು ಆತ್ಮೀಯತೆ ಮತ್ತು ಸ್ನೇಹಭಾವದ ವಾತಾವರಣದಲ್ಲಿ ನಡೆಯಿತು.

## ಜು. 26ರಂದು ಡಾಕ್ಟರ್ಸ್ ಡೇ, ಪತ್ರಿಕೋದ್ಯಮ ದಿನ ಹಾಗೂ ಕಾರ್ಗಿಲ್ ವಿಜಯ್ ದಿವಸ್ ಪೋಸ್ಟರ್ ಬಿಡುಗಡೆ

ಬೆಂಗಳೂರು: ಇದು ನಿಮ್ಮ ವಾಹಿನಿ ಕಲಾ ವೇದಿಕೆ (ರಿ.) ಹಾಗೂ ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಸಹಯೋಗದಲ್ಲಿ ಡಾಕ್ಟರ್ಸ್ ಡೇ, ಪತ್ರಿಕೋದ್ಯಮ ದಿನ ಹಾಗೂ ಕಾರ್ಗಿಲ್ ವಿಜಯ್ ದಿವಸ್ 27ಕ್ಕೂ ಹೆಚ್ಚು 27ಕ್ಕೂ ಹೆಚ್ಚು ಸಾಧಕರಿಗೆ ಗೌರವಿಸಲಾಗುವದು,ಇದೇ ಜುಲೈ 26, 2026ರಂದು ನಗರದ ನಯನ ಸಭಾಂಗಣದಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮದ ಕುರಿತು ಇಂದು ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಸುದ್ದಿಗೋಷ್ಠಿ ನಡೆಯಿತು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆಯೋಜಕರು, ವೈದ್ಯರು, ಪತ್ರಕರ್ತರು ಹಾಗೂ ಕಾರ್ಗಿಲ್ ಯುದ್ಧದ ವೀರ ಯೋಧರ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಗಣ್ಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಇದು ನಿಮ್ಮ ವಾಹಿನಿ ಕಲಾ ವೇದಿಕೆ (ರಿ.) ಪ್ರಧಾನ ಕಾರ್ಯದರ್ಶಿ ಕಿಶೋರ್




ಕುಮಾರ್ ಕೆ.ಎಸ್., ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, ಚಂದ್ರಿಕಾ ಬಿ.ವಿ., ಎಚ್.ಎ. ನಾಗರತ್ನಮ್ಮ, ಕೆ. ಸುರೇಶ್ ಸೇರಿದಂತೆ ಪ್ರಮುಖ ಪದಾಧಿಕಾರಿಗಳು ಹಾಗೂ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

ಸಾರ್ವಜನಿಕರು ಹಾಗೂ ಪತ್ರಿಕಾ ಮಿತ್ರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಆಯೋಜಕರು ಮನವಿ ಮಾಡಿದರು.

## 'ಮತದಾರರ ಪಟ್ಟಿಯಲ್ಲಿನ ಎಎಸ್‌ಡಿಡಿ ವಿವರಗಳನ್ನು ಆಗಿಂದಾಗ್ಗೆ ನೀಡಿ'

ಬೆಂಗಳೂರು

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬೆಂಗಳೂರು ದಕ್ಷಿಣ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿಶೇಷ ಸಮಗ್ರ ಪರಿಷ್ಕರಣೆ–2026ರ ಹಿನ್ನೆಲೆಯಲ್ಲಿ ಮತದಾರರ ಪಟ್ಟಿಯಲ್ಲಿನ ಎಎಸ್‌ಡಿಡಿ (ಗೈರುಹಾಜರು, ಸ್ಥಳಾಂತರಗೊಂಡ, ಮೃತ ಹಾಗೂ ದ್ವಿಪ್ರತಿ ಮತದಾರರು) ವಿವರಗಳನ್ನು ರಾಜಕೀಯ ಪಕ್ಷಗಳಿಗೆ ಆಗಿಂದಾಗ್ಗೆ ನೀಡುವಂತೆ ಅಪರ ಜಿಲ್ಲಾ ಚುನಾವಣಾಧಿಕಾರಿ ಕೆ.ಎನ್. ರಮೇಶ್ ಅಧಿಕಾರಿಗಳಿಗೆ ಸೂಚಿಸಿದರು.



ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ಕೆ ಸಂಬಂಧಿಸಿದಂತೆ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆಗೆ ಸಂಬಂಧಿಸಿದಂತೆ ದಾಖಲಾಗಿರುವ ಎಎಸ್‌ಡಿಡಿ ಮತದಾರರ ವಿವರಗಳನ್ನು ನಿಯಮಿತವಾಗಿ ಒದಗಿಸುವಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮನವಿ ಮಾಡಿದ್ದಾರೆ ಎಂದು ತಿಳಿಸಿದರು. ಪ್ರಸ್ತುತ ಅಪರ ಜಿಲ್ಲಾ ಚುನಾವಣಾಧಿಕಾರಿ ಹಂತದಲ್ಲಿ ಎಎಸ್‌ಡಿಡಿ ವಿವರಗಳನ್ನು ರಾಜಕೀಯ ಪಕ್ಷಗಳಿಗೆ ಇ–ಮೇಲ್ ಮೂಲಕ ಕಳುಹಿಸಲಾಗುತ್ತಿದೆ. ಇನ್ನು ಮುಂದೆ ಮತದಾರರ ನೋಂದಣಾಧಿಕಾರಿ ಹಂತದಲ್ಲಿಯೇ ಎಎಸ್‌ಡಿಡಿ ವಿವರಗಳನ್ನು ಆಗಿಂದಾಗ್ಗೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಕಡ್ಡಾಯವಾಗಿ ನೀಡಬೇಕು ಎಂದು ಚುನಾವಣಾ ವಿಭಾಗದ ಅಧಿಕಾರಿಗಳಿಗೆ ಕೆ.ಎನ್. ರಮೇಶ್ ಸೂಚಿಸಿದರು.

ಮತದಾರರ ಪಟ್ಟಿಯಲ್ಲಿ ಯಾವುದೇ ವ್ಯತ್ಯಾಸಗಳು ಅಥವಾ ಅನರ್ಹ ಮತದಾರರ ಹೆಸರುಗಳು ಕಂಡುಬಂದಲ್ಲಿ, ಸಂಬಂಧಪಟ್ಟ ಮತದಾರರ ಸಂಪೂರ್ಣ ವಿವರಗಳೊಂದಿಗೆ ಕಡ್ಡಾಯವಾಗಿ ಲಿಖಿತ ರೂಪದಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಈ ರೀತಿಯಾಗಿ ಸಲ್ಲಿಕೆಯಾಗುವ ಲಿಖಿತ ದೂರುಗಳ ಆಧಾರದ ಮೇಲೆ ತಕ್ಷಣ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

## ಪಿಎನ್‌ಬಿ ಮೆಟ್‌ಲೈಫ್‌ಗೆ ಉತ್ತಮ ಸಾಧನೆ

ನವದೆಹಲಿ

ಭಾರತದ ಪ್ರಮುಖ ಜೀವ ವಿಮಾ ಸಂಸ್ಥೆಗಳಲ್ಲಿ ಒಂದಾದ ಪಿಎನ್‌ಬಿ ಮೆಟ್‌ಲೈಫ್, 2025–26ರ ಹಣಕಾಸು ವರ್ಷದಲ್ಲಿ ಕ್ಲೈಮ್ ಇತ್ಯರ್ಥದಲ್ಲಿ ಉತ್ತಮ ಸಾಧನೆ ದಾಖಲಿಸಿದೆ. ಸಂಸ್ಥೆಯು ಈ ಅವಧಿಯಲ್ಲಿ ಶೇ.99.81ರಷ್ಟು ವೈಯಕ್ತಿಕ ಕ್ಲೈಮ್ ಇತ್ಯರ್ಥ ಅನುಪಾತ ಹಾಗೂ ಶೇ.99.70ರಷ್ಟು ಗುಂಪು ಕ್ಲೈಮ್ ಇತ್ಯರ್ಥ ಅನುಪಾತವನ್ನು ಸಾಧಿಸಿದೆ.

2025–26ರ ಅವಧಿಯಲ್ಲಿ ಸಂಸ್ಥೆಯು ಒಟ್ಟು 6,188 ವೈಯಕ್ತಿಕ ಕ್ಲೈಮ್‌ಗಳನ್ನು ಇತ್ಯರ್ಥಗೊಳಿಸಿದ್ದು, ಇದರ ಒಟ್ಟು ಮೊತ್ತ ರೂ.526.62 ಕೋಟಿಯಾಗಿದೆ. ಇದೇ ಅವಧಿಯಲ್ಲಿ ರೂ.502.69 ಕೋಟಿ ಮೊತ್ತದ 6,868 ಗುಂಪು ಕ್ಲೈಮ್‌ಗಳನ್ನು ಇತ್ಯರ್ಥಪಡಿಸಲಾಗಿದೆ. ಕ್ಲೈಮ್ ಇತ್ಯರ್ಥ ಪ್ರಕ್ರಿಯೆಯ ವೇಗದಲ್ಲಿಯೂ ಸಂಸ್ಥೆ ಗಮನಾರ್ಹ ಸಾಧನೆ ಮಾಡಿದ್ದು, ಅಗತ್ಯವಿರುವ ಎಲ್ಲ ದಾಖಲೆಗಳು ಲಭ್ಯವಾದ 30 ದಿನಗಳೊಳಗೆ ಶೇ.99.98ರಷ್ಟು ಕ್ಲೈಮ್‌ಗಳನ್ನು ಇತ್ಯರ್ಥಗೊಳಿಸಲಾಗಿದೆ. ಈ ಪೈಕಿ ಶೇ.95ರಷ್ಟು ಕ್ಲೈಮ್‌ಗಳನ್ನು ಏಳು ದಿನಗಳೊಳಗೆ ಹಾಗೂ ಶೇ.35ರಷ್ಟು ಕ್ಲೈಮ್‌ಗಳನ್ನು ಕೇವಲ ಒಂದು ದಿನದೊಳಗೆ ಇತ್ಯರ್ಥಪಡಿಸಲಾಗಿದೆ.

ಕ್ಲೈಮ್ ಸೇವಾ ಅನುಭವವನ್ನು ಮತ್ತಷ್ಟು ಸುಧಾರಿಸುವ ಉದ್ದೇಶದಿಂದ ಪಿಎನ್‌ಬಿ ಮೆಟ್‌ಲೈಫ್ ಜಾರಿಗೆ ತಂದಿರುವ 'ಕ್ಲೈಮ್ಸ್ ಅಶ್ಯೂರ್ – 3 ಅವರ್ಸ್' ಉಪಕ್ರಮದಡಿ ಮೂರು ಗಂಟೆಗಳೊಳಗೆ ರೂ.56.67 ಕೋಟಿ ಮೌಲ್ಯದ 1,681 ಕ್ಲೈಮ್‌ಗಳ ಕುರಿತು ನಿರ್ಧಾರ ಕೈಗೊಳ್ಳಲಾಗಿದೆ. ಬಳಿಕ ಈ ಕ್ಲೈಮ್‌ಗಳನ್ನು ಗರಿಷ್ಠ ಒಂದು ವಾರದ ಅವಧಿಯೊಳಗೆ ಇತ್ಯರ್ಥಗೊಳಿಸಲಾಗಿದೆ.

## ನೀಟ್ ಪರೀಕ್ಷೆ ಸೋರಿಕೆ ಹಾಗೂ ವಿದ್ಯಾರ್ಥಿಗಳ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ

ಬೆಂಗಳೂರು: ನೀಟ್ ಪರೀಕ್ಷೆ ಸೋರಿಕೆ ಪ್ರಕರಣ ಹಾಗೂ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ನಡೆದಿರುವುದಾಗಿ ಆರೋಪಿಸಲಾದ ಹಲ್ಲೆಯನ್ನು ಖಂಡಿಸಿ, ಬೆಂಗಳೂರಿನ ಸಿ.ವಿ. ರಾಮನ್ ನಗರ ವಿಧಾನಸಭಾ ಕ್ಷೇತ್ರದ ಹೊಸ ತಿಪ್ಪಸಂದ್ರ ಮುಖ್ಯರಸ್ತೆಯಲ್ಲಿ ಸರ್ವ ಜನಾಂಗ ಮಹಾ ಒಕ್ಕೂಟದ ವತಿಯಿಂದ ಪ್ರತಿಭಟನೆ ನಡೆಯಿತು.



ಸರ್ವ ಜನಾಂಗ ಮಹಾ ಒಕ್ಕೂಟದ ರಾಷ್ಟ್ರೀಯ ಅಧ್ಯಕ್ಷ ಎಂ. ನಾಗೇಶ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಯುವ ಹೋರಾಟಗಾರರಾದ ರಾಜೇಶ್ ಕುಮಾರ್, ಎಸ್. ಪ್ರಭು, ಭರತ್, ಕಾರ್ತಿಕ್, ಸಚಿನ್ ಕೃಷ್ಣ ಸೇರಿದಂತೆ ನೂರಾರು ಕಾರ್ಯಕರ್ತರು ಹಾಗೂ ವಿವಿಧ ಸಂಘಟನೆಗಳ ಹೋರಾಟಗಾರರು ಭಾಗವಹಿಸಿದ್ದರು.

ಪ್ರತಿಭಟನಾಕಾರರು, ನೀಟ್ ಪರೀಕ್ಷೆ ಸೋರಿಕೆ ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಜೊತೆಗೆ, ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ಕ್ರಮವನ್ನು ಖಂಡಿಸಿ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಅಲ್ಲದೆ, ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸಿರುವುದಾಗಿ ಆರೋಪಿಸಲಾದ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ, ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

## ಅಂತರ ಕಾಲೇಜು 5–ಎ–ಸೈಡ್ ಹಾಕಿ ಟೂರ್ನಿಗೆ ಚಾಲನೆ

ಬೆಂಗಳೂರು: ಖ್ಯಾತ ಕ್ರಿಕೆಟಿಗ ಹಾಗೂ ಮಾಜಿ ಭಾರತೀಯ ಕ್ರಿಕೆಟ್ ತಂಡದ ನಾಯಕ ರಾಹುಲ್ ದ್ರಾವಿಡ್ ಅವರು ಬೆಂಗಳೂರಿನ ಸೇಂಟ್ ಜೋಸೆಫ್ಸ್ ಕಾಲೇಜ್ ಆಫ್ ಕಾಮರ್ಸ್‌ನಲ್ಲಿ ಕೋಲ್ಗೇಟ್ ಟೋಟಲ್ ಅಂತರ ಕಾಲೇಜು 5–ಎ–ಸೈಡ್ ಹಾಕಿ ಟೂರ್ನಿಯನ್ನು ಉದ್ಘಾಟಿಸಿದರು. ಕಾಲೇಜಿನ ವಾಣಿಜ್ಯ ಪದವಿ ಕಾರ್ಯಕ್ರಮದ 75ನೇ ವರ್ಷಾಚರಣೆಯ ಅಂಗವಾಗಿ ಈ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ.




ಜುಲೈ 24 ಮತ್ತು 25ರಂದು ನಡೆಯುತ್ತಿರುವ ಎರಡು ದಿನಗಳ ಪಂದ್ಯಾವಳಿಯನ್ನು 'ಯೆಸ್ ಫಾರ್ ಹಾಕಿ' ಸಹಯೋಗದೊಂದಿಗೆ ಸೇಂಟ್ ಜೋಸೆಫ್ಸ್ ಕಾಲೇಜ್ ಆಫ್ ಕಾಮರ್ಸ್ ಹಳೆಯ ವಿದ್ಯಾರ್ಥಿಗಳ ಸಂಘ ಆಯೋಜಿಸಿದೆ. ಬೆಂಗಳೂರಿನ ವಿವಿಧ ಪ್ರಮುಖ ಕಾಲೇಜುಗಳ ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿವೆ. ಬಾಲಕರ ಲೀಗ್–ಕಮ್–ನಾಕೌಟ್ ವಿಭಾಗದಲ್ಲಿ 12 ತಂಡಗಳು ಹಾಗೂ ಬಾಲಕಿಯರ ರೌಂಡ್–ರಾಬಿನ್ ವಿಭಾಗದಲ್ಲಿ ಐದು ತಂಡಗಳು ಸ್ಪರ್ಧಿಸುತ್ತಿವೆ. ಎರಡೂ ವಿಭಾಗಗಳ ವಿಜೇತ ತಂಡಗಳಿಗೆ 'ಕೋಲ್ಗೇಟ್ ಟೋಟಲ್ ಅಂತರ ಕಾಲೇಜು ಪ್ಲಾಟಿನಂ ರೋಲಿಂಗ್ ಟ್ರೋಫಿ 2026' ನೀಡಿ ಗೌರವಿಸಲಾಗುತ್ತದೆ. ಸೇಂಟ್ ಜೋಸೆಫ್ಸ್ ಕಾಲೇಜ್ ಆಫ್ ಕಾಮರ್ಸ್‌ನ ಹಳೆಯ ವಿದ್ಯಾರ್ಥಿಯಾಗಿರುವ ರಾಹುಲ್ ದ್ರಾವಿಡ್ ಅವರು ಮುಖ್ಯ ಅತಿಥಿಯಾಗಿ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದ್ದರು. ಕ್ರೀಡೆ ಮತ್ತು ಕೋಲ್ಗೇಟ್ ಟೋಟಲ್‌ನ ತತ್ವಗಳನ್ನು ಪ್ರತಿಬಿಂಬಿಸುವ ಶಿಸ್ತು, ನಿರಂತರತೆ ಮತ್ತು ಪ್ರತಿದಿನವೂ ಶ್ರೇಷ್ಠತೆಯನ್ನು ಸಾಧಿಸುವ ಮನೋಭಾವದ ಮಹತ್ವವನ್ನು ಅವರು ಇದೇ ಸಂದರ್ಭದಲ್ಲಿ ಒತ್ತಿ ಹೇಳಿದರು.

## ಜೆ.ಎಲ್.ಆರ್ ಇಂಡಿಯಾದಿಂದ ನಿಶ್ಚಿತ ಬೈಬ್ಯಾಕ್ ಯೋಜನೆ

ಬೆಂಗಳೂರು: ಜೆ.ಎಲ್.ಆರ್ ಇಂಡಿಯಾ ತನ್ನ ನೂತನ ನಿಶ್ಚಿತ ಬೈಬ್ಯಾಕ್ ಯೋಜನೆಯನ್ನು ಪರಿಚಯಿಸಿದ್ದು, ಅರ್ಹ ಗ್ರಾಹಕರಿಗೆ ವಾಹನದ ಎಕ್ಸ್–ಷೋರೂಮ್ ಬೆಲೆಯ ಶೇ. 55ರಷ್ಟು ಕನಿಷ್ಠ ಖಚಿತ ಭವಿಷ್ಯದ ವಾಹನ ಮೌಲ್ಯವನ್ನು ಒದಗಿಸಲಿದೆ. ಭಾರತೀಯ ಮಾರುಕಟ್ಟೆಯನ್ನು ಗಮನದಲ್ಲಿಟ್ಟುಕೊಂಡು ವಿಶೇಷವಾಗಿ ರೂಪಿಸಲಾಗಿರುವ ಈ ಯೋಜನೆ ಆಯ್ದ ರೇಂಜ್ ರೋವರ್, ಡಿಫೆಂಡರ್ ಮತ್ತು ಡಿಸ್ಕವರಿ ಮಾದರಿಗಳಲ್ಲಿ ಲಭ್ಯವಿರಲಿದೆ.

ಉನ್ನತೀಕರಿಸಿದ ಹಣಕಾಸು ಸೌಲಭ್ಯಗಳೊಂದಿಗೆ ಸಂಯೋಜಿಸಲ್ಪಟ್ಟಿರುವ ಈ ಯೋಜನೆಯು ಗ್ರಾಹಕರಿಗೆ ವಾಹನ ಮಾಲೀಕತ್ವದ ಅವಧಿಯಲ್ಲಿ ಹೆಚ್ಚಿನ ಆರ್ಥಿಕ ಅನುಕೂಲ ಮತ್ತು ನಿಶ್ಚಿತತೆ ಒದಗಿಸುವ ಉದ್ದೇಶ ಹೊಂದಿದೆ. ವಾಹನ ಖರೀದಿಸುವ ಆರಂಭಿಕ ಹಂತದಲ್ಲಿಯೇ ಅದರ ಕನಿಷ್ಠ ಭವಿಷ್ಯದ ಮೌಲ್ಯವನ್ನು ಖಚಿತಪಡಿಸುವ ಮೂಲಕ, ವಾಹನದ ಮರುಮಾರಾಟ ಮೌಲ್ಯದ ಕುರಿತು ಗ್ರಾಹಕರಲ್ಲಿರುವ ಅನಿಶ್ಚಿತತೆಯನ್ನು ಕಡಿಮೆ ಮಾಡಲು ಮತ್ತು ಮುಂದಿನ ವಾಹನ ಖರೀದಿ ಅಥವಾ ನವೀಕರಣವನ್ನು ಸುಲಭವಾಗಿ ಯೋಜಿಸಲು ಈ ಯೋಜನೆ ನೆರವಾಗಲಿದೆ.

ಭಾರತೀಯ ಗ್ರಾಹಕರ ಅಗತ್ಯಗಳಿಗೆ ಅನುಗುಣವಾಗಿ ರೂಪಿಸಲಾಗಿರುವ ಈ ಯೋಜನೆಯಲ್ಲಿ ಆಕರ್ಷಕ ಹಣಕಾಸು ಆಯ್ಕೆಗಳೊಂದಿಗೆ ವಾಹನದ ಭವಿಷ್ಯದ ಮೌಲ್ಯವನ್ನು ಮುಂಚಿತವಾಗಿಯೇ ನಿರ್ಧರಿಸಲಾಗುತ್ತದೆ. ಅರ್ಹ ಗ್ರಾಹಕರು ಅನುಕೂಲಕರ ಮಾಲೀಕತ್ವದ ಅವಧಿಯೊಂದಿಗೆ ಎಕ್ಸ್–ಷೋರೂಮ್ ಬೆಲೆಯ ಶೇ. 55ರಷ್ಟು ಕನಿಷ್ಠ ಖಚಿತ ಬೈಬ್ಯಾಕ್ ಮೌಲ್ಯವನ್ನು ಪಡೆಯಬಹುದಾಗಿದೆ. ಆದರೆ ಈ ಸೌಲಭ್ಯವು ವಾಹನದ ಮಾದರಿ, ನಿಗದಿತ ಮೈಲೇಜ್ ಮಿತಿ ಹಾಗೂ ಸಂಬಂಧಿತ ಚಿಲ್ಲರೆ ಮಾರಾಟಗಾರರ ನಿಯಮಗಳು ಮತ್ತು ಷರತ್ತುಗಳಿಗೆ ಒಳಪಟ್ಟಿರುತ್ತದೆ. ಐಷಾರಾಮಿ ವಾಹನ ಖರೀದಿದಾರರು ಸಾಮಾನ್ಯವಾಗಿ ಎದುರಿಸುವ ಪ್ರಮುಖ ಸವಾಲುಗಳಲ್ಲಿ ಒಂದಾದ ವಾಹನದ ಭವಿಷ್ಯದ ಮೌಲ್ಯದ ಅನಿಶ್ಚಿತತೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಈ ನಿಶ್ಚಿತ ಬೈಬ್ಯಾಕ್ ಯೋಜನೆ ಮಹತ್ವದ ಹೆಜ್ಜೆಯಾಗಿದೆ. ಮಾಲೀಕತ್ವದ ಆರಂಭದಲ್ಲಿಯೇ ಕನಿಷ್ಠ ಭವಿಷ್ಯದ ಮೌಲ್ಯ ಖಚಿತವಾಗುವುದರಿಂದ ಗ್ರಾಹಕರು ತಮ್ಮ ಹಣಕಾಸು ಯೋಜನೆಗಳನ್ನು ಹೆಚ್ಚು ಸ್ಪಷ್ಟವಾಗಿ ರೂಪಿಸಿಕೊಳ್ಳಲು ಹಾಗೂ ಭವಿಷ್ಯದಲ್ಲಿ ತಮ್ಮ ವಾಹನವನ್ನು ನವೀಕರಿಸಲು ಹೆಚ್ಚಿನ ಆತ್ಮವಿಶ್ವಾಸ ಹೊಂದಲು ಸಾಧ್ಯವಾಗಲಿದೆ.

ನಿಶ್ಚಿತ ಬೈಬ್ಯಾಕ್ ಯೋಜನೆಯೊಂದಿಗೆ ಉನ್ನತೀಕರಿಸಿದ ಹಣಕಾಸು ಪರಿಹಾರಗಳನ್ನು ಒದಗಿಸುವ ಮೂಲಕ, ರೇಂಜ್ ರೋವರ್, ಡಿಫೆಂಡರ್ ಮತ್ತು ಡಿಸ್ಕವರಿ ವಾಹನಗಳ ಮಾಲೀಕತ್ವವನ್ನು ಭಾರತದಾದ್ಯಂತ ಗ್ರಾಹಕರಿಗೆ ಹೆಚ್ಚು ಅನುಕೂಲಕರ, ಊಹಿಸಬಹುದಾದ ಮತ್ತು ಆರ್ಥಿಕವಾಗಿ ಸುಗಮಗೊಳಿಸುವ ಗುರಿಯನ್ನು ಜೆ.ಎಲ್.ಆರ್ ಇಂಡಿಯಾ ಹೊಂದಿದೆ.

## ಪತ್ರಿಕೋದ್ಯದಲ್ಲಿ ನೈತಿಕತೆ ತರಲು ಮಾಧ್ಯಮ ಆಯೋಗ ಅಥವಾ ಒಂಬುಡ್ಸ್ ಮನ್ ರಚಿಸಿ: ಮುಖ್ಯಮಂತ್ರಿಗೆ ಎಂ.ಎ.ಪೊನ್ನಪ್ಪ ಮನವಿ

ಬೆಂಗಳೂರು,ಜು.23: ಮುದ್ರಣ. ದೂರದರ್ಶನ, ಡಿಜಿಟಲ್ ಸುದ್ದಿ, ಆನ್‌ಲೈನ್ ಪ್ರಕಟಣೆಗಳು ಮತ್ತು ಸಾಮಾಜಿಕ ಮಾಧ್ಯಮ ಸೇರಿದಂತೆ ಎಲ್ಲಾ ವೇದಿಕೆಗಳಲ್ಲಿ ಮಾಧ್ಯಮ ವೃತ್ತಿಪರರ ನಡವಳಿಕೆಯಲ್ಲಿ ಹೊಣೆಗಾರಿಕೆಯನ್ನು ಮೇಲ್ವಿಚಾರಣೆ ಮಾಡಲು ಮಾಧ್ಯಮ ಆಯೋಗ ಅಥವಾ ಒಂಬುಡ್ಸ್ ಮನ್ ಸ್ಥಾಪಿಸಬೇಕೆಂದು ಹಿರಿಯ ಪತ್ರಕರ್ತರ ವೇದಿಕೆ ಅಧ್ಯಕ್ಷ ಎಂ.ಎ. ಪೊನ್ನಪ್ಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ.



ನಗರದಲ್ಲಿಂದು ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿರುವ ಎಂ.ಎ. ಪೊನ್ನಪ್ಪ, ಮಾಧ್ಯಮ ಕ್ಷೇತ್ರದ ಮೇಲ್ವಿಚಾರಣೆ ಮಾಡಲು ಕಾನೂನು, ಶೈಕ್ಷಣಿಕ ಮತ್ತು ತಂತ್ರಜ್ಞಾನ ಕ್ಷೇತ್ರಗಳ ಪ್ರಾತಿನಿಧ್ಯದೊಂದಿಗೆ ನಿವೃತ್ತ ಹೈಕೋರ್ಟ್ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಸ್ವತಂತ್ರ ಮಾಧ್ಯಮ ಆಯೋಗವನ್ನು (ಮಾಧ್ಯಮ ಒಂಬುಡ್ಸ್ ಮನ್) ಸ್ಥಾಪಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಕೋರಿದ್ದಾರೆ.

ಇಂತಹ ಶಾಸನಬದ್ಧ, ಸ್ವಾಯತ್ತ ಸಂಸ್ಥೆಯು ನೈತಿಕ ಪತ್ರಿಕೋದ್ಯಮವನ್ನು ಎತ್ತಿಹಿಡಿಯಲು, ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ರಕ್ಷಿಸಲು ಮತ್ತು ಸ್ವಾತಂತ್ರ್ಯದ ಜವಾಬ್ದಾರಿತನವನ್ನು ಖಚಿತಪಡಿಸಿಕೊಳ್ಳಲು, ತಪ್ಪು ಮಾಹಿತಿ, ಪಾವತಿ ಸುದ್ದಿ, ದ್ವೇಷ ಭಾಷಣ, ಅನೈತಿಕ ವರದಿಗಾರಿಕೆ ತಡೆಯಲು ನಿಷ್ಪಕ್ಷಪಾತವಾಗಿ ಮಾಧ್ಯಮ ಕಾರ್ಯನಿರ್ವಹಿಸಲು ಇಂತಹ ಆಯೋಗದ ಅಗತ್ಯವಿದೆ. ಆಯೋಗವನ್ನು ಸ್ಪಷ್ಟ ಮಾಧ್ಯಮ ನೀತಿಯ ಆಧಾರದ ಮೇಲೆ ರಚಿಸಬೇಕು ಮತ್ತು ಅದರ ಮೂಲ ಉದ್ದೇಶಗಳಲ್ಲಿ ಒಂದು ಪತ್ರಕರ್ತರ ಹಕ್ಕುಗಳನ್ನು ರಕ್ಷಿಸುವ ಕಾನೂನಾಗಿರಬೇಕು. ಎಂದು ಪ್ರತಿಪಾದಿಸಿದ್ದಾರೆ.

ಜೊತೆಗೆ ಹಿರಿಯ ಪತ್ರಕರ್ತರ ಕಲ್ಯಾಣದ ಜೊತೆಗೆ ಅವರ ಘನತೆ ಮತ್ತು ಆರ್ಥಿಕ ಭದ್ರತೆಯನ್ನು ಒದಗಿಸಲು ಕ್ರಮ ತೆಗೆದುಕೊಳ್ಳಬೇಕು. ಹಿರಿಯ ಪತ್ರಕರ್ತರು ಜನರ ಧ್ವನಿಯನ್ನು ಪ್ರತಿನಿಧಿಸುವಲ್ಲಿ ಮತ್ತು ಸಂಸ್ಥೆಗಳನ್ನು ಹೊಣೆಗಾರರನ್ನಾಗಿ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಪತ್ರಿಕೋದ್ಯಮವು ವಾಣಿಜ್ಯ ಹಿತಾಸಕ್ತಿಗಳಿಗಿಂತ ಹೆಚ್ಚಾಗಿ ಸೇವಾ ಮನೋಭಾವದಿಂದ ಪ್ರೇರೇಪಿಸಲ್ಪಟ್ಟಿದ್ದ ಕಾಲಘಟ್ಟದಲ್ಲಿ, ಅನೇಕರು ತಮ್ಮ ಇಡೀ ವೃತ್ತಿಜೀವನವನ್ನು ಸಾರ್ವಜನಿಕ ಸೇವೆಗಾಗಿ ಮುಡಿಪಾಗಿಟ್ಟಿದ್ದಾರೆ. ಅವರು ಹೆಚ್ಚಾಗಿ ಅತ್ಯಲ್ಪ ವೇತನಕ್ಕೆ ಕಠಿಣ ಪರಿಸ್ಥಿತಿಗಳಲ್ಲಿ ಮತ್ತು ಶಾಸನಬದ್ಧ ವೇತನ ರಕ್ಷಣೆಗಳ ಸಂಪೂರ್ಣ ಪ್ರಯೋಜನಗಳಿಲ್ಲದೆ ಸೇವೆ ಸಲ್ಲಿಸಿದ್ದಾರೆ.

ಇಂದು ಅನೇಕ ಹಿರಿಯ ಪತ್ರಕರ್ತರು ಆರ್ಥಿಕ ಸಂಕಷ್ಟ, ಅಸಮರ್ಪಕ ಆರೋಗ್ಯ ಸೇವೆಗಳು ಮತ್ತು ಪದೇಪದೇ ಆಡಳಿತಾತ್ಮಕ ತೊಂದರೆಗಳನ್ನು ಎದುರಿಸುತ್ತಿದ್ದಾರೆ. ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಪಡೆಯಲು ಅವರು ಅನೇಕ ಅಧಿಕಾರಿಗಳ ಬಳಿ ಅಲೆಯಬೇಕಾದ ಅನಿವಾರ್ಯತೆಗೆ ಸಿಲುಕಿದ್ದಾರೆ. ಸುಸ್ಥಿರ ಪಿಂಚಣಿ ಯೋಜನೆ, ಕೈಗೆಟುಕುವ ದರದಲ್ಲಿ ಆರೋಗ್ಯ ಸೇವೆಗಳ ಲಭ್ಯತೆ, ಗೌರವಧನ ಮತ್ತು ರಾಜ್ಯಮಟ್ಟದ ಮಾನ್ಯತೆ ನೀಡಲು ಕ್ರಮ ತೆಗೆದುಕೊಳ್ಳಬೇಕು.

ಸ್ವತಂತ್ರ ಪತ್ರಕರ್ತರ ಮಾನ್ಯತಾ ಪತ್ರದ ಪ್ರಕ್ರಿಯೆಯ ಸರಳೀಕರಣಗೊಳಿಸಬೇಕು. 25 ವರ್ಷಗಳಿಗೂ ಹೆಚ್ಚು ವೃತ್ತಿಪರ ಸೇವೆ ಸಲ್ಲಿಸಿರುವ ಅನೇಕ ಹಿರಿಯ ಪತ್ರಕರ್ತರು ವಾರ್ಷಿಕ ನವೀಕರಣದ ಸಮಯದಲ್ಲಿ ಅನಗತ್ಯ ಅಧಿಕಾರಶಾಹಿ ಅಡೆತಡೆಗಳು ಮತ್ತು ಅಸಮರ್ಪಕ ನಡವಳಿಕೆಗಳನ್ನು ಎದುರಿಸುತ್ತಿದ್ದಾರೆ. ಸೂಕ್ತ ವೃತ್ತಿಪರ ಮಾನದಂಡಗಳು ಮತ್ತು ಪರಿಶೀಲನೆಗೆ ಒಳಪಟ್ಟು. ಅರ್ಹ ಹಿರಿಯ ಪತ್ರಕರ್ತರಿಗೆ ದೀರ್ಘಾವಧಿಯ, ಜೀವಿತಾವಧಿಯ ಅಥವಾ ಸರಳೀಕೃತ ಮಾನ್ಯತಾ ಪ್ರಕ್ರಿಯೆಯನ್ನು ಪರಿಚಯಿಸಬೇಕೆಂದು ಎಂ.ಎ. ಪೊನ್ನಪ್ಪ ಮನವಿ ಮಾಡಿದ್ದಾರೆ.

## ಫಲವತ್ತತೆ ಆರೈಕೆ ಕ್ಷೇತ್ರದ ಸಬಲೀಕರಣಕ್ಕೆ 'ಓಯಸಿಸ್ ಅಕಾಡೆಮಿ' ಘೋಷಣೆ

ಬೆಂಗಳೂರು: ಕುಟುಂಬ ಯೋಜನೆ ಮತ್ತು ಸಂತಾನೋತ್ಪತ್ತಿ ಆರೋಗ್ಯಕ್ಕೆ ಸಂಬಂಧಿಸಿದ ಸವಾಲುಗಳ ಕುರಿತು ಸಾರ್ವಜನಿಕ ಆರೋಗ್ಯ ತಜ್ಞರು, ಸರ್ಕಾರದ ಪ್ರತಿನಿಧಿಗಳು, ಮನಶ್ಶಾಸ್ತ್ರಜ್ಞರು, ಮಾನವ ಸಂಪನ್ಮೂಲ ಕ್ಷೇತ್ರದ ನಾಯಕರು ಹಾಗೂ ಸಂತಾನೋತ್ಪತ್ತಿ ವೈದ್ಯಕೀಯ ತಜ್ಞರು ಒಂದೇ ವೇದಿಕೆಯಲ್ಲಿ ಮಹತ್ವದ ಚರ್ಚೆ ನಡೆಸಿದರು.

ಪ್ರತಿಷ್ಠಿತ ಓಯಸಿಸ್ ಫರ್ಟಿಲಿಟಿ ಸಂಸ್ಥೆ ಆಯೋಜಿಸಿದ್ದ ಸಾರ್ವಜನಿಕ ಹಿತಾಸಕ್ತಿ ವೇದಿಕೆಯಾದ 'ಜನನಿ ಡೈಲಾಗ್ಸ್' ಸಂವಾದ ಕಾರ್ಯಕ್ರಮ ಬೆಂಗಳೂರಿನಲ್ಲಿ ಯಶಸ್ವಿಯಾಗಿ ನಡೆಯಿತು. ಇದೇ ಸಂದರ್ಭದಲ್ಲಿ ಫಲವತ್ತತೆ ಆರೈಕೆ ಕ್ಷೇತ್ರವನ್ನು ಮತ್ತಷ್ಟು ಸಬಲೀಕರಣಗೊಳಿಸುವ ಉದ್ದೇಶದಿಂದ 'ಓಯಸಿಸ್ ಅಕಾಡೆಮಿ' ಸ್ಥಾಪಿಸುವುದಾಗಿ ಸಂಸ್ಥೆ ಘೋಷಿಸಿತು.

'ಪೋಷಕತ್ವದ ವಿರೋಧಾಭಾಸ: ಕುಟುಂಬ–ಸ್ನೇಹಿ ಭಾರತದ ನಿರ್ಮಾಣ' ಎಂಬ ವಿಷಯದಡಿ ನಡೆದ ಸಂವಾದದಲ್ಲಿ ವೈದ್ಯಕೀಯ ವೃತ್ತಿಪರರು,




ಹಿರಿಯ ವೈದ್ಯರು ಹಾಗೂ ಗಣ್ಯರು ಭಾಗವಹಿಸಿದ್ದರು. ಭಾರತದಲ್ಲಿ ಕುಟುಂಬ–ಸ್ನೇಹಿ ವಾತಾವರಣ


ನಿರ್ಮಿಸಲು ಅಗತ್ಯವಿರುವ ಕ್ರಮಗಳ ಕುರಿತು ಕಾರ್ಯಕ್ರಮದಲ್ಲಿ ಸುದೀರ್ಘ ಚರ್ಚೆ ನಡೆಯಿತು. ಕುಟುಂಬ ನಿರ್ಮಾಣಕ್ಕೆ ಸಂಬಂಧಿಸಿದಂತೆ ಭಾರತೀಯ ಸಮಾಜದಲ್ಲಿ ನಡೆಯುತ್ತಿರುವ ಬದಲಾವಣೆಗಳು, ದಂಪತಿಗಳ ಆದ್ಯತೆಗಳು ಮತ್ತು ಭವಿಷ್ಯದ ಸವಾಲುಗಳ ಕುರಿತು ತಜ್ಞರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಈ ಕಾರ್ಯಕ್ರಮವು ರಾಷ್ಟ್ರೀಯ ಮಟ್ಟದಲ್ಲಿ ನಡೆಯುತ್ತಿರುವ ಮಹತ್ವದ ಸಂವಾದದ ಭಾಗವಾಗಿದ್ದು, ಹೈದರಾಬಾದ್‌ನಲ್ಲಿ ನಡೆದ ಮುಖ್ಯ ಸಂವಾದವನ್ನು ನೇರಪ್ರಸಾರದ ಮೂಲಕ ಬೆಂಗಳೂರು ಸೇರಿದಂತೆ ದೇಶದ ಹಲವು ನಗರಗಳಿಗೆ ಏಕಕಾಲದಲ್ಲಿ ಪ್ರಸಾರ ಮಾಡಲಾಯಿತು.

ಇದರಿಂದ ದೇಶದ ವಿವಿಧ ಭಾಗಗಳಲ್ಲಿರುವ ವೀಕ್ಷಕರು ಮತ್ತು ಭಾಗವಹಿಸುವವರು ಒಂದೇ ವೇದಿಕೆಯ ಮೂಲಕ ಚರ್ಚೆಯಲ್ಲಿ ಪಾಲ್ಗೊಳ್ಳಲು ಅವಕಾಶ ದೊರೆಯಿತು.

## 'ಗೋವಿಂದ: ನಂಬಿಕೆಯ ಕಥೆ' ವಿಷಯಾಧಾರಿತ ಭರತನಾಟ್ಯ ಪ್ರದರ್ಶನ

ಬೆಂಗಳೂರು: ಎಆರ್‌ಟಿಎಂಒಎಸ್ ಸಂಸ್ಥೆಯ ವತಿಯಿಂದ ಯುವ ಹಾಗೂ ಪ್ರತಿಭಾವಂತ ಭರತನಾಟ್ಯ ಕಲಾವಿದೆ ನೀತಾರಾ ನಾಯರ್ ಅಭಿನಯಿಸುವ 'ಗೋವಿಂದ: ನಂಬಿಕೆಯ ಕಥೆ' ಎಂಬ ಮೂಲ ಭರತನಾಟ್ಯ ನೃತ್ಯ ನಿರ್ಮಾಣ ಬೆಂಗಳೂರಿನಲ್ಲಿ ಪ್ರದರ್ಶನಗೊಳ್ಳಲಿದೆ. ಖ್ಯಾತ ಭರತನಾಟ್ಯ ಕಲಾವಿದೆ ಪೂಜಾ ಉಣ್ಣಿ ಅವರ ಪರಿಕಲ್ಪನೆ, ನೃತ್ಯ ಸಂಯೋಜನೆ ಮತ್ತು ನಿರ್ದೇಶನದಲ್ಲಿ ಮೂಡಿಬಂದಿರುವ ಈ ವಿಶೇಷ ನೃತ್ಯ ಪ್ರದರ್ಶನವು ಜುಲೈ 25ರಂದು ಬೆಂಗಳೂರು ಇಂಟರ್‌ನ್ಯಾಷನಲ್ ಸೆಂಟರ್‌ನಲ್ಲಿ ನಡೆಯಲಿದೆ.




'ಗೋವಿಂದ: ನಂಬಿಕೆಯ ಕಥೆ' ಭಕ್ತಿ, ಹಂಬಲ, ಆತ್ಮಸಾಕ್ಷಾತ್ಕಾರ ಮತ್ತು ಸಂಪೂರ್ಣ ಶರಣಾಗತಿಯ ಪಯಣವನ್ನು ಅಭಿವ್ಯಕ್ತಿಸುವ ಚಿಂತನಶೀಲ ಹಾಗೂ ಅನುಭವಾತ್ಮಕ ನೃತ್ಯ ನಿರ್ಮಾಣವಾಗಿದೆ.

ಐದು ಅಧ್ಯಾಯಗಳಾದ ಹಂಬಲ, ಆಹ್ವಾನ, ಆತ್ಮಸಾಕ್ಷಾತ್ಕಾರ, ಪಯಣ ಮತ್ತು ಶರಣಾಗತಿ ಎಂಬ ಹಂತಗಳಲ್ಲಿ ಕೃತಿಯನ್ನು ಹೆಣೆಯಲಾಗಿದೆ. ಮುಗ್ಧ ಕುತೂಹಲದಿಂದ ಆರಂಭವಾಗುವ ಒಬ್ಬ ಯುವ ಅನ್ವೇಷಕನ ಆಂತರಿಕ ಪಯಣವು ಹೇಗೆ ಆಳವಾದ ಆಧ್ಯಾತ್ಮಿಕ ಅನ್ವೇಷಣೆಯಾಗಿ ರೂಪಾಂತರಗೊಳ್ಳುತ್ತದೆ ಎಂಬುದನ್ನು ನೃತ್ಯ ಪ್ರದರ್ಶನದ ಮೂಲಕ ಅನಾವರಣಗೊಳಿಸಲಾಗುತ್ತದೆ.

ಸಾಂಪ್ರದಾಯಿಕ ಮಾರ್ಗಂ ವಿನ್ಯಾಸವನ್ನು ಮೀರಿ, 'ಗೋವಿಂದ' ಸಂಪೂರ್ಣವಾಗಿ ಹೊಸದಾಗಿ ರಚಿಸಲಾದ ಸಂಗೀತ ಸಂಯೋಜನೆಯೊಂದಿಗೆ ಮೂಡಿಬಂದಿದೆ.

ಲಯ, ಭಾವಪೂರ್ಣ ಕಥನ ಮತ್ತು ರಂಗ ವಿನ್ಯಾಸವನ್ನು ಸಮನ್ವಯಗೊಳಿಸಿರುವ ಈ ನೃತ್ಯ ನಿರ್ಮಾಣದಲ್ಲಿ ತೆಲುಗು, ಸಂಸ್ಕೃತ ಮತ್ತು ಇಂಗ್ಲಿಷ್ ಭಾಷೆಗಳ ಬಳಕೆಯಿದೆ.

ಭರತನಾಟ್ಯದ ಶಾಸ್ತ್ರೀಯ ನೆಲೆಯನ್ನು ಅಚಲವಾಗಿ ಉಳಿಸಿಕೊಂಡು, ಭಾವನಾತ್ಮಕ ಹಾಗೂ ಆಧ್ಯಾತ್ಮಿಕ ಕಥನವನ್ನು ವೈವಿಧ್ಯಮಯ ಹಿನ್ನೆಲೆಯ ಪ್ರೇಕ್ಷಕರಿಗೂ ಸುಲಭವಾಗಿ ತಲುಪಿಸುವ ಉದ್ದೇಶವನ್ನು ಈ ಕೃತಿ ಹೊಂದಿದೆ.

# ಕುಡಿಯುವ ನೀರಿನ ನಿರ್ವಹಣೆಗೆ ಕಟ್ಟುನಿಟ್ಟಿನ ಕ್ರಮ: ಡಿಸಿಎಂ ಜಿ.ಪರಮೇಶ್ವರ

ಚಿಕ್ಕಬಳ್ಳಾಪುರ

ಕುಡಿಯುವ ನೀರಿನ ಸಮರ್ಪಕ ಪೂರೈಕೆಗಾಗಿ ಪ್ರತಿ ತಾಲ್ಲೂಕಿಗೆ 1 ಕೋಟಿ ರೂ. ನೀಡಲಾಗುತ್ತಿದೆ. ಜನರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಆದ್ಯತೆಯ ಮೇರೆಗೆ ಬರ ಪರಿಸ್ಥಿತಿ ಎದುರಿಸುವ ನಿಟ್ಟಿನಲ್ಲಿ ಕೆಲಸ ಮಾಡಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು.

ಜಿಲ್ಲಾ ಪಂಚಾಯತ್‌ನ ಸರ್‌ಎಂವಿ ಸಭಾಂಗಣದಲ್ಲಿ ಜಿಲ್ಲೆಯ ಬರ ಪರಿಸ್ಥಿತಿ ಹಾಗೂ ಕಂದಾಯ ವಿಷಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗಾರರನ್ನುದ್ದೇಶಿಸಿ ಅವರು ಮಾತನಾಡಿ, ಜಿಲ್ಲಾಧಿಕಾರಿಗಳ ಪಿಡಿ ಅಕೌಂಟ್‌ನಲ್ಲಿ 11 ಕೋಟಿ ರೂ. ಇದೆ. ಸಂದರ್ಭಕ್ಕೆ ಅನುಸಾರವಾಗಿ ಜನ ಮತ್ತು ಜಾನುವಾರುಗಳ ಕುಡಿಯುವ ನೀರಿಗಾಗಿ ಹಣ ಖರ್ಚು ಮಾಡುವಂತೆ ಸೂಚಿಸಲಾಗಿದೆ. ಜಿಲ್ಲೆಯಲ್ಲಿ ರೈತರಿಗೆ ಸಮರ್ಪಕವಾಗಿ ಮೇವಿನ ಕಿಟ್ ವಿತರಿಸುವ ಕೆಲಸ ಮಾಡಿದ್ದಾರೆ. ರೈತರು ಹೆಚ್ಚು ಮೇವು ಬೆಳೆದರೆ, ಅವರಿಗೆ ಹಣ ಕೊಟ್ಟು ಖರೀದಿಸಲಾಗುವುದು ಎಂದು ತಿಳಿಸಿದರು.

ವಿಬಿಜಿ ರಾಮ್ ಜಿ. ಯೋಜನೆಗೆ ಹಣ ಕೊಡುತ್ತೇವೆ. ಇದಕ್ಕೆ ಯಾವುದೇ ರೀತಿಯ ಹಣದ ಕೊರತೆ ಇಲ್ಲ. ಜಿಲ್ಲೆಯಲ್ಲಿ ಹೆಚ್ಚಿನ ರೀತಿಯಲ್ಲಿ ರೇಷ್ಮೆ, ಹೂ ತೋಟ ಸೇರಿದಂತೆ ತೋಟಗಾರಿಕೆ ಬೆಳೆ ಇದೆ. ಇದಕ್ಕೆ ಪ್ರೋತ್ಸಾಹಿಸಲು ಸಭೆಯಲ್ಲಿ ತಿಳಿಸಲಾಗಿದೆ ಎಂದು



ಮಾಹಿತಿ ನೀಡಿದರು.

ವಿವಿಧ ನೀರಾವರಿ ವ್ಯಾಲಿ ಯೋಜನೆಗಳಿಂದ ಜಿಲ್ಲೆಯ 80 ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ. ಟರ್ಷಿಯರಿ ಟ್ರೀಟ್ಮೆಂಟ್ ಮಾಡಿ ನೀರು ಪೂರೈಸುವಂತೆ ಶಾಸಕರು ಸಲಹೆ ನೀಡಿದ್ದಾರೆ. ಈ ಬಗ್ಗೆ ಸರ್ಕಾರದ ಹಂತದಲ್ಲಿ ಚರ್ಚೆಯಾಗುತ್ತಿದ್ದು, ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಬರ ಪರಿಸ್ಥಿತಿಯನ್ನು ಹೆಚ್ಚು ಗಂಭೀರವಾಗಿ ಪರಿಗಣಿಸಿ, ಕೆಲಸ ಮಾಡಬೇಕು. ಬೆಳೆ ವಿಮೆ ನೋಂದಣಿ ಮಾಡಿಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ರಾಜ್ಯದ ಪರಿಸ್ಥಿತಿಯ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಕೇಂದ್ರದ ಗೃಹ ಸಚಿವರು ಹಾಗೂ ಕೃಷಿ ಸಚಿವರಿಗೆ ಪತ್ರ ಬರೆದು, ಒತ್ತಾಯಿಸಿದ್ದೇನೆ ಎಂದು ಹೇಳಿದರು. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 35 ಸಾವಿರ ಇ-ಪೌತಿ ಪ್ರಕರಣಗಳು ಬಾಕಿ ಇವೆ. ಎರಡು ತಿಂಗಳೊಳಗಾಗಿ ಪೂರ್ಣಗೊಳಿಸಬೇಕು. 1.9 ಲಕ್ಷ ಕಂದಾಯ ಗ್ರಾಮದ ಹಕ್ಕು ಪತ್ರಗಳನ್ನು ವಿತರಿಸಬೇಕು. ಹಕ್ಕು ಪತ್ರ ವಿತರಣೆಗೆ ಮುಖ್ಯಮಂತ್ರಿಗಳು ಆಗಮಿಸಲಿದ್ದು, ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ರೈತರಿಗೆ ಬ್ಯಾಂಕ್‌ಗಳಿಂದ ನೋಟಿಸ್ ನೀಡುತ್ತಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಶೀಘ್ರದಲ್ಲಿ ಬ್ಯಾಂಕ್‌ನವರೊಂದಿಗೆ ಸಭೆ ನಡೆಸಲಾಗುವುದು. ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳು ಸ್ಥಗಿತವಾಗಿವೆ. ರೈತರಿಗೆ ಯಾವುದೇ ರೀತಿಯ ತೊಂದರೆ ಆಗಬಾರದು ಎಂದು ಸೂಚನೆ ನೀಡುತ್ತೇವೆ ಎಂದ ಅವರು ನಾನು ಮತ್ತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬರ ಪರಿಸ್ಥಿತಿಯ ಕುರಿತು ಎಷ್ಟು ಸಭೆಗಳನ್ನು ಮಾಡಿದ್ದೇವೆ ಎಂಬುದರ ಲೆಕ್ಕ ಕೊಡುತ್ತೇವೆ. ರಾಜ್ಯದಲ್ಲಿ ಬರ ಇರುವುದರಿಂದ ಮುಖ್ಯಮಂತ್ರಿಗಳು ಪ್ರವಾಸ ಕೈಗೊಂಡು, ಕಲಬುರಗಿ, ಬೆಳಗಾವಿ ಕಂದಾಯ ವಿಭಾಗದ ಸಭೆ ನಡೆಸಿದ್ದಾರೆ ಎಂದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ಅಧ್ಯಕ್ಷ ಡಾ. ಬಿ.ಸಿ. ಮುದ್ದು ಗಂಗಾಧರ್, ಆಂಜಿನಪ್ಪ, ಬಿ.ಜೆ.ಗಣೇಶ್, ಗೊಲ್ಲಹಳ್ಳಿ ಶಿವಪ್ರಸಾದ್, ಪ್ರದೀಪ್ ಈಶ್ವರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ಬಿ.ಎನ್. ರವಿಕುಮಾರ್, ಡಾ. ಎನ್.ಮಂಜುಳಾ, ಮನೋಜ್ ಕುಮಾರ್ ಮೀನಾ, ಜಿಲ್ಲಾಧಿಕಾರಿ ಜಿ.ಪ್ರಭು, ಡಾ. ವೈ. ನವೀನ್ ಭಟ್, ಕೆ.ಎನ್.ಕೇಶವರೆಡ್ಡಿ, ಯಲುವಹಳ್ಳಿ ಎನ್.ರಮೇಶ್ ಸೇರಿ ಇತರರು ಇದ್ದರು.

## ರೈತನ ಜಮೀನಿಗೆ ಆನೆ ದಾಳಿ



ಕನಕಪುರ

ಕಾಡಾನೆ ದಾಳಿಯಿಂದ ರೈತನ ಜಮೀನಿನಲ್ಲಿ ಬೆಳದು ನಿಂತಿದ್ದ ಅಪಾರ ಪ್ರಮಾಣದ ಬೆಳೆ ನಾಶವಾಗಿ ರುವ ಘಟನೆ ತಾಲ್ಲೂಕಿನಲ್ಲಿ ನಡೆದಿದೆ.

ತಾಲ್ಲೂಕಿನ ಕಸಬಾ, ಹೋಬಳಿ ನಿಡಗಲ್ಲು ಗ್ರಾಮದ ರೈತ ಶ್ರೀನಿವಾಸ್ ರವರ ಜಮೀನಿಗೆ ಗುರುವಾರ ಬೆಳ್ಳಗೆ ದಾಳಿ ಮಾಡಿರುವ ಕಾಡಾನೆ ಸುಮಾರು ಎರಡು ಎಕರೆ ಜಮೀನಿ ನಲ್ಲಿ ಬೆಳೆದು ನಿಂತಿದ್ದ ತೆಂಗು, ಬಾಳೆ, ಅಡಕೆ ಮರಗಳನ್ನು ನಾಶ ಮಾಡಿರುವುದರಿಂಅದ ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿದೆ. ಮಳೆಯಿಲ್ಲದೇ ಈಗಾಗಲೇ ರೈತರು ಕಷ್ಟಕ್ಕೆ ತುತ್ತಾಗಿದ್ದು, ಈ ವೇಳೆ ಕಾಡಾನೆಗಳ ದಾಳಿಯಿಂದ ಬೆಳೆದ ಅಲ್ಪ ಸ್ವಲ್ಪ ಬೆಳೆಗಳು ನಾಶವಾಗುತ್ತಿರುವುದರಿಂದ ಗ್ರಾಮಸ್ಥರು ರೋಸಿ ಹೋಗಿದ್ದು ರಾಜ್ಯ ಸರ್ಕಾರ ಹಾಗೂ ಅರಣ್ಯ ಅಧಿಕಾರಿಗಳು ಎಚ್ಚೆತ್ತುಕೊಂಡು ಕಾಡು ಪ್ರಾಣಿಗಳು ಹಾವಳಿಗೆ ಶಾಶ್ವತ ಪರಿಹಾರ ನೀಡುವ ಮೂಲಕ ರೈತರ ಜೀವ ಹಾಗು ಜೀವನಕ್ಕೆ ನೆರವಾಗುವಂತೆ ಒತ್ತಾಯಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

ರಾಮನಗರ

66/11 ಕೆವಿ ಮೆಳೆಹಳ್ಳಿ ವಿದ್ಯುತ್ ಉಪಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಮೆಳೆಹಳ್ಳಿ, ಹರೀಸಂದ್ರ, ತಿಮ್ಮಸಂದ್ರ, ಅಂಕನಹಳ್ಳಿ, ಮದರಸಾಬರದೊಡ್ಡಿ, ಲಕ್ಕಸಂದ್ರ, ಪಾದರಹಳ್ಳಿ, ರಾಂಪುರ, ಲಕ್ಷ್ಮೀಪುರ, ಸುಗ್ಗನಹಳ್ಳಿ, ಗುಂಗರಹಳ್ಳಿ, 66ಕೆವಿ ಅದಾನಿ ಸೋಲಾರ್ ಐ.ಪಿ.ಪಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜು. 24ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 27 ರಿಂದ 3 ದಿನಗಳ ಸಂಗೀತೋತ್ಸವ



ಚಿಂತಾಮಣಿ

ಜುಲೈ 27 ರಿಂದ 29 ರವರೆಗೆ ಶ್ರೀಕ್ಷೇತ್ರ ಕೈವಾರದ ಸದ್ಗುರು ಶ್ರೀಯೋಗಿನಾರಾಯಣ ತಾತಯ್ಯನವರ ಸನ್ನಿಧಿಯಲ್ಲಿ ಶ್ರದ್ಧಾಭಕ್ತಿಗಳಿಂದ ಗುರುಪೂಜಾ ಸಂಗೀತೋತ್ಸವವನ್ನು ಆಚರಿಸಲಾಗುವುದೆಂದು ಶ್ರೀಕ್ಷೇತ್ರ ಕೈವಾರ ಶ್ರೀ ಯೋಗಿನಾರೇಯಣ ಮಠದ ಸಂಕೀರ್ತನಾ ಯೋಜನೆ ಸಂಚಾಲಕ ವಾನರಾಶಿ ಬಾಲಕೃಷ್ಣ ಭಾಗವತರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸದ್ಗುರು ಕೈವಾರ ತಾತಯ್ಯನವರ 300 ನೇ ಜಯಂತಿಯನ್ನು ವರ್ಷಪೂರ್ತಿ ಶ್ರೀಮಠದ ವತಿಯಿಂದ ಆಚರಿಸಲಾಗುತ್ತಿದ್ದು, ಈ ಸಂಗೀತೋತ್ಸವವು ಈ ಭಾಗದ ಪ್ರಮುಖ ಸಾಂಸ್ಕೃತಿಕ ಹಬ್ಬವಾಗಿದೆ. ಜುಲೈ 27 ರಂದು ಪ್ರಾತಃಕಾಲದಲ್ಲಿ ಘಂಟಾನಾದ, ಸುಪ್ರಭಾತ, ಗೋಪೂಜೆ ಹಾಗೂ ಧರ್ಮಾಧಿಕಾರಿ ಡಾ. ಎಂ.ಆರ್.ಜಯರಾಮ್ ನೇತೃತ್ವದಲ್ಲಿ ಸಾಮೂಹಿಕ ನಾಮ ಸಂಕೀರ್ತನೆಯೊಂದಿಗೆ ಸಂಗೀತೋತ್ಸವಕ್ಕೆ ಚಾಲನೆ ನೀಡಲಾಗುತ್ತದೆ. ಅಂದು ಸಂಜೆ ದೆಹಲಿಯ ಸರಸ್ವತಿ ರಾಜಗೋಪಾಲನ್ ರಿಂದ ವೀಣಾವಾದನ, ಮಹಾಲಿಂಗಯ್ಯ ಮಠದ್ ತಂಡದವರಿಂದ ಗಾಯನ, ಹಾಗೂ ಬೆಂಗಳೂರಿನ ವಿನಯ್‌ಶರ್ಮ ಮತ್ತು ತಿರುಪತಿಯ ಬಿ.ರಘುನಾಥ್ ರವರಿಂದ ಗಾಯನ ಕಾರ್ಯಕ್ರಮ ಜರುಗಲಿದೆ.

ಇದೇ 28 ರಂದು ಸುಮಂತ್ ಹಾಗೂ ಮಾಳವಿರಿಂದ ಪಿಟೀಲು ಸೋಲೋ, ಶಂಕರ್ ನಂಬೂದರಿ ರಿಂದ ಗಾಯನ, ಅಮಿತ್ ಎ.ನಾಡಿಗೆ ರಿಂದ ಕೊಳಲುವಾದನ, ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ತಂಡದಿಂದ ಗಾಯನ, ಹೈದರಾಬಾದಿನ ಎಸ್. ಎಂ.ಸುಭಾನಿರಿಂದ ಮ್ಯಾಂಡೋಲಿನ್ ವಾದನ ಹಾಗೂ ನೂಪುರ ಫೈನ್ ಆರ್ಟ್ಸ್ ರೂಪರಾಜೇಶ್ ತಂಡದಿಂದ ಕೂಚಿಪುಡಿ ನೃತ್ಯರೂಪಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇದೇ 29ರಂದು ಗುರುಪೂರ್ಣಿಮೆ ದಿನದಂದು ಬೆಳಿಗ್ಗೆ 10 ಗಂಟೆಗೆ ನಾಡಿನ ಪ್ರಸಿದ್ಧ ವಿದ್ವಾಂಸರಿಂದ ತಾತಯ್ಯನವರು ರಚಿಸಿರುವ ಪಂಚರತ್ನ ಕೀರ್ತನೆಗಳ ಗೋಷ್ಠಿಗಾಯನ ಹಾಗೂ ವಿಶೇಷ ಗುರುಪೂಜೆ ನಡೆಯಲಿದೆ. ಅಂದು ಸಂಜೆ ವಿಶೇಷ ಕಾರ್ಯಕ್ರಮಗಳಲ್ಲಿ ಎ.ಸಿ.ರಾಜಶೇಖರ್ ತಂಡದಿಂದ ನಾದಸ್ವರ-ತವಿಲ್ ವಾದನ, ಕೋಲಾರದ ಡಿ.ಆರ್.ರಾಜಪ್ಪ ತಂಡದಿಂದ ಗಾಯನ, ವಿಶಾಖಪಟ್ಟಣಂ ಪಂತುಲ ರಮಾ ಗಾಯನ, ಕೇರಳದ ಕೆ.ಎಸ್.ವಿಷ್ಣುದೇವ್ ಗಾಯನ, ಮೈಸೂರು ನಾಗರಾಜ್ ಮತ್ತು ಡಾ॥ ಮೈಸೂರು ಮಂಜುನಾಥ್ ರಿಂದ ಪಿಟೀಲು ಸೋಲೋ, ನಯನಾ ರಮೇಶ್ ಭರತನಾಟ್ಯ, ಕೇರಳದ ಕಣ್ಣನ್ ಮತ್ತು ಆನಂದ್ ನಾದಸ್ವರ ಹಾಗೂ ಶ್ರೀಲಂಕಾದ ಬದಲಿಶಂಕರ್ ಹಾಗೂ ವಿಲಂಬಾಕಂ ಗಣಪತಿರಿಂದ ತವಿಲ್ ವಾದನ ಕಾರ್ಯಕ್ರಮವಿರುತ್ತದೆ.

ಈ ಮೂರು ದಿನಗಳ ಕಾಲ ಪ್ರತಿನಿತ್ಯ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳ ಹಾಗೂ ನಾಡಿನ ಹೆಸರಾಂತ ಕಲಾವಿದರಿಂದ ಸಂಗೀತ ಕಚೇರಿ, ನಾದಸ್ವರ-ತವಿಲ್ ವಾದನ, ಭರತನಾಟ್ಯ, ಹರಿಕಥೆ, ಬುರಕಥೆ ಹಾಗೂ ಸಾವಿರಾರು ಭಜನಾ ಕಾರ್ಯಕ್ರಮಗಳೊಂದಿಗೆ ನಿರಂತರವಾಗಿ 72 ಗಂಟೆಗಳ ನಾದೋಪಾಸನೆ ಜರುಗಲಿದೆಯೆಂದರು.

ಈ ಪತ್ರಿಕಾ ಗೋಷ್ಠಿಯಲ್ಲಿ ಶ್ರೀಕ್ಷೇತ್ರ ಕೈವಾರ ಶ್ರೀಯೋಗಿನಾರೇಯಣ ಮಠದ ಉಪಾಧ್ಯಕ್ಷ ಜೆ ವಿಭಾಕರರೆಡ್ಡಿ, ಪ್ರವಚನಾಕಾರ ತಳಗವಾರ ಆನಂದ್, ವೆಂಕಟರವಣಪ್ಪ ಹಾಗೂ ಸಿಬ್ಬಂದಿ ಇದ್ದರು.

## ‘ಕನ್ನಡ ಕಾವ್ಯಗಳಲ್ಲಿ ಪರಿಸರ ಪ್ರಜ್ಞೆ ಬೆಳೆಸಿಕೊಳ್ಳಬೇಕು’

ಬಂಗಾರಪೇಟೆ

ಪರಿಸರದ ಬಗೆಗಿನ ಕಾಳಜಿ ಮನೆಗಳಿಂದಲೇ ಆರಂಭವಾಗಿ ಜಗತ್ತಿನ ಸುಸ್ಥಿರ ನೆಲೆಗೆ ಕಾರಣವಾಗಬೇಕು. ಪಂಪ, ರನ್ನ, ಪೊನ್ನ, ಕೆ.ಎಸ್. ನರಸಿಂಹಸ್ವಾಮಿ ಮೊದಲಾದ ಕನ್ನಡ ಕವಿಗಳು ತಮ್ಮ ಕಾವ್ಯಗಳಲ್ಲಿ ಪರಿಸರದ ಬಗ್ಗೆ ಅಭಿಮಾನ, ಗೌರವ ಹಾಗೂ ಕಾಳಜಿಯನ್ನು ವ್ಯಕ್ತಪಡಿಸಿದ್ದಾರೆ ಎಂದು ಸಾಹಿತಿ ಡಾ. ಶ್ರೀನಿವಾಸ ಪ್ರಸಾದ್ ಹೇಳಿದರು.

ಬಂಗಾರಪೇಟೆಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಹಾಗೂ ಚಕೋರ ಬಳಗದ ಸಹಯೋಗದಲ್ಲಿ ಆಯೋಜಿಸಿದ್ದ ‘ಕನ್ನಡ ಕಾವ್ಯಗಳಲ್ಲಿ ಪರಿಸರದ ಪ್ರಜ್ಞೆ’ ವಿಷಯದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮುಖ್ಯ ಉಪನ್ಯಾಸ ನೀಡಿ ಮಾತನಾಡಿದರು.

ಈ ವೇಳೆ ಚಕೋರ ಬಳಗದ ಸಂಸ್ಥಾಪಕ ಅಧ್ಯಕ್ಷ ಜ.ಮು. ಚಂದ್ರ ಮಾತನಾಡಿ, ವಿದ್ಯಾರ್ಥಿಗಳ ಮನಸ್ಸು ರೂಪುಗೊಳ್ಳುವ ಹಂತದಲ್ಲಿದ್ದು, ಈಗಿನಿಂದಲೇ ಪರಿಸರದ ಬಗ್ಗೆ ಕರ್ತವ್ಯಪ್ರಜ್ಞೆ ಬೆಳೆಸಿಕೊಂಡು ನಾಡು ಹಾಗೂ ದೇಶಕ್ಕೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.



ಕಾರ್ಯಕ್ರಮವನ್ನು ಉದ್ಘಾಟಿಸಿದ ಅನಿಕೇತನ ಬಳಗದ ಎಂ.ಎಸ್. ರಾಮಪ್ರಸಾದ್, ಬಂಗಾರಪೇಟೆ ಹಾಗೂ ಕೋಲಾರ ಜಿಲ್ಲೆಯಲ್ಲಿ ಹಲವು ದಶಕಗಳಿಂದ ನಡೆಸಿಕೊಂಡು ಬಂದ ಕನ್ನಡಪರ ಕಾರ್ಯಕ್ರಮಗಳನ್ನು ಸ್ಮರಿಸಿ, ಇಂದಿನ ಯುವಜನರಲ್ಲಿ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ, ಎಚ್ಚರಿಕೆ ಮತ್ತು ನಿಷ್ಠೆ ಬೆಳೆಸುವುದು ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ನಾಗಾನಂದ ಕೆಂಪರಾಜು, ಕುವೆಂಪು, ನಿಸಾರ್ ಅಹ್ಮದ್ ಹಾಗೂ ಕೆ.ಎಸ್. ನರಸಿಂಹಸ್ವಾಮಿ ಮೊದಲಾದ ಕವಿಗಳು ತಮ್ಮ ಕಾವ್ಯಗಳಲ್ಲಿ ನಿಸರ್ಗದ ಸೌಂದರ್ಯ ಮತ್ತು ಪರಿಸರದ ಮಹತ್ವವನ್ನು ಸಾರಿದ್ದು, ವಿದ್ಯಾರ್ಥಿಗಳು ಆ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು “ಹಸಿರೇ ಉಸಿರು” ಎಂಬ ಸಂದೇಶವನ್ನು ಸಾರ್ಥಕಗೊಳಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಹನ, ಸುಧಾಕರ್, ರವಿಚಂದ್ರ ಹಾಗೂ ಉಪನ್ಯಾಸಕಿ ವನಿತಾ ಉಪಸ್ಥಿತರಿದ್ದರು.

## ‘ವಿದ್ಯಾರ್ಥಿಗಳ ಭವಿಷ್ಯ ಹಾಳು ಮಾಡಿದ ಕೇಂದ್ರ ಸರ್ಕಾರ’

ಬಂಗಾರಪೇಟೆ

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಆತಂಕಕ್ಕೆ ಸಿಲುಕಿದೆ. ತಮ್ಮ ಹಕ್ಕುಗಳಿಗಾಗಿ ಪ್ರತಿಭಟಿಸಿದ ವಿದ್ಯಾರ್ಥಿಗಳ ಮೇಲೆ ದೆಹಲಿಯಲ್ಲಿ ಪೊಲೀಸ್ ಲಾಠಿಚಾರ್ಜ್ ನಡೆಸಿರುವುದು ಪ್ರಜಾಪ್ರಭುತ್ವಕ್ಕೆ ಕಪ್ಪು ಚುಕ್ಕೆ. ಈ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ದಲಿತ ಮುಖಂಡ ಹಾಗೂ ಕಲಾವಿದ ಯಲ್ಲಪ್ಪ ಆಗ್ರಹಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಮುಂಭಾಗ ದಲಿತ ಸಂಘಟನೆಗಳ ಮುಖಂಡರು ಗುರುವಾರ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿ, ದೆಹಲಿಯಲ್ಲಿ ವಿದ್ಯಾರ್ಥಿಗಳ ಮೇಲೆ ನಡೆದ ಪೊಲೀಸ್ ದೌರ್ಜನ್ಯ ಹಾಗೂ ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ತೀವ್ರವಾಗಿ ಖಂಡಿಸಿದರು. ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಪಾಡುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದ್ದು, ಪ್ರಶ್ನೆಪತ್ರಿಕೆ ಸೋರಿಕೆಯಿಂದ ವಿದ್ಯಾರ್ಥಿಗಳ ಹಲವು ವರ್ಷಗಳ ಶ್ರಮಕ್ಕೆ ಧಕ್ಕೆ ಉಂಟಾಗಿದೆ ಎಂದು ಆರೋಪಿಸಿದರು. ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಿದ ವಿದ್ಯಾರ್ಥಿಗಳ ಮೇಲೆ ಬಲಪ್ರಯೋಗ ನಡೆಸಿರುವುದು ಅಕ್ಷಮ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಟಿಎಪಿಸಿಎಂಎಸ್ ಉಪಾಧ್ಯಕ್ಷ ಅ.ನಾ.ಹರೀಶ್ ಮಾತನಾಡಿ, ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುವ ಯಾವುದೇ ಸರ್ಕಾರವನ್ನು ಜನರು ಕ್ಷಮಿಸುವುದಿಲ್ಲ. ನೀಟ್ ಹಗರಣದ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು. ವಿದ್ಯಾರ್ಥಿಗಳಿಗೆ ನ್ಯಾಯ ದೊರಕಿಸುವ ಜೊತೆಗೆ ಶಿಕ್ಷಣ ವ್ಯವಸ್ಥೆಯ ಮೇಲಿನ ವಿಶ್ವಾಸವನ್ನು ಮರುಸ್ಥಾಪಿಸಲು ಕೇಂದ್ರ ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ದಲಿತ ಸಂಘಟನೆಗಳ ಮುಖಂಡರಾದ ಸೂಲಿಕುಂಟೆ ರಮೇಶ್, ಹುಣಸಿನಹಳ್ಳಿ ವೆಂಕಟೇಶ್, ಮದಿವಣ್ಣನ್, ರಗು, ಸಿಪಿಎಂ ಶ್ರೀನಿವಾಸ್, ಪಾರ್ವತಮ್ಮ ಇತರರು ಭಾಗವಹಿಸಿದ್ದರು. ವಿದ್ಯಾರ್ಥಿಗಳ ಪರವಾಗಿ ನ್ಯಾಯಕ್ಕಾಗಿ ಹೋರಾಟ ಮುಂದುವರಿಸುವುದಾಗಿ ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.ಬಂಗಾರಪೇಟೆ ಪೊಲೀಸ್ ಇನ್ಸ್ಪೆಕ್ಟರ್ ರವಿಕುಮಾರ್ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

## ಎಸ್‌ಐಆರ್ ಪ್ರಕ್ರಿಯೆ: ಮತಗಟ್ಟೆ ಏಜೆಂಟರುಗಳನ್ನು ಚುರುಕುಗೊಳಿಸಲು ರಾಜಕೀಯ ಪಕ್ಷಗಳಿಗೆ ಜಿಲ್ಲಾಧಿಕಾರಿ ಕರೆ

ತುಮಕೂರು

ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ-2026 ಪ್ರಕ್ರಿಯೆ ಜಿಲ್ಲೆಯಲ್ಲಿ ಭರದಿಂದ ಸಾಗಿದ್ದು, ಶೇ.100ರಷ್ಟು ಶುದ್ಧ ಮತದಾರರ ಪಟ್ಟಿಗಾಗಿ ರಾಜಕೀಯ ಪಕ್ಷಗಳು ತಮ್ಮ ಮತಗಟ್ಟೆ ಏಜೆಂಟರುಗಳನ್ನು ಮತ್ತಷ್ಟು ಚುರುಕುಗೊಳಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ ಸಂಬಂಧಿಸಿದಂತೆ ನೋಂದಾಯಿತ ರಾಜಕೀಯ ಪಕ್ಷಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಸಮರ್ಪಕವಾಗಿ ನಡೆಯುತ್ತಿದೆ. ಪ್ರಸ್ತುತ ಪರಿಷ್ಕರಿಸಿದ ಮತದಾರರ ಪಟ್ಟಿ ಪರಿಪಕ್ವವಾಗಲು ರಾಜಕೀಯ ಪಕ್ಷಗಳು ತಮ್ಮ ಮತಗಟ್ಟೆ ಏಜೆಂಟರುಗಳನ್ನು ಮತ್ತಷ್ಟು ಚುರುಕುಗೊಳಿಸಿ ಮತಗಟ್ಟೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವಂತೆ ಸೂಚಿಸಬೇಕು ಎಂದು ರಾಜಕೀಯ ಪಕ್ಷಗಳಿಗೆ ತಿಳಿಸಿದರು.

2025ರ ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ 22ಲಕ್ಷ ಮತದಾರರಿಗೆ ಗಣತಿ ನಮೂನೆಯನ್ನು ವಿತರಣೆ ಮಾಡಲಾಗಿದೆ. ಇಂದಿನ ಮಾಹಿತಿಯಂತೆ ಜಿಲ್ಲೆಯಲ್ಲಿ ಶೇ. 77.18ರಷ್ಟು ಗಣಕೀಕರಣಗೊಳಿಸಲಾಗಿದೆ. ಆಗಸ್ಟ್ 8ರವರೆಗೂ ಕಾಲಾವಕಾಶ ವಿಸ್ತರಿಸಲಾಗಿರುವುದರಿಂದ ರಾಜಕೀಯ ಪಕ್ಷಗಳು ತಮ್ಮ ಏಜೆಂಟರುಗಳಿಗೆ ತಿಳಿಸಿ ಪ್ರಸ್ತುತ ಮತಗಟ್ಟೆ ಅಧಿಕಾರಿಗಳು ಗಣತಿ ನಮೂನೆಗಳನ್ನು ಹಿಂಪಡೆದು ಗಣಕೀಕರಣಗೊಳಿಸಿರುವ ಮಾಹಿತಿ ಸರಿಯಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದರು.

ಪ್ರಸ್ತುತ ಮಾಹಿತಿಯಂತೆ ಜಿಲ್ಲೆಯ ಮತದಾರರ ಪಟ್ಟಿಯಲ್ಲಿನ 24,562 ಮತದಾರರು ಮೃತಪಟ್ಟಿರುವ ಬಗ್ಗೆ, 7,768 ಮತದಾರರು ಲಭ್ಯವಿಲ್ಲದಿರುವ ಬಗ್ಗೆ ಹಾಗೂ 35,558 ಮತದಾರರು ಶಾಶ್ವತವಾಗಿ ಸ್ಥಳಾಂತರಿಸಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಇದಲ್ಲದೆ ಶೇ.19.61 ಮತದಾರರು ಗಣತಿ ನಮೂನೆಯನ್ನು ಪಡೆದು ಹಿಂತಿರುಗಿಸಿರುವುದಿಲ್ಲ. ಈ ಮಾಹಿತಿ ಸರಿಯಿರುವ ಬಗ್ಗೆ ರಾಜಕೀಯ ಪಕ್ಷಗಳು ತಮ್ಮ ಏಜೆಂಟರ್ ಮೂಲಕ ಖಾತ್ರಿಪಡಿಸಿಕೊಳ್ಳಬೇಕು. ಒಂದೊಮ್ಮೆ ಗಣತಿ ನಮೂನೆ ಹಿಂತಿರುಗಿಸದ ಮತದಾರರು ಅಲಭ್ಯ ಎಂಬ ಬಗ್ಗೆ ಹಾಗೂ ಯಾವ ಕಾರಣಕ್ಕೆ ಲಭ್ಯವಿಲ್ಲ ಎಂಬ ಬಗ್ಗೆ ಮತಗಟ್ಟೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ದೃಢಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ರಾಜಕೀಯ ಪಕ್ಷಗಳಿಗೆ ತಿಳಿಸಿದರು.

ಪ್ರಸ್ತುತ ತುಮಕೂರು ಜಿಲ್ಲೆಯ 11 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ಸಮರ್ಪಕವಾಗಿ ನಡೆಯುತ್ತಿದ್ದು, ವಾರದೊಳಗೆ ಶೇ. 88ರಷ್ಟು ಗಣಕೀಕರಣಗೊಳಿಸುವ ಪ್ರಕ್ರಿಯೆ ಆಗಲಿದೆ ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿ ಅಂತಿಮ ಪ್ರಕಟ ನಂತರ ಮತದಾರರನ್ನು ಕೈಬಿಡಲಾಗಿದೆ ಎಂಬ ಆಕ್ಷೇಪಗಳು ಬರಬಾರದು. ಮತದಾರರ ಪಟ್ಟಿಯೇ ಚುನಾವಣೆಯ ಅಂತಿಮ ಸೌಲಭ್ಯವಾಗಿರುವುದರಿಂದ ಸಮರ್ಪಕ ಮತದಾರರ ಪಟ್ಟಿ ರೂಪಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ಆದ್ದರಿಂದ ರಾಜಕೀಯ ಪಕ್ಷಗಳು ಹಾಗೂ ಮತದಾರರು ತಪ್ಪು ಮಾಹಿತಿ ನೀಡದೆ ಸಹಕರಿಸುವಂತೆ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಮಾತನಾಡಿ, ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಪಾರದರ್ಶಕವಾಗಿರುವ ಉದ್ದೇಶದಿಂದ ರಾಜಕೀಯ ಪಕ್ಷಗಳು ಪ್ರಕ್ರಿಯೆಯ ಎಲ್ಲಾ ಮಾಹಿತಿಯನ್ನು ತಿಳಿಯಬೇಕು. ಈ ಮೂಲಕ ಮತದಾರರ ಪಟ್ಟಿಯಲ್ಲಿ ಯಾವೊಬ್ಬ ಅರ್ಹ ಮತದಾರರು ಹೊರಗುಳಿಯದಂತೆ ಸಹಕರಿಸಬೇಕು ಎಂದು ತಿಳಿಸಿದರು.

ಪ್ರಸ್ತುತ ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಗಣತಿ ನಮೂನೆ ವಿತರಿಸುವ ಹಾಗೂ ಹಿಂಪಡೆಯುವ ಪ್ರಕ್ರಿಯೆ ಮನೆ-ಮನೆ ಭೇಟಿ ಕಾರ್ಯವನ್ನು ಆಗಸ್ಟ್ 8ರವರೆಗೆ ವಿಸ್ತರಿಸಲಾಗಿದ್ದು, ಆಗಸ್ಟ್ 17ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಆನಂತರ ಅಕ್ಟೋಬರ್ 19ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ಗುರಿ ಹೊಂದಿದ್ದು, ಈ ನಡುವೆ 2 ತಿಂಗಳ ಅವಧಿಯನ್ನು ಆಕ್ಷೇಪಣೆಗಳನ್ನು ಸರಿಪಡಿಸಲು ಕಾಲಾವಕಾಶ ನೀಡಲಾಗಿದೆ. ಈ ಅವಧಿಯಲ್ಲಿ ಯಾವುದೇ ಗೊಂದಲವಿದ್ದರೆ ನಿವಾರಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ನೋಂದಾಯಿತ ಎಲ್ಲಾ ರಾಜಕೀಯ ಪಕ್ಷಗಳ ಪ್ರಮುಖರು ಭಾಗವಹಿಸಿದ್ದರು.

## ‘ಗ್ರಾಮೀಣ ಯುವಕರಿಗೆ ಕೌಶಲ್ಯ ತರಬೇತಿ ನೀಡಿ ಉದ್ಯೋಗಾರ್ಹತೆ ಹೆಚ್ಚಿಸಿ’

ಬೆಂಗಳೂರು



ರಾಜ್ಯದ 5927 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವೃತ್ತಿನಿರತ ಯುವಕರನ್ನು ಗುರುತಿಸಿ ಅವರಿಗೆ 3 ರಿಂದ 6 ತಿಂಗಳ ಕೌಶಲ್ಯ ತರಬೇತಿ ನೀಡಿ, ಉದ್ಯೋಗಾರ್ಹತೆ ಹೆಚ್ಚಿಸಲು ಕ್ರಮ ವಹಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹಾಗೂ ಗದಗ ಪಂಚಾಯತ್ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ವಿದೇಶದಲ್ಲೂ ನಮ್ಮ ಗ್ರಾಮೀಣ ಯುವಜನರಿಗೆ ಉದ್ಯೋಗ ಸಿಗುವಂತೆ ಮಾಡಲು ಮತ್ತು ವಿದೇಶದಿಂದ ರಾಜ್ಯಕ್ಕೆ ಬರುವ ಪ್ರವಾಸಿಗರಿಗೆ ಪ್ರವಾಸಿ ತಾಣಗಳಲ್ಲಿ ಗೈಡ್ ಆಗಿ ಸೇವೆ ಸಲ್ಲಿಸಲು ಅನುವಾಗುವಂತೆ ಸ್ಪೋಕನ್ ಇಂಗ್ಲಿಷ್, ಜರ್ಮನ್, ಸ್ಪ್ಯಾನಿಷ್, ರಷ್ಯನ್ ಇತ್ಯಾದಿ ವಿದೇಶೀ ಭಾಷಾ ಸರ್ಟಿಫಿಕೇಟ್ ಕೋರ್ಸ್ ಆರಂಭಿಸುವ ಸಾಧ್ಯತೆಗಳ ಬಗ್ಗೆ ಪರಿಶೀಲಿಸಲು ತಿಳಿಸಿದರು.

ವಿಶ್ವವಿದ್ಯಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ದಾಖಲಾಗುವಂತೆ ಮಾಡಲು ಇಂದಿನ ಯುಗಮಾನದ ಅಗತ್ಯಗಳಿಗೆ ಅನುಗುಣವಾಗಿ ಕೃತಕ ಬುದ್ಧಿಮತ್ತೆ ಸೇರಿದಂತೆ ಹೊಸ ಹೊಸ ಕೋರ್ಸ್ ಆರಂಭಿಸಲು ತಜ್ಞರ ಸಮಿತಿ ರಚಿಸಿ ವರದಿ ಪಡೆಯುವಂತೆ ನಿರ್ದೇಶನ ನೀಡಿದರು.

ಯಾವುದೇ ವಿಶ್ವವಿದ್ಯಾನಿಲಯ ಗುಣಮಟ್ಟದ ಶಿಕ್ಷಣದ ಮೂಲಕ ವಿದ್ಯಾರ್ಥಿಗಳ ವಿಶ್ವಾಸಾರ್ಹತೆ ಗಳಿಸಬೇಕು. ಸ್ಥಾಪನೆಯಾದ 6-8 ವರ್ಷದಲ್ಲಿ ಆರ್ಥಿಕ ಸ್ವಾವಲಂಬನೆ ಸಾಧಿಸಬೇಕು ಎಂದು ಅಭಿಪ್ರಾಯಪಟ್ಟ ಈಶ್ವರ ಖಂಡ್ರೆ, ವಿಶ್ವವಿದ್ಯಾಲಯದಲ್ಲಿ ಬೋಧಕರ ಕೊರತೆ ಆಗದಂತೆ ಕ್ರಮ ವಹಿಸಲೂ ಸೂಚಿಸಿದರು.

ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಗ್ರಾಮೀಣ ಪರಿಸರದ ಪರಿಚಯ ಕಡ್ಡಾಯವಾಗಿ ಆಗಬೇಕು. ಈ ನಿಟ್ಟಿನಲ್ಲಿ ಜುಲೈ 1ರಿಂದ ಜಾರಿಗೆ ಬಂದಿರುವ ಹೊಸ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ವಿಬಿಜಿ ರಾಮ್ ಜೀ, ಜಲ ಜೀವನ ಮಿಷನ್, ಹರ್ ಘರ್ ಜಲ್, ಗ್ರಾಮೀಣ ಜೀವನೋಪಾಯ ಅಭಿಯಾನ, ಗ್ರಾಮೀಣ ರಸ್ತೆ, ಸಾಮಾಜಿಕ ಅರಣ್ಯ ಸೇರಿದಂತೆ ಇಲಾಖೆಯ ವಿವಿಧ ಕೇಂದ್ರ ಹಾಗೂ ರಾಜ್ಯ ಪ್ರಾಯೋಜಿತ ಯೋಜನೆಗಳ ಬಗ್ಗೆ ಅಧ್ಯಯನ ಮಾಡಲು ವಿದ್ಯಾರ್ಥಿಗಳಿಗೆ ಪ್ರಾಜೆಕ್ಟ್ ವರ್ಕ್ ನೀಡಬೇಕು ಎಂದು ತಿಳಿಸಿದರು.

## ಕೊಡಿಗೇಹಳ್ಳಿ ಗ್ರಾ.ಪಂಗಳಿಗೆ ಡಾ. ವಾಸಂತಿ ಅಮರ್ ದಿಢೀರ್ ಭೇಟಿ



ದೊಡ್ಡಬಳ್ಳಾಪುರ

ದೊಡ್ಡತುಮಕೂರು ಹಾಗೂಕೊಡಿಗೇಹಳ್ಳಿ, ಕಾಡನೂರು ಗ್ರಾಮ ಪಂಚಾಯತಿಗಳಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಡಾ. ವಾಸಂತಿ ಅಮರ್ ಗುರುವಾರ ಭೇಟಿ ನೀಡಿದರು.

ಚಿಕ್ಕ ತುಮಕೂರು ಗ್ರಾಮದ ಕೆರೆಯಲ್ಲಿ ಕೈಗಾರಿಕೆಯ ತ್ಯಾಜ್ಯ ನೀರಿನ ಎಸ್‌ಟಿಪಿ ಪ್ಲಾಂಟ್ ಪರಿಶೀಲಿಸಿ ಜನರಿಗೆ ಕುಡಿಯುವ ನೀರು ಬಗ್ಗೆ ಅಧಿಕಾರಿಗಳ ಜೊತೆಗೆ ಚರ್ಚಿಸಿದರು.

ನಂತರ ಕೊಡಿಗೇಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಕುರುಬರಹಳ್ಳಿಯಲ್ಲಿ ಜಲಜೀವನ್ ಮಿಷನ್ ಕಾಮಗಾರಿಯ ಹೊಸ ಬೋರ್ವೆಲ್ ವೀಕ್ಷಣೆ ಮಾಡಿದರು ಕುಡಿಯುವ ನೀರಿನ ಬಗ್ಗೆ ಸಾರ್ವಜನಿಕರ ಜೊತೆ ಸಮಾಲೋಚಿಸಿದರು.

ಕೊಡಿಗೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಡಾ. ಬಿ.ಆರ್. ಅಂಬೇಡ್ಕರ್ ಮೆರಿಟ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ನಿಲಯದ ವಿದ್ಯಾರ್ಥಿಗಳ ಜೊತೆ ಸ್ವಚ್ಛತೆ ಮತ್ತು ಊಟದ ಬಗ್ಗೆ ಸಮಾಲೋಚಿಸಿದರು.

ಈ ಸಂದರ್ಭದಲ್ಲಿ ಆರ್‌ಡಬ್ಲ್ಯೂಎಸ್ಎಇಇ ತಾಲ್ಲೂಕು ಮಟ್ಟದ ಅಧಿಕಾರಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಇನ್ನಿತರ ಅಧಿಕಾರಿಗಳು, ಸಿಬ್ಬಂದಿಗಳು ಜಿಲ್ಲಾ ಪಂಚಾಯತ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬಹುಭಾಷಾ ಜ್ಞಾನವು ಸಾಮಾಜಿಕ, ವೃತ್ತಿಪರ ಜೀವನದಲ್ಲಿ ಅತ್ಯಗತ್ಯ

ಹುಬ್ಬಳ್ಳಿ

ನೈಋತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗದ ವತಿಯಿಂದ ಹುಬ್ಬಳ್ಳಿಯ ಗದಗ ರಸ್ತೆಯಲ್ಲಿರುವ ರೈಲ್ವೆ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯಲ್ಲಿ ಗುರುವಾರ ‘ಸಮುದಾಯ ವೇದಿಕೆ’ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಹುಬ್ಬಳ್ಳಿ ವಿಭಾಗದ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಹಾಗೂ ಹೆಚ್ಚುವರಿ ಮುಖ್ಯ ರಾಜಭಾಷಾ ಅಧಿಕಾರಿ ಪ್ರೇಮ್ ಚಂದ್ರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಹುಭಾಷಾ ಜ್ಞಾನವು ಸಾಮಾಜಿಕ ಹಾಗೂ ವೃತ್ತಿಪರ ಜೀವನದಲ್ಲಿ ಯಶಸ್ಸು ಸಾಧಿಸಲು ಮಹತ್ವದ ಪಾತ್ರ ವಹಿಸುತ್ತದೆ ಎಂದು ಅವರು ಹೇಳಿದರು.

ಪ್ರಾದೇಶಿಕ ಭಾಷೆಗಳು ಹಾಗೂ ಅಧಿಕೃತ ಭಾಷೆಯಾದ ಹಿಂದಿಯ ಮಹತ್ವವನ್ನು ವಿವರಿಸಿದ ಅವರು, ಹಿಂದಿ ಭಾಷೆಯ ಜ್ಞಾನವು ದೇಶದ ಕ್ರೀಡೆ, ಸಂಸ್ಕೃತಿ, ಪ್ರವಾಸೋದ್ಯಮ ಹಾಗೂ ಜ್ಞಾನ ವಿನಿಮಯದ ವಿವಿಧ ಕ್ಷೇತ್ರಗಳನ್ನು ಅರಿಯಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಗೌರವ ಅತಿಥಿಯಾಗಿ ಭಾಗವಹಿಸಿದ್ದ ಖ್ಯಾತ ಕನ್ನಡ ಸಾಹಿತಿ ಹಾಗೂ ವಿಭಾಗೀಯ ಸಿಬ್ಬಂದಿ ಅಧಿಕಾರಿ ಸಿ.ಎಂ. ಮುನಿಸ್ವಾಮಿ ಅವರು ವಿದ್ಯಾರ್ಥಿಗಳೊಂದಿಗೆ ತಮ್ಮ ಸಾಹಿತ್ಯ ಬದುಕಿನ ಅನುಭವಗಳನ್ನು ಹಂಚಿಕೊಂಡರು.



ಉತ್ತಮ ಸಾಹಿತ್ಯ ರಚಿಸಲು ಸಾಹಿತಿಗಳಿಗೆ ಹಲವು ಭಾಷೆಗಳ ಜ್ಞಾನ ಹೊಂದಿರುವುದು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಖ್ಯಾತ ಅಂತಾರಾಷ್ಟ್ರೀಯ ಕ್ರಿಕೆಟಿಗ ಅನಂತ ಭಾಗವತ್ ಹಾಗೂ ರಾಷ್ಟ್ರೀಯ ಮಟ್ಟದ ಅಥ್ಲೀಟ್ ಬಸವರಾಜ್ ಎಂ.ಕೆ. ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಕ್ರೀಡಾ ಕ್ಷೇತ್ರದಲ್ಲಿನ ತಮ್ಮ ಅನುಭವಗಳನ್ನು ಹಂಚಿಕೊಂಡರು.

ರೈಲ್ವೆ ಇಂಗ್ಲಿಷ್ ಮಾಧ್ಯಮ ಪ್ರೌಢಶಾಲೆಯ ಪ್ರಾಂಶುಪಾಲ ಇ. ನಾಗಪ್ಪ ಅವರು ಗಣ್ಯರು ಹಾಗೂ ಕ್ರೀಡಾಪಟುಗಳನ್ನು ಸ್ವಾಗತಿಸಿ, ಭಾಷೆ, ಕ್ರೀಡೆ ಮತ್ತು ಕರ್ನಾಟಕದ ಶ್ರೀಮಂತ ಸಂಸ್ಕೃತಿಯ ವಿವಿಧ ಆಯಾಮಗಳ ಕುರಿತು ಮಾತನಾಡಿದರು.

ಕಾರ್ಯಕ್ರಮವನ್ನು ಮಹಬೂಬಸಾಬ್ ನಾಯ್ಕರ್ ನಿರ್ವಹಿಸಿದರು. ಅಂಜುಂ ಹೊರೇಕೇರಿ ವಂದಿಸಿದರು. ರಾಜಭಾಷಾ ಶಾಖೆಯ ದೈಹಿಕ ಶಿಕ್ಷಣ ಶಿಕ್ಷಕ ಮಹಾರುದ್ರಪ್ಪ ಬಳ್ಳಾರಿ, ಹಿರಿಯ ಅನುವಾದಕರಾದ ರಾಜಸಾಹೇಬ್ ನದಾಫ್ ಮತ್ತು ಜಿ.ಆರ್. ನಾರಾಯಣಾದ್ರಿ ಹಾಗೂ ಕಿರಿಯ ಅನುವಾದಕ ಮೊಹಮ್ಮದ್ ಸಲೀಂ ಸೇರಿದಂತೆ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ‘ದೇಶಪ್ರೇಮ, ಶಿಸ್ತು ಮತ್ತು ಶಿಕ್ಷಣದಿಂದ ಯುವಕರು ದೇಶ ಕಟ್ಟಬೇಕು’



ಬೂದಿಕೋಟೆ

ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಕ್ರಾಂತಿಕಾರಿ ಚಂದ್ರಶೇಖರ್ ಆಜಾದ್ ಅವರ ಆದರ್ಶಗಳನ್ನು ಪ್ರತಿಯೊಬ್ಬ ಯುವಕರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದೇಶಕ್ಕಿಂತ ದೊಡ್ಡದು ಯಾವುದೂ ಇಲ್ಲ. ವಿದ್ಯಾರ್ಥಿಗಳು ದೇಶಭಕ್ತಿ, ಶಿಸ್ತು ಮತ್ತು ಉತ್ತಮ ಶಿಕ್ಷಣದ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದು ಮಾಜಿ ಸಂಸದ ಎಸ್. ಮುನಿಸ್ವಾಮಿ ಹೇಳಿದರು.

ವಿಶ್ವ ಹಿಂದೂ ಪರಿಷತ್ ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಅಭಿಮಾನಿಗಳ ಬಳಗ ಬಂಗಾರಪೇಟೆ ವತಿಯಿಂದ ನಗರದ ಆಜಾದ್ ಉದ್ಯಾನವನ ಶಾಂತಿನಗರದಲ್ಲಿ ಹಮ್ಮಿಕೊಂಡಿದ್ದ ಚಂದ್ರಶೇಖರ್ ಆಜಾದ್ ರವರ 120ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ 13 ವರ್ಷಗಳಿಂದ ಯಾವುದೇ ಅಡೆತಡೆಗಳ ನಡುವೆಯೂ ನಿರಂತರವಾಗಿ ಆಜಾದ್ ಜಯಂತಿಯನ್ನು ಆಚರಿಸಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಚಂದ್ರಶೇಖರ್ ಆಜಾದ್ ಅವರ ಪ್ರತಿಮೆ ಹಾಗೂ ಉದ್ಯಾನ ನಿರ್ಮಾಣಕ್ಕೆ ಶ್ರಮಿಸಿದ ರಘುರಾಮ್ ರೆಡ್ಡಿ, ಗಜೇಂದ್ರ ಸೇರಿದಂತೆ ಎಲ್ಲ ಹಿರಿಯ ಮುಖಂಡರ ಸೇವೆ ಶ್ಲಾಘನೀಯ ಎಂದರು.

ವಿದ್ಯಾರ್ಥಿಗಳು ಮೊಬೈಲ್ ಮತ್ತು ಅನಗತ್ಯ ವ್ಯಸನಗಳಿಂದ ದೂರವಿದ್ದು ಶಿಕ್ಷಣದ ಕಡೆ ಹೆಚ್ಚಿನ ಗಮನ ಹರಿಸಬೇಕು. ಇಂಜಿನಿಯರ್, ವೈದ್ಯ, ವಿಜ್ಞಾನಿ, ಐಎಎಸ್, ಐಪಿಎಸ್ ಸೇರಿದಂತೆ ಉನ್ನತ ಹುದ್ದೆಗಳನ್ನು ಅಲಂಕರಿಸಿ ತಮ್ಮ ಪೋಷಕರು, ಶಾಲೆ, ಬಂಗಾರಪೇಟೆ ತಾಲೂಕು ಹಾಗೂ ದೇಶಕ್ಕೆ ಕೀರ್ತಿ ತರಬೇಕು. ಪೋಷಕರು ಮತ್ತು ಶಿಕ್ಷಕರನ್ನು ಗೌರವಿಸಿ ಅವರ ಕನಸುಗಳನ್ನು ನನಸು ಮಾಡುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯ ಎಂದರು.

ಈ ಸಂದರ್ಭದಲ್ಲಿ ಸಾಹಿತಿ ಬಾಬು ಕೃಷ್ಣಮೂರ್ತಿ, ವಿಶ್ವ ಹಿಂದೂ ಪರಿಷತ್ ಜಿಲ್ಲಾ ಸಹ ಸಂಘಟನಾ ಕಾರ್ಯದರ್ಶಿ ವೇಣುಗೋಪಾಲ್, ತಾಲೂಕು ಅಧ್ಯಕ್ಷ ಜಯಪ್ರಕಾಶ್, ಮುಖಂಡರುಗಳಾದ ಶಂಕರ್ನಾರಾಯಣ್ ರೆಡ್ಡಿ, ವಿಜ್ಞೇಶ್, ಸೀನಣ್ಣ, ಹನುಮಪ್ಪ, ಕಪಾಲಿಶಂಕರ್, ಬಿಂದು ಮಾಧವ್, ಚಂದ್ರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ

ಗುಡಿಬಂಡೆ

ದೆಹಲಿಯ ಜಂತರ್ ಮಂತರ್ ನಲ್ಲಿ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಖಂಡಿಸಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ನಡೆದ ಪೊಲೀಸ್ ಕ್ರಮವನ್ನು ವಿರೋಧಿಸಿ, ಗುಡಿಬಂಡೆಯಲ್ಲಿ ಡಿವೈಎಫ್ಐ ಹಾಗೂ ಎಸ್ಎಫ್ಐ ಸಂಘಟನೆಗಳ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.

ಪ್ರತಿಭಟನಾಕಾರರು ಕೆಲಕಾಲ ರಸ್ತೆ ತಡೆ ನಡೆಸಿ, ಬಳಿಕ ಮಾನವ ಸರಪಳಿ ನಿರ್ಮಿಸಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಡಿವೈಎಫ್ಐ ಮುಖಂಡ ರಾಜಶೇಖರ್, ನೀಟ್ ಪರೀಕ್ಷೆಯಲ್ಲಿ ನಡೆದಿರುವ ಅಕ್ರಮಗಳ ವಿರುದ್ಧ ಶಾಂತಿಯುತವಾಗಿ ಹೋರಾಟ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಪೊಲೀಸರು ಬಲಪ್ರಯೋಗ ನಡೆಸಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸಿ, ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ಲದೆ, ಈ ಪ್ರಕರಣದ ನೈತಿಕ ಹೊಣೆ ಹೊತ್ತು ಪ್ರಧಾನಿ, ಕೇಂದ್ರ ಗೃಹ ಸಚಿವರು ಹಾಗೂ ಕೇಂದ್ರ ಶಿಕ್ಷಣ ಸಚಿವರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಬಳಿಕ ಮಾತನಾಡಿದ ಡಿವೈಎಫ್ಐ ಮುಖಂಡ ರಮಣ, ನೀಟ್ ಪರೀಕ್ಷೆಗೆ ಸಂಬಂಧಿಸಿದ ಅಕ್ರಮಗಳು ಪದೇಪದೇ ಬೆಳಕಿಗೆ ಬರುತ್ತಿರುವುದು ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ವೈದ್ಯಕೀಯ ಶಿಕ್ಷಣ ಪಡೆಯುವ ಕನಸಿನಿಂದ ವಿದ್ಯಾರ್ಥಿಗಳು ವರ್ಷಗಳ ಕಾಲ ಶ್ರಮಿಸಿ ಪರೀಕ್ಷೆಗೆ ಸಿದ್ಧರಾಗುತ್ತಾರೆ. ಆದರೆ ಪ್ರಶ್ನೆಪತ್ರಿಕೆ ಸೋರಿಕೆಯಂತಹ ಅಕ್ರಮಗಳಿಂದ ಅವರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯದೇ, ಭವಿಷ್ಯದ ಕನಸುಗಳು ಭಗ್ನಗೊಳ್ಳುತ್ತಿವೆ. ಇಂತಹ ಅಕ್ರಮಗಳಿಗೆ ಕಾರಣರಾದವರ ವಿರುದ್ಧ ಸರ್ಕಾರ ಯಾವುದೇ ರಾಜಿ ಮಾಡಿಕೊಳ್ಳದೆ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯುವವರೆಗೆ ಹೋರಾಟವನ್ನು ನಿರಂತರವಾಗಿ ಮುಂದುವರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ಎಸ್.ಎಫ್.ಐ ಮತ್ತು ಡಿ.ವೈ.ಎಫ್.ಐ ಸಂಘಟನೆಗಳ ಪದಾಧಿಕಾರಿಗಳು, ಕಾಲೇಜು ವಿದ್ಯಾರ್ಥಿಗಳು, ಕಾರ್ಯಕರ್ತರು ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮಕ್ಕಳಿಗೆ ಬ್ಯಾಗ್ ಲೇಖನಿ ಸಾಮಗ್ರಿ ವಿತರಣೆ

ಶಿಡ್ಲಘಟ್ಟ

ತಾಲ್ಲೂಕಿನ ವೈ. ಹುಣಿಸೇನಹಳ್ಳಿ ರೈಲ್ವೆ ನಿಲ್ದಾಣ ಸಮೀಪದ ಕದಿರಿನಾಯಕನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಶಾಲಾ ಬ್ಯಾಗ್ ಹಾಗೂ ಲೇಖನಿ ಸಾಮಗ್ರಿಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ತಾಲ್ಲೂಕು ಕಾನೂನು ಸೇವಾ ಸಮಿತಿ, ಶಿಡ್ಲಘಟ್ಟ, ವಕೀಲರ ಸಂಘ, ಪೊಲೀಸ್ ಇಲಾಖೆ ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಏರ್ಪಡಿಸಲಾಗಿದ್ದು, ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ಕಾನೂನು ಅರಿವು, ಸಾಮಾಜಿಕ ಜವಾಬ್ದಾರಿ ಹಾಗೂ ವೈಯಕ್ತಿಕ ಸುರಕ್ಷತೆ ಕುರಿತು ವಿಶೇಷ ಮಾರ್ಗದರ್ಶನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಿಡ್ಲಘಟ್ಟ ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಮೊಹಮ್ಮದ್ ರೋಷನ್ ಷಾ ಮಾತನಾಡಿ, ವಿದ್ಯಾರ್ಥಿಗಳು ಪ್ರತಿದಿನ ಶಾಲೆಯಲ್ಲಿ ಕಲಿತ ಪಾಠಗಳನ್ನು ಸಂಜೆ ಮನೆಗೆ ತೆರಳಿ ಪುನರಾವರ್ತನೆ ಮಾಡಬೇಕು. ಶಿಕ್ಷಕರು ನೀಡುವ ಗೃಹಪಾಠವನ್ನು ತಪ್ಪದೇ ಪೂರ್ಣಗೊಳಿಸಬೇಕು. ಯಾವುದಾದರೂ ವಿಷಯ ಅರ್ಥವಾಗದಿದ್ದರೆ ಶಿಕ್ಷಕರನ್ನು ಅಥವಾ ಚೆನ್ನಾಗಿ ಓದುತ್ತಿರುವ ಸ್ನೇಹಿತರನ್ನು ಕೇಳಿ ತಿಳಿದುಕೊಳ್ಳಬೇಕು ಎಂದು ಸಲಹೆ ನೀಡಿದರು.

ವಕೀಲರ ಸಂಘದ ಅಧ್ಯಕ್ಷ ಎ. ನಾರಾಯಣಸ್ವಾಮಿ ವಿದ್ಯಾರ್ಥಿಗಳಿಗೆ ಬ್ಯಾಗ್ ಹಾಗೂ ಲೇಖನಿ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದರು. ಸುಕನ್ಯ, ಭಾವನ, ಸಿ.ಜಿ. ಭಾಸ್ಕರ್, ನಾಗರಾಜ್, ಜೆ. ವೆಂಕಟೇಶ್, ನವೀನ್, ವೇಣುಗೋಪಾಲ್, ಚೈತ್ರ, ನಾರಾಯಣಸ್ವಾಮಿ, ಕುಸುಮ, ಪ್ರಸಾದ್, ಚನ್ನಕೃಷ್ಣಪ್ಪ, ವಾರಹುಣಸೇನಹಳ್ಳಿ ನರಸಿಂಹ ಕೆ.ಎಸ್., ಚಿಕ್ಕಪಾಪನಹಳ್ಳಿ ಲಕ್ಷ್ಮೀನರಸಿಂಹಾಚಾರ್, ಚಿಕ್ಕದಾಸೇನಹಳ್ಳಿ ಲಕ್ಷ್ಮೀನಾರಾಯಣಗೌಡ, ದೊಡ್ಡದಾಸೇನಹಳ್ಳಿ ಶ್ರೀಕಾಂತಗೌಡ, ಚನ್ನಹಳ್ಳಿಗಳ್ಳಿ ದೇವಮ್ಮ,ಮುಖಂಡರಾದ ಕೆ.ಎಂ. ರವಿಕುಮಾರ್, ಪಿ. ಮೂರ್ತಿ, ಬೂಸಾ ನಾರಾಯಣಸ್ವಾಮಿ, ಸಿ.ವಿ. ದೇವರಾಜ್, ಬೇಕ್ರಿ ಗೌಡ, ಅಂಗಡಿ ಮಂಜುನಾಥ್, ಗಜ್ಜಿಗಾನಹಳ್ಳಿ ಜಿ. ರಮೇಶ್, ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಮನೆ ಮನೆಗೆ ಗಂಗೆ’ ಯೋಜನೆಗೆ ಗ್ರಹಣ.!

## ಎಎಒ ಕಾಮಗಾರಿ ಅವ್ಯವಸ್ಥೆ; 150 ಮನೆಗಳಿಗೆ ಮಾತ್ರ ನಲ್ಲಿ, ಒಂದೂವರೆ ವರ್ಷವಾದರೂ ಒಂದೇ ಒಂದು ಹನಿ ನೀರು ಇಲ್ಲ..?

ಕೊರಟಗೆರೆ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ‘ಮನೆ ಮನೆಗೆ ಗಂಗೆ’ (ಜಲ್ ಜೀವನ್ ಮಿಷನ್ – ಎಎಒ) ಯೋಜನೆ ತಾಲ್ಲೂಕಿನ ನಿಲಗೊಂಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸಕೋಟೆ ಗ್ರಾಮದಲ್ಲಿ ಅವ್ಯವಸ್ಥೆಯ ಸಂಕೇತವಾಗಿ ಪರಿಣಮಿಸಿದೆ.

ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಕೈಗೊಂಡಿರುವ ಕಾಮಗಾರಿ ಪೂರ್ಣಗೊಳ್ಳದೇ, ಗ್ರಾಮಸ್ಥರು ಇಂದಿಗೂ ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಗ್ರಾಮದಲ್ಲಿ ಸುಮಾರು 250 ಮನೆಗಳಿದ್ದು, ಸುಮಾರು ಒಂದೂವರೆ ವರ್ಷದ ಹಿಂದೆ ಆರಂಭವಾದ ಕಾಮಗಾರಿಯಲ್ಲಿ ಇದುವರೆಗೆ 150 ಮನೆಗಳಿಗೆ ಮಾತ್ರ ನಲ್ಲಿ ಸಂಪರ್ಕ ಕಲ್ಪಿಸಲಾಗಿದೆ. ಉಳಿದ 100ಕ್ಕೂ ಹೆಚ್ಚು ಮನೆಗಳು ಇನ್ನೂ ಯೋಜನೆಯ ವ್ಯಾಪ್ತಿಗೆ ಬಂದಿಲ್ಲ. ಅಳವಡಿಸಿರುವ ನಲ್ಲಿಗಳಲ್ಲಿಯೂ ಇದುವರೆಗೆ ಒಂದೇ ಒಂದು ದಿನವೂ ನೀರು ಹರಿದಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ನೀರಿಗಾಗಿ ಎರಡು ಕಿಲೋಮೀಟರ್ ಅಲೆದಾಟ ಯೋಜನೆಯಡಿ ನೀರಿನ ಟ್ಯಾಂಕ್ ನಿರ್ಮಾಣ, ಪೈಪ್ಲೈನ್ ಅಳವಡಿಕೆ ಹಾಗೂ ಮನೆಗಳಿಗೆ ನಲ್ಲಿ ಸಂಪರ್ಕ ನೀಡಲಾಗಿದ್ದರೂ, ನೀರು ಪೂರೈಕೆಗೆ ಅಗತ್ಯವಾದ ವ್ಯವಸ್ಥೆ ಪೂರ್ಣಗೊಂಡಿಲ್ಲ. ಪರಿಣಾಮವಾಗಿ ಗ್ರಾಮಸ್ಥರು ಇಂದಿಗೂ ಸುಮಾರು ಎರಡು ಕಿಲೋಮೀಟರ್ ದೂರದಲ್ಲಿರುವ ದೇವಸ್ಥಾನದ ಸಮೀಪದ ಸಾರ್ವಜನಿಕ ನಲ್ಲಿಯಿಂದ ನೀರು ತಂದು ದಿನನಿತ್ಯದ ಬದುಕು ಸಾಗಿಸಬೇಕಾಗಿದೆ.




“ಟ್ಯಾಂಕ್ ಕಟ್ಟಿದ್ದಾರೆ, ಪೈಪ್ ಹಾಕಿದ್ದಾರೆ, ನಲ್ಲಿ ಫಿಟ್ ಮಾಡಿದ್ದಾರೆ. ಆದರೆ ನೀರು ಮಾತ್ರ ಬಂದಿಲ್ಲ. ಸುಮಾರು 20 ಕುಟುಂಬಗಳು ಒಂದೇ ನಲ್ಲಿಯನ್ನು ಅವಲಂಬಿಸಬೇಕಾದ ಪರಿಸ್ಥಿತಿ ಇದೆ. ಇದೇನಾ ‘ಮನೆ ಮನೆಗೆ ಗಂಗೆ’ ಯೋಜನೆ?” ಎಂದು ಗ್ರಾಮಸ್ಥರೊಬ್ಬರು ಅಸಮಾಧಾನ ವ್ಯಕ್ತಪಡಿಸಿದರು.

**ಕಳಪೆ ಕಾಮಗಾರಿ ಆರೋಪ**

ಮುಖ್ಯ ಪೈಪ್ಲೈನ್ ಅಳವಡಿಸಲು ಅಗೆದ ರಸ್ತೆಗಳನ್ನು ಸಮರ್ಪಕವಾಗಿ ಮುಚ್ಚದೆ ಬಿಟ್ಟಿರುವುದರಿಂದ ಮಳೆಗಾಲದಲ್ಲಿ ಕೆಸರು ತುಂಬಿ ವಾಹನ ಹಾಗೂ ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಕೋಟ್ಯಂತರ ರೂಪಾಯಿ ವೆಚ್ಚವಾಗಿದೆ ಎಂದು ಹೇಳುತ್ತಾರೆ. ಆದರೆ ನೆಲದ ಮೇಲೆ ಅದರ ಫಲಿತಾಂಶ ಕಾಣುತ್ತಿಲ್ಲ. ಇದು ಸಾರ್ವಜನಿಕ ಹಣದ ದುರುಪಯೋಗ, ಎಂದು ಗ್ರಾಮದ ಯುವಕರು ಆಕ್ರೋಶ ವ್ಯಕ್ತಪಡಿಸಿದರು. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಿ, ಜಲ್ ಜೀವನ್ ಮಿಷನ್ ಯೋಜನೆಯ ಉದ್ದೇಶಕ್ಕೆ ತಕ್ಕಂತೆ ಪ್ರತಿ ಮನೆಗೂ ಶುದ್ಧ ಕುಡಿಯುವ ನೀರು ತಲುಪುವಂತೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

### ಮಕ್ಕಳು ನೀರಿಗಾಗಿ ಅಲೆದಾಡುವ ಸ್ಥಿತಿ..!

ಚುನಾವಣೆ ವೇಳೆ ಮನೆ ಮನೆಗೆ ನೀರು ಕೊಡುತ್ತೇವೆ ಎಂದು ಭರವಸೆ ನೀಡಿದ್ದರು. ಆದರೆ ಎರಡು ವರ್ಷ ಕಳೆದರೂ ಮಕ್ಕಳು ಶಾಲೆಗೆ ಹೋಗುವ ಮೊದಲುನೀರಿಗಾಗಿ ಅಲೆದಾಡಬೇಕಾದ ಪರಿಸ್ಥಿತಿ ಇದೆ, ಎಂದು ಗ್ರಾಮಸ್ಥೆ ಮುದ್ದಮ್ಮ ಅಳಲು ತೋಡಿಕೊಂಡರು.ಕಾಮಗಾರಿಯಲ್ಲಿನ ಲೋಪಗಳ ಕುರಿತು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಲಿಖಿತ ದೂರು ಸಲ್ಲಿಸಲು ಗ್ರಾಮಸ್ಥರು ತೀರ್ಮಾನಿಸಿದ್ದಾರೆ.ಈ ಕಾಮಗಾರಿಯ ಕುರಿತು ಉನ್ನತ ಮಟ್ಟದ ತನಿಖೆ ನಡೆಸಿ, ವೆಚ್ಚವಾದ ಹಣದ ಸಂಪೂರ್ಣ ಲೆಕ್ಕವನ್ನು ಸಾರ್ವಜನಿಕರಿಗೆ ಬಹಿರಂಗಪಡಿಸಬೇಕು, ಎಂದು ಗ್ರಾಮಸ್ಥ ಈರಣ್ಣ ಒತ್ತಾಯಿಸಿದರು. ಉಳಿದ 100ಕ್ಕೂ ಹೆಚ್ಚು ಮನೆಗಳಿಗೆ ಕೂಡಲೇ ನಲ್ಲಿ ಸಂಪರ್ಕ ಕಲ್ಪಿಸಿ, ಕಳಪೆ ಕಾಮಗಾರಿ ನಡೆಸಿದ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಂಡು ತಕ್ಷಣವೇ ನೀರು ಪೂರೈಕೆ ಆರಂಭಿಸಬೇಕು, ಎಂದು ರೈತ ಕಾಂತರಾಜು ಆಗ್ರಹಿಸಿದರು.

## ಕುಶಲಕರ್ಮಿಗಳ ಅಭಿಪ್ರಾಯಗಳ ಆಧಾರದ ಮೇಲೆ ಅಭಿವೃದ್ಧಿ ಕಾರ್ಯಯೋಜನೆ ರೂಪಿಸಲಾಗುವುದು: ಮುಂಡರಗಿ ನಾಗರಾಜ್



ಬೆಂಗಳೂರು

ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡ್‌ಕರ್) ವತಿಯಿಂದ ಪಾರಂಪರಿಕ ಚರ್ಮ ಕುಶಲಕರ್ಮಿಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ರಾಜ್ಯಮಟ್ಟದ ಸಂವಾದ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಲಿಡ್‌ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್, ಚರ್ಮ ಕುಶಲಕರ್ಮಿಗಳ ಜೀವನೋಪಾಯವನ್ನು ಆಧುನಿಕ ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಮಾರುಕಟ್ಟೆ ವಿಸ್ತರಣೆ ಹಾಗೂ ಉದ್ಯಮಶೀಲತೆಯೊಂದಿಗೆ ಸಂಪರ್ಕಿಸುವುದು ನಿಗಮದ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದರು. ಸಂವಾದದಲ್ಲಿ ಕುಶಲಕರ್ಮಿಗಳು ವ್ಯಕ್ತಪಡಿಸಿದ ಅಭಿಪ್ರಾಯಗಳು, ಸಲಹೆಗಳು ಹಾಗೂ ಶಿಫಾರಸುಗಳನ್ನು ಕ್ರೋಡೀಕರಿಸಿ, ಮುಂದಿನ ದಿನಗಳಲ್ಲಿ ಪರಿಣಾಮಕಾರಿ ಯೋಜನೆಗಳು ಹಾಗೂ ನೀತಿಗಳನ್ನು ರೂಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲಿಡ್‌ಕರ್ ಸಲಹೆಗಾರ ಇ. ವೆಂಕಟಯ್ಯ ಅವರು ಚರ್ಮೋದ್ಯಮದ ಅಭಿವೃದ್ಧಿ, ಹೊಸ ಅವಕಾಶಗಳು, ಕೌಶಲ್ಯ ವೃದ್ಧಿ, ಜಾಗತಿಕ ಮಾರುಕಟ್ಟೆ ಹಾಗೂ ಆಧುನಿಕ ಉತ್ಪಾದನಾ ವ್ಯವಸ್ಥೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಚರ್ಮ ಕುಶಲಕರ್ಮಿಗಳ ಜೀವನಮಟ್ಟ ಸುಧಾರಣೆಗೆ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ತಲುಪಿಸುವ ಅಗತ್ಯವನ್ನು ಅವರು ಒತ್ತಿಹೇಳಿದರು.

ಸಂವಾದದಲ್ಲಿ ಲಿಡ್‌ಕರ್‌ನ ನಿಕಟ ಪೂರ್ವ ವ್ಯವಸ್ಥಾಪಕ ನಿರ್ದೇಶಕ ವಸುಂಧರಾ ದೇವಿ, ವ್ಯವಸ್ಥಾಪಕ ನಿರ್ದೇಶಕರಾದ ಡಾ. ಹೆಚ್. ನಟರಾಜ್, ಉಪಪ್ರಧಾನ ವ್ಯವಸ್ಥಾಪಕ ದ ಮೊನಪ್ಪ ಕಟ್ಟಿಮನಿ, ಪ್ರಾಣೇಶ್, ಮಾಜಿ ವಿಧಾನ ಪರಿಷತ್ ಸದಸ್ಯ ಸಿ. ರಮೇಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.


ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಚರ್ಮ ಕುಶಲಕರ್ಮಿಗಳು ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಭಾಗವಹಿಸಿ, ಪಾರಂಪರಿಕ ವೃತ್ತಿಯ ಸವಾಲುಗಳು, ಮಾರುಕಟ್ಟೆ ವ್ಯವಸ್ಥೆ, ನ್ಯಾಯಯುತ ಬೆಲೆ, ಕಚ್ಚಾ ವಸ್ತುಗಳ ಲಭ್ಯತೆ, ಬ್ಯಾಂಕ್ ಸಾಲ, ಸರ್ಕಾರಿ ಯೋಜನೆಗಳು, ಕೌಶಲ್ಯಾಭಿವೃದ್ಧಿ, ಬ್ರ್ಯಾಂಡಿಂಗ್, ಡಿಜಿಟಲ್ ಮಾರ್ಕೆಟಿಂಗ್, ಇ–ಕಾಮರ್ಸ್, ಕಾಮನ್ ಫೆಸಿಲಿಟಿ ಸೆಂಟರ್ (ಅಈಅ), ಯುವಜನರ ಪಾಲ್ಗೊಳ್ಳುವಿಕೆ ಹಾಗೂ ಮುಂದಿನ ಪೀಳಿಗೆಯನ್ನು ಚರ್ಮೋದ್ಯಮದತ್ತ ಆಕರ್ಷಿಸುವ ಕುರಿತು ತಮ್ಮ ಅಮೂಲ್ಯ ಅಭಿಪ್ರಾಯಗಳನ್ನು ಹಂಚಿಕೊಂಡರು.

ಲಿಡ್‌ಕರ್ ವತಿಯಿಂದ ಜಾರಿಯಲ್ಲಿರುವ ಕೌಶಲ್ಯಾಭಿವೃದ್ಧಿ, ಚರ್ಮಶಿಲ್ಪಿ, ಕಾಯಕಸ್ಫೂರ್ತಿ, ಸ್ವಾವಲಂಬಿ, ಸಂಚಾರಿ ಮಾರಾಟ ಮಳಿಗೆ, ಪಾದುಕೆ ಕುಟೀರ, ನೇರ ಸಾಲ, ಮಾರುಕಟ್ಟೆ ಸಹಾಯ, ವಸತಿ ಕಾರ್ಯಾಗಾರ ಹಾಗೂ ಪ್ರಗತಿ ಲಿಡ್‌ಕರ್ ಕಾಲೋನಿ ಸೇರಿದಂತೆ ವಿವಿಧ ಯೋಜನೆಗಳ ಕುರಿತು ವಿವರವಾದ ಮಾಹಿತಿ ನೀಡಲಾಯಿತು.

ಸಂವಾದದಲ್ಲಿ ವ್ಯಕ್ತವಾದ ಅಭಿಪ್ರಾಯಗಳನ್ನು ಆಧರಿಸಿ ಚರ್ಮ ಕುಶಲಕರ್ಮಿಗಳ ಸಾಮಾಜಿಕ, ಆರ್ಥಿಕ ಹಾಗೂ ವೃತ್ತಿಪರ ಸಬಲೀಕರಣಕ್ಕಾಗಿ ಕಾರ್ಯಸಾಧ್ಯ ಶಿಫಾರಸುಗಳನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಅಧ್ಯಕ್ಷ ಮುಂಡರಗಿ ನಾಗರಾಜ್ ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ನೂರಾರು ಚರ್ಮ ಕುಶಲಕರ್ಮಿಗಳು, ಲಿಡ್‌ಕರ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸಿದರು.

## ಗುಣಮಟ್ಟದ ಹಾಲು ಸರಬರಾಜು ಮಾಡಿ ಉತ್ತಮ ಲಾಭಗಳಿಸಿ: ಎಸ್.ಪಿ.ಮುನಿರಾಜು



ದೇವನಹಳ್ಳಿ

ರೈತರು ಗುಣಮಟ್ಟದ ಹಾಲು ಸರಬರಾಜು ಮಾಡಿ ಉತ್ತಮ ಲಾಭಗಳಿಸಿ, ಇಲತೊರೆ ಸಹಕಾರ ಸಂಘ ಗುಣಮಟ್ಟದ ಹಾಲು ಸರಬರಾಜು ಮಾಡುತ್ತಿರುವುದರಿಂದ ಉತ್ತಮ ಲಾಭಗಳಿಸಿದೆ ಎಂದು ಬಮುಲ್ ನಿರ್ದೇಶಕ ಎಸ್.ಪಿ.ಮುನಿರಾಜು ತಿಳಿಸಿದರು.

ತಾಲೂಕಿನ ಇಲತೊರೆ ಹಾಲು ಉತ್ಪಾದಕರ ಸಹಕಾರ ಸಂಘದ 2025–26ನೇ ಸಾಲಿನ ವಾರ್ಷಿಕ ಸಮಾನ್ಯ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು. ದೇವನಹಳ್ಳಿ ತಾಲೂಕಿನಿಂದ ಅತಿ ಹೆಚ್ಚು ಹಾಲೂ ಒಕ್ಕೂಟಕ್ಕೆ ರೈತರು ಸರಬರಾಜು ಮಾಡುತ್ತಿದ್ದಾರೆ. 12 ಸಾವಿರ ಹಾಲು ಉತ್ಪಾದಕರ ಖಾತೆ 360 ಕೋಟಿ ಹಣವನ್ನು ಅವರ ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ. ಬಮುಲ್ ನಿಂದ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡಲಾಗುತ್ತಿದೆ ಆಸಕ್ತ ಉತ್ಪಾದಕರ ಮಕ್ಕಳು ಡೈರಿ ಪಾರಂ ತೆರದು ಆರ್ಥಿಕವಾಗಿ ಸದೃಢರಾಗಬೇಕು ಎಂದರು.

ಇದೆ ವೇಳೆ ಇಲತೊರೆ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಜಯರಾಂ.ಎಂ, ಮುನಿಕೃಷ್ಣ, ನಾಗೇಶ್, ಕೆಂಪೇಗೌಡ.ಎಂ, ಮಂಜುನಾಥ್. ಸಿ, ದ್ವಾರಕೀಶ್, ಗೋಪಾಲಪ್ಪ, ನರಸಿಂಹ, ಮಾದೇವಿ, ಸಾವಿತ್ರಮ್ಮ, ಗೌರಮ್ಮ, ಮುಖ್ಯಕಾರ್ಯನಿರ್ವಾಹಕ ಐ.ಸಿ.ವಿಜಯ್‌ಕುಮಾರ್, ಹಾಲು ಪರೀಕ್ಷಕ ಶಿವಣ್ಣ.ಎಂ, ಗುಮಾಸ್ತ ಹರೀಶ್ ಹಾಲು ಉತ್ಪಾದಕರು ಸಾರ್ವಜನಿಕರು ಇದ್ದರು.

## ತೆರೆದ ಮನೆ ಕಾರ್ಯಕ್ರಮ

ಬೂದಿಕೋಟೆ

ವಿದ್ಯಾರ್ಥಿಗಳಲ್ಲಿ ಕಾನೂನು ಅರಿವು, ಸಾಮಾಜಿಕ ಹೊಣೆಗಾರಿಕೆ ಹಾಗೂ ಶಿಸ್ತು ಮನೋಭಾವ ಬೆಳೆಸುವುದು ಅತ್ಯಂತ ಅಗತ್ಯವಾಗಿದೆ ಎಂದು ಇಲ್ಲಿನ ಪೊಲೀಸ್ ಠಾಣೆಯ ಪಿಎಸ್‌ಐ ಗುರುರಾಜ್ ಚಿಂತಕಲ್ ಹೇಳಿದರು.

ಬೂದಿಕೋಟೆಯ ಸರ್ಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳನ್ನು ‘ತೆರೆದ ಮನೆ ಕಾರ್ಯಕ್ರಮ’ ಅಂಗವಾಗಿ ಪೊಲೀಸ್ ಠಾಣೆಗೆ ಆಹ್ವಾನಿಸಿ, ಪೊಲೀಸ್ ಇಲಾಖೆಯ ಕಾರ್ಯವೈಖರಿ ಹಾಗೂ ಸಾರ್ವಜನಿಕ ಸೇವೆಗಳ ಕುರಿತು ಮಾಹಿತಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು,

ಪೊಲೀಸ್ ಇಲಾಖೆ ಕೇವಲ ಅಪರಾಧಿಗಳನ್ನು ಬಂಧಿಸುವ ಇಲಾಖೆಯಲ್ಲ ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವುದು, ಜನರಲ್ಲಿ ಕಾನೂನು ಅರಿವು ಮೂಡಿಸುವುದು ಹಾಗೂ ಸಂಕಷ್ಟದಲ್ಲಿರುವವರಿಗೆ ನೆರವಾಗುವುದು ಇಲಾಖೆಯ ಪ್ರಮುಖ ಕರ್ತವ್ಯವಾಗಿದೆ. ವಿದ್ಯಾರ್ಥಿಗಳು ಕಾನೂನಿನ ಬಗ್ಗೆ ತಿಳಿದುಕೊಂಡು ಜವಾಬ್ದಾರಿಯುತ ನಾಗರಿಕರಾಗಿ ಬೆಳೆಯಬೇಕು ಎಂದರು.

ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು. ದ್ವಿಚಕ್ರ ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸುವುದು, ವಾಹನ ಚಾಲನೆ ವೇಳೆ ಮೊಬೈಲ್ ಬಳಸದಿರುವುದು ಹಾಗೂ ಅಪ್ರಾಪ್ತ ವಯಸ್ಸಿನಲ್ಲಿ ವಾಹನ ಚಾಲನೆ ಮಾಡದಿರುವುದು ಅತ್ಯಂತ ಮುಖ್ಯವಾಗಿದೆ ಎಂದರು. ಪೋಕ್ಸೋ ಕಾಯ್ದೆಯ ಕುರಿತು ಮಾಹಿತಿ ನೀಡಿದ ಅವರು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಈ ಕಾಯ್ದೆ ಜಾರಿಯಲ್ಲಿದ್ದು, ಮಕ್ಕಳ ಹಕ್ಕುಗಳನ್ನು ಪ್ರತಿಯೊಬ್ಬರೂ ಗೌರವಿಸಬೇಕು. ಯಾವುದೇ ರೀತಿಯ ಕಿರುಕುಳ ಅಥವಾ ದೌರ್ಜನ್ಯ ಕಂಡುಬಂದರೆ ಕೂಡಲೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು ಎಂದರು. ಪೊಲೀಸ್ ಸಿಬ್ಬಂದಿ, ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಪ್ರಭಾರ ಅಧ್ಯಕ್ಷ ಡಾ.ಬಿ.ಪ್ರಭುದೇವ ರವರು ಉತ್ತರಪ್ರದೇಶ ಲೋಕಸೇವಾ ಆಯೋಗದ ಅಧ್ಯಕ್ಷ ಸಂಜಯ್ ಶ್ರೀನೆತ್ ರವರೊಂದಿಗೆ ನೇಮಕಾತಿ ವಿಷಯದ ಬಗ್ಗೆ ಸಭೆಯಲ್ಲಿ ಕಾರ್ಯದರ್ಶಿ ಕೆ. ಜ್ಯೋತಿ ಹಾಗೂ ಪರೀಕ್ಷಾ ನಿಯಂತ್ರಕರಾದ ವಿಜಯ್ ಬೋಡ್ಕೆ ಮತ್ತು ಎಲ್ಲಾ ಸದಸ್ಯರುಗಳು ಭಾಗವಹಿಸಿ ಕೂಲಂಕಷವಾಗಿ ಚರ್ಚೆ ನಡಸಿದರು.

## ನೀಟ್ ಅಕ್ರಮ ತನಿಖೆಗೆ ಆಗ್ರಹಿಸಿ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಕೆ

ಮಾಲೂರು

ನೀಟ್ ಪರೀಕ್ಷೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಜೊತೆಗೆ ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ನಡೆದ ಲಾಠಿಚಾರ್ಜ್ ಅನ್ನು ಖಂಡಿಸಿ ಯುವ ಕಾಂಗ್ರೆಸ್ ವತಿಯಿಂದ ತಹಶೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ನಗರದ ಸರ್ಕಾರಿ ಜೂನಿಯರ್ ಕಾಲೇಜು ಕ್ರೀಡಾಂಗಣದಲ್ಲಿ ಯುವ ಕಾಂಗ್ರೆಸ್ ಅಧ್ಯಕ್ಷ ಎಂ.ಎಂ. ತನ್ವೀರ್ ಹಾಗೂ ಮಾಸ್ತಿ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ದೊಡ್ಡಿ ವಸಂತ್ ಅವರ ನೇತೃತ್ವದಲ್ಲಿ ಜಮಾಯಿಸಿ ತಾಲ್ಲೂಕು ಕಚೇರಿ ವರೆಗೂ ಜಾಥಾ ಮೂಲಕ ಯುವ ಕಾಂಗ್ರೆಸ್ ಕಾರ್ಯಕರ್ತರು, ಕಾಲೇಜು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು. ಆದ್ದರಿಂದ ಪ್ರಕರಣದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ, ಅಕ್ರಮದಲ್ಲಿ ಭಾಗಿಯಾಗಿರುವ ಎಲ್ಲ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಕೇಂದ್ರ ಶಿಕ್ಷಣ ಸಚಿವರನ್ನು ವಜಾಗೊಳಿಸಿ, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಪರೀಕ್ಷಾ ವ್ಯವಸ್ಥೆಯನ್ನು ಇನ್ನಷ್ಟು ಪಾರದರ್ಶಕ ಹಾಗೂ ಸುರಕ್ಷಿತಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಯುವ ಕಾಂಗ್ರೆಸ್ ಆಗ್ರಹಿಸಿದೆ.



ಎಂ.ಎಂ. ತನ್ವೀರ್, ದೊಡ್ಡಿ ವಸಂತ್, ರೋಹಿತ್ ನಾರಾಯಣ್, ಎಂ.ಸಂಜು ಮೋನಿಷ್,ಡಾ. ಪಿ.ಜಿ.ಗಿರಿ, ಇಂದು ಮಂಗಲ ಲೋಕೇಶ್, ಉದಯ್, ರಾಮಮೂರ್ತಿ, ಹೇಮಾಮಾಲಿನಿ ಹಾಜರಿದ್ದರು.

## ವಿಪತ್ತು ನಿರ್ವಹಣೆ ತಾಲೂಕು ಮಟ್ಟದ ಅಧಿಕಾರಿಗಳೇ ಹೊಣೆ: ಡಿಸಿ

ತುಮಕೂರು

ಜಿಲ್ಲೆಯಲ್ಲಿ ವಿಪತ್ತು ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸದಿದ್ದಲ್ಲಿ ಆಯಾ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನೇ ನೇರವಾಗಿ ಹೊಣೆ ಮಾಡಲಾಗುವುದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು, ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಗುರುವಾರ ಜಿಲ್ಲೆಯಲ್ಲಿ ಬರ ಪರಿಸ್ಥಿತಿ, ಮುಂಗಾರು ಹಂಗಾಮು, ಕೋವಿಡ್ ಮುನ್ನೆಚ್ಚರಿಕೆ, ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಕಾರ್ಯಚಟುವಟಿಕೆ ಹಾಗೂ ಕುಡಿಯುವ ನೀರಿನ ನಿರ್ವಹಣೆ ಕುರಿತು ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಪ್ರಸಕ್ತ ಮುಂಗಾರು ಮಳೆ ಹಾಗೂ ಋತುಮಾನ ಪರಿಸ್ಥಿತಿ, ಬಿತ್ತನೆ ಪ್ರಗತಿ, ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಲಭ್ಯತೆ ಕುರಿತು ಸಮಗ್ರವಾಗಿ ಪರಿಶೀಲಿಸಿದ ಅವರು, ರೈತರಿಗೆ ಅಗತ್ಯ ಕೃಷಿ ಪರಿಕರಗಳು ಸಕಾಲದಲ್ಲಿ ಲಭ್ಯವಾಗುವಂತೆ ಕ್ರಮವಹಿಸಬೇಕೆಂದು ಸೂಚಿಸಿದರು.




ನೆರೆಯ ಆಂಧ್ರಪ್ರದೇಶದಲ್ಲಿ ಕೋವಿಡ್ ಸೋಂಕಿನಿಂದ ಸಾವು ಸಂಭವಿಸಿರುವ ಹಿನ್ನೆಲೆಯಲ್ಲಿ, ಗಡಿಭಾಗದ ಪಾವಗಡ ತಾಲ್ಲೂಕಿನಲ್ಲಿ ಕೋವಿಡ್ ಸೋಂಕು ನಿಯಂತ್ರಣ ಮತ್ತು ಮುನ್ನೆಚ್ಚರಿಕಾ ಕ್ರಮಗಳ ಕುರಿತು ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಯಿತು. ಅಗತ್ಯ ಔಷಧಿ, ಆರೋಗ್ಯ ಸೌಲಭ್ಯಗಳು ಹಾಗೂ ನಿಗಾ ಕ್ರಮಗಳನ್ನು ಕೈಗೊಂಡು ಕೋವಿಡ್ ಮುನ್ನೆಚ್ಚರಿಕೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಸರಬರಾಜು ವ್ಯವಸ್ಥೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಬೇಕು. ಯಾವುದೇ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಮಾತನಾಡಿ, ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಕೇವಲ ನಡಾವಳಿಯನ್ನು ತಯಾರಿಸುವುದಷ್ಟೇ ಸಾಲದು. ಸಭೆಯಲ್ಲಿ ಕೈಗೊಂಡ ನಿರ್ಣಯಗಳಂತೆ ಎಲ್ಲಾ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ಸ್ಥಳ ಪರಿಶೀಲನೆ ನಡೆಸುವುದು ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು .

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಉಪವಿಭಾಗಾಧಿಕಾರಿ ನಾಹಿದಾ ಝಂ ಝಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ, ಜಿಲ.ಪಂ ಮುಖ್ಯ ಯೋಜನಾಧಿಕಾರಿ ಸಣ್ಣಮಸಿಯಪ್ಪ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ, ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ರಸ್ತೆ ಕಾಮಗಾರಿ ಶೀಘ್ರ ಆರಂಭ



ತುಮಕೂರು

ರಾಷ್ಟ್ರೀಯ ಹೆದ್ದಾರಿ–69 ಶಿರಾ–ಬಡವನಹಳ್ಳಿ ಚತುಷ್ಪಥ ರಸ್ತೆ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಕಾಮಗಾರಿ ಪ್ರಾರಂಭಿಸಲು ಕೇಂದ್ರ ಸರ್ಕಾರದ ಭೂಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಜುಲೈ 22ರಂದು ಗುತ್ತಿಗೆ ಆದೇಶ ನೀಡಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲ ಶಕ್ತಿ ರಾಜ್ಯ ಖಾತೆ ಸಚಿವ ಹಾಗೂ ಸಂಸದ ವಿ. ಸೋಮಣ್ಣ ತಿಳಿಸಿದ್ದಾರೆ.

ರಾಷ್ಟ್ರೀಯ ಹೆದ್ದಾರಿ–69ರ ಶಿರಾ–ಬಡವನಹಳ್ಳಿ ಚತುಷ್ಪಥ ರಸ್ತೆ ಕಾಮಗಾರಿಗೆ ಅನುಮೋದನೆ ನೀಡುವಂತೆ 2025ರ ಫೆಬ್ರವರಿ 6ರಂದು ಮಾಡಲಾಗಿದ್ದ ಮನವಿಗೆ ಸ್ಪಂದಿಸಿದ ಕೇಂದ್ರ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಈ ಕಾಮಗಾರಿ ಕೈಗೊಳ್ಳಲು ಅನುಮೋದನೆ ನೀಡುವುದಾಗಿ ಭರವಸೆ ನೀಡಿದ್ದರು.

ಅದರಂತೆ 2025ರ ಮಾರ್ಚ್ 7ರಂದು ರಾಷ್ಟ್ರೀಯ ಹೆದ್ದಾರಿ–69ರ ಶಿರಾ–ಬಡವನಹಳ್ಳಿ 20.2 ಕಿ.ಮೀ. ಉದ್ದದ ಚತುಷ್ಪಥ ರಸ್ತೆಗೆ 584.98 ಕೋಟಿ ರೂ. ವೆಚ್ಚದ ಕಾಮಗಾರಿಗೆ ಕೇಂದ್ರ ಸರ್ಕಾರದಿಂದ ಅನುಮೋದನೆ ನೀಡಲಾಗಿತ್ತು.

ತುಮಕೂರು ಜಿಲ್ಲೆಯ ಅಭಿವೃದ್ಧಿಗೆ ಸಹಕಾರ ನೀಡಿದ ಪ್ರಧಾನಿ ನರೇಂದ್ರ ಮೋದಿಯವರಿಗೆ ಮತ್ತು ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಕೇಂದ್ರ ಸಚಿವ ವಿ. ಸೋಮಣ್ಣ ತುಮಕೂರು ಜನತೆಯ ಪರವಾಗಿ ಅಭಿನಂದನೆ ಸಲ್ಲಿಸಿದ್ದಾರೆ.

## ‘ವಿದ್ಯಾರ್ಥಿಗಳು ಸಂಸ್ಕಾರ, ಕೌಶಲ್ಯ, ಸೇವಾ ಮನೋಭಾವ ಹೊಂದಿರಬೇಕು’



ತಿಪಟೂರು

ವಿದ್ಯಾರ್ಥಿಗಳು ಅಂಕಗಳ ಹಿಂದೆ ಹೋಗದೆ, ಸಂಸ್ಕಾರ, ಕೌಶಲ್ಯ ಮತ್ತು ಸೇವಾ ಮನೋಭಾವ ಹೊಂದಿದಾಗ ಮಾತ್ರ ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ನಿವೃತ್ತ ಎಸಿಪಿ ಲೋಕೇಶ್ವರ ತಿಳಿಸಿದರು.

ನಗರದ ಸೀತಾರಾಮಯ್ಯ ಕಲ್ಯಾಣ ಮಂಟಪದ ಸಭಾಂಗಣದಲ್ಲಿ ಟೈಮ್ಸ್ ಪಿಯು ಕಾಲೇಜು ವತಿಯಿಂದ ಹಮ್ಮಿಕೊಂಡಿದ್ದ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಶ್ರೇಣಿಯೊಂದಿಗೆ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಗರದಲ್ಲಿ ಸುಮಾರು 4 ವರ್ಷದ ಹಿಂದೆ ಟೈಮ್ಸ್ ವಿದ್ಯಾ ಸಂಸ್ಥೆ ನಗರದಲ್ಲಿ ಕಾಲೇಜು ತೆರೆದು, ಇಂದು ಗ್ರಾಮೀಣ ಮತ್ತು ನಗರ ವಿದ್ಯಾರ್ಥಿಗಳಿಗೆ ಉತ್ತಮ ಸೌಲಭ್ಯದೊಂದಿಗೆ, ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ತಾಲೂಕಿನಲ್ಲಿ ಅತ್ಯುತ್ತಮ ಅಂಕ ಗಳಿಸುವುದರ ಮೂಲಕ ಜಿಲ್ಲೆಯಲ್ಲಿ ಉತ್ತಮ ಕಾಲೇಜು ಆಗಿ ಮತ್ತು ಮಾದರಿಯಾಗಿ ಬೆಳೆಯುತ್ತಿದೆ. ಆಡಳಿತ ಮಂಡಳಿಯ ಮತ್ತು ಸಿಬ್ಬಂದಿಗಳ ಕಾರ್ಯಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಕಾರ್ಯಕ್ರಮದಲ್ಲಿ ನಗರಸಭೆ ಮಾಜಿ ಸದಸ್ಯ ಎಂ.ಎಸ್. ಯೋಗೀಶ್, ಬಿ.ಕೆ. ಗಂಗಾಧರ್ ಪ್ರದೀಪ್, ಅನೂಪ್, ಯೋಗೀಶ್ ಸೇರಿದಂತೆ ಉಪನ್ಯಾಸಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಹಾಜರಿದ್ದರು.

## ನೇತ್ರ ತಪಾಸಣೆ, ಶಸ್ತ್ರಚಿಕಿತ್ಸೆ ಶಿಬಿರ

ಕನಕಪುರ

ಲಯನ್ಸ್ ಮತ್ತು ಲಿಯೋ ಕ್ಲಬ್ ಆಫ್ ಕನಕಪುರ ಹಾಗೂ ಬೆಂಗಳೂರಿನ ಶ್ರದ್ಧಾ ಐ.ಕೇರ್ ಸಹಯೋಗದಲ್ಲಿ ಕಳೆದ 15 ವರ್ಷಗಳಿಂದ ಪ್ರತಿ ತಿಂಗಳು ಉಚಿತ ನೇತ್ರ ತಪಾಸಣೆ ಹಾಗೂ ಕಣ್ಣಿನ ಶಸ್ತ್ರಚಿಕಿತ್ಸೆ ಶಿಬಿರವನ್ನು ನಿರಂತರವಾಗಿ ಯಶಸ್ವಿಯಾಗಿ ನಡೆಸುತ್ತಿದೆ.

ಈ ಸೇವೆಯಿಂದ ಸಾವಿರಾರು ತಾಲ್ಲೂಕಿನ ಗ್ರಾಮೀಣ ಜನರು ಪ್ರಯೋಜನ ಪಡೆದಿದ್ದಾರೆ ಎಂದು ಲಯನ್ಸ್ ಮರಸಪ್ಪ ರವಿ ತಿಳಿಸಿದರು.

ಪ್ರತಿ ತಿಂಗಳು ನಡೆಯುವ ಈ ಶಿಬಿರದಲ್ಲಿ ನೇತ್ರ ತಜ್ಞ ವೈದ್ಯರು ಸಾರ್ವಜನಿಕರ ಕಣ್ಣಿನ ಸಮಗ್ರ ತಪಾಸಣೆ ನಡೆಸುತ್ತಾರೆ, ತಪಾಸಣೆಯ ನಂತರ ಕಣ್ಣಿನ ಪೊರೆ ಸೇರಿದಂತೆ ಶಸ್ತ್ರಚಿಕಿತ್ಸೆ ಅಗತ್ಯವಿರುವ ರೋಗಿಗಳನ್ನು ಆಯ್ಕೆ ಮಾಡಿ, ಅವರಿಗೆ ಉಚಿತ ಅಥವಾ ರಿಯಾಯಿತಿ ದರದಲ್ಲಿ ಶಸ್ತ್ರಚಿಕಿತ್ಸೆಯ ವ್ಯವಸ್ಥೆ ಮಾಡುವುದರಿಂದ ಆರ್ಥಿಕವಾಗಿ ಹಿಂದುಳಿದ ಗ್ರಾಮೀಣ ಕುಟುಂಬಗಳಿಗೆ ಉತ್ತಮ ಗುಣಮಟ್ಟದ ನೇತ್ರ ಚಿಕಿತ್ಸೆ ದೊರೆಯುತ್ತಿದೆ ಎಂದರು.

ತಾಲ್ಲೂಕಿನಲ್ಲಿ ಕಳೆದ ಒಂದೂವರೆ ದಶಕದಿಂದ ನಿರಂತರವಾಗಿ ನಡೆಯುತ್ತಿರುವ ಈ ಸೇವಾ ಕಾರ್ಯವು ಅನೇಕ ಹಿರಿಯ ನಾಗರಿಕರು ಹಾಗೂ ಗ್ರಾಮೀಣ ಭಾಗದ ಜನರಿಗೆ ಮತ್ತೆ ದೃಷ್ಟಿ ನೀಡುವ ಮೂಲಕ ಅವರ ಜೀವನದಲ್ಲಿ ಹೊಸ ಬೆಳಕನ್ನು ಮೂಡಿಸಿದೆ, ಸಮಯಕ್ಕೆ ಸರಿಯಾಗಿ ಚಿಕಿತ್ಸೆ ದೊರೆತ ಕಾರಣ ಅನೇಕರು ತಮ್ಮ ದೈನಂದಿನ ಜೀವನವನ್ನ ಸ್ವಾವಲಂಬಿಯಾಗಿ ನಡೆಸಲು ಸಾಧ್ಯವಾಗಿದೆ ಎಂದರು.

ಲಯನ್ಸ್ ಕ್ಲಬ್ ಆಫ್ ಕನಕಪುರ, ಲಿಯೋ ಕ್ಲಬ್ ಆಫ್ ಕನಕಪುರ ಹಾಗೂ ಶ್ರದ್ಧಾ ಐ ಕೇರ್‌ನ ಈ ಜಂಟಿ ಸೇವಾ ಕಾರ್ಯಕ್ಕೆ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತ ವಾಗಿದ್ದು, ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಜನಪರ ಆರೋಗ್ಯ ಸೇವೆಗಳನ್ನು ನಿರಂತರವಾಗಿ ಮುಂದುವರಿಸುವುದಾಗಿ ತಿಳಿಸಿದರು.

ಲಯನ್ಸ್ ಸಂಸ್ಥೆ ಅಧ್ಯಕ್ಷ ಪ್ರದೀಪ್, ಕಾರ್ಯದರ್ಶಿ ರವಿ ಪಾಲ್, ಖಜಾಂಚಿ ಮಹೇಶ್, ಗೋಪಾಲ್ ರಾಜ್, ಚಂದ್ರಶೇಖರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಇಂದು ವಿದ್ಯುತ್ ವ್ಯತ್ಯಯ

ರಾಮನಗರ

66/11 ಕೆವಿ ಮೆಳೆಹಳ್ಳಿ ವಿದ್ಯುತ್ ಉಪಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಮೆಳೆಹಳ್ಳಿ, ಹರೀಸಂದ್ರ, ತಿಮ್ಮಸಂದ್ರ, ಅಂಕನಹಳ್ಳಿ, ಮದರಸಾಬರದೊಡ್ಡಿ, ಲಕ್ಕಸಂದ್ರ, ಪಾದರಹಳ್ಳಿ, ರಾಂಪುರ, ಲಕ್ಷ್ಮೀಪುರ, ಸುಗ್ಗನಹಳ್ಳಿ, ಗುಂಗರಹಳ್ಳಿ, 66ಕೆವಿ ಅದಾನಿ ಸೋಲಾರ್ ಐ.ಪಿ.ಪಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜು. 24ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಬಿಜೆಪಿ ಟೀಕೆ: ಕಾಂಗ್ರೆಸ್ ಧೋರಣೆ ಖಂಡಿಸಿ ಪ್ರತಿಭಟನೆ

ತುಮಕೂರು

ದೇಶದಲ್ಲಿ ಅರಾಜಕತೆ ಸೃಷ್ಟಿಸುತ್ತಿರುವ ಹಾಗೂ ರಾಜ್ಯದಲ್ಲಿ ಬಿಜೆಪಿ ಶಾಸಕರ ಮೇಲೆ ಗೂಂಡಾಗಿರಿ ನಡೆಸುತ್ತಿರುವ ಕಾಂಗ್ರೆಸ್ ಧೋರಣೆ ಖಂಡಿಸಿ ಗುರುವಾರ ಜಿಲ್ಲಾ ಬಿಜೆಪಿ ಮುಖಂಡರು ನಗರದಲ್ಲಿ ಪ್ರತಿಭಟನೆ ನಡೆಸಿದರು. ಬಿಜಿಎಸ್ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಕಾಂಗ್ರೆಸ್ ವರ್ತನೆ ಖಂಡಿಸಿದರು.




ಈ ವೇಳೆ ಮಾತನಾಡಿದ ಶಾಸಕ ಜಿ.ಬಿ. ಜ್ಯೋತಿ ಗಣೇಶ್, ಜನರಿಂದ ತಿರಸ್ಕೃತರಾಗಿರುವ ಕಾಂಗ್ರೆಸ್, ಜನರ ವಿಶ್ವಾಸ ಗಳಿಸಿ ಅಧಿಕಾರದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವನ್ನು ಅಭದ್ರಗೊಳಿಸಲು ಹೊರಟಿರುವುದು ನಾಚಿಕೆಗೇಡು. ನೀಟ್ ಪರೀಕ್ಷೆ ನೆಪ ಮಾಡಿಕೊಂಡು ದೇಶದ್ರೋಹಿಗಳ ಜೊತೆ ಸೇರಿ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ಬುಡಮೇಲು ಮಾಡುವ ಮೂಲಕ ರಾಜಕೀಯ ಲಾಭ ಪಡೆಯಲು ಹೊರಟ ಕಾಂಗ್ರೆಸ್ ಉದ್ದೇಶ ಈಡೇರುವುದಿಲ್ಲ ಎಂದು ಕಿಡಿಕಾರಿದರು.

ಕಾಕ್ರೋಚ್ ಜನತಾಪಾರ್ಟಿಗೆ ಭಾರತದ ಬಗ್ಗೆ ಗೌರವವಿಲ್ಲ, ಅಂತಹವರ, ನೇಪಾಳದಂತೆ, ಶ್ರೀಲಂಕಾ ದಂತೆ, ಬಾಂಗ್ಲಾದಂತೆ ಭಾರತದಲ್ಲಿ ಅರಾಜಕತೆ ಸೃಷ್ಟಿ ಮಾಡುತ್ತೇವೆ ಎನ್ನುವ ದೇಶದ್ರೋಹಿಗಳ ಜೊತೆ ಸೇರಿರುವ ಕಾಂಗ್ರೆಸ್‌ನ ಉದ್ದೇಶ ದೇಶದ ಜನರಿಗೆ ತಿಳಿದಿದೆ. ಮುಂದಿನ ಚುನಾವಣೆಯಲ್ಲಿ ತಕ್ಕಪಾಠ ಕಲಿಸುತ್ತಾರೆ. ವಿಶ್ವದ ಅನೇಕ ರಾಷ್ಟ್ರಗಳ ಅಭದ್ರತೆಯಲ್ಲಿರುವಾಗ ಪ್ರಧಾನಿ ಮೋದಿಯವರ ಆಡಳಿತದಿಂದಾಗಿ ಭಾರತ ಸುಭದ್ರವಾಗಿದೆ. ಸರ್ಕಾರದ ಉತ್ತಮ ಆಡಳಿತ ಸಹಿಸದ ಕಾಂಗ್ರೆಸ್ ದೇಶದ್ರೋಹಿಗಳ ಜೊತೆ ಸೇರಿ ಪ್ರಜಾಪ್ರಭುತ್ವ ವ್ಯವಸ್ಥೆ ಹಾಳು ಮಾಡುತ್ತಿದೆ ಎಂದು ಟೀಕಿಸಿದರು.

ನೀಟ್ ಪರೀಕ್ಷೆ ವಿಚಾರವಾಗಿ ದೆಹಲಿಯಲ್ಲಿ ನಡೆಯುತ್ತಿರುವ ಪರೀಕ್ಷೆಯಲ್ಲಿ ಕೆಲವೇ ವಿದ್ಯಾರ್ಥಿಗಳಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಗೂಂಡಾಗಳು ಸೇರಿಕೊಂಡಿದ್ದಾರೆ. ಕಾಂಗ್ರೆಸ್ ಪಕ್ಷ ಅವರಿಗೆ ಬೆಂಬಲವಾಗಿ ನಿಂತಿರುವುದು ದುರಾದೃಷ್ಟಕರ, ಇದು ಕಾಂಗ್ರೆಸ್‌ನ ಅವಸಾನ. ಇದನ್ನೇ ನೆಪ ಮಾಡಿಕೊಂಡು ಕಾಂಗ್ರೆಸ್ ದೇಶದಲ್ಲಿ ಗಲಭೆ ಎಬ್ಬಿಸಲು ಹೊರಟಿದೆ. ಬೆಂಗಳೂರಿನಲ್ಲಿ ಬಿಜೆಪಿ ಶಾಸಕರ ಮೇಲೆ ಕಾಂಗ್ರೆಸ್‌ನವರು ಹಲ್ಲೆ ಮಾಡಿದ್ದಾರೆ, ಮೊಟ್ಟೆ ಎಸೆದಿದ್ದಾರೆ. ಇದು ಖಂಡನೀಯ, ಬಿಜೆಪಿ ಸಹಿಸುವುದಿಲ್ಲ ಎಂದು ಜ್ಯೋತಿಗಣೇಶ್ ಹೇಳಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್. ರವಿಶಂಕರ್ ಹೆಬ್ಬಾಕ ಮಾತನಾಡಿ, ಕಾಂಗ್ರೆಸ್ ಪಕ್ಷ ಅವಸಾನದ ಅಂಚಿನಲ್ಲಿದೆ. ದೇಶದಲ್ಲಿ ಕೇವಲ ಮೂರು ಕಡೆ ಕಾಂಗ್ರೆಸ್ ಆಡಳಿತದಲ್ಲಿದೆ. ಉತ್ತಮ ಆಡಳಿತ ನಡೆಸುತ್ತಿರುವ ಪ್ರಧಾನಿ ಮೋದಿಯವರ ವರ್ಚಸ್ಸು ಕಳೆಯಲು, ತನ್ನ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವುದಕ್ಕಾಗಿ ಕಾಂಗ್ರೆಸ್ ದೇಶದ್ರೋಹಿಗಳೊಂದಿಗೆ ಸೇರಿ ಗಲಭೆ ಮಾಡಲು ಹೊರಟಿದೆ. ಮೋದಿ ಸರ್ಕಾರ ಇದಕ್ಕೆ ಅವಕಾಶ ನೀಡುವುದಿಲ್ಲ. ಗಲಭೆಕೋರರನ್ನು ಮಟ್ಟಹಾಕುತ್ತದೆ ಎಂದು ಹೇಳಿದರು.

ವಿದ್ಯಾರ್ಥಿಗಳನ್ನು ಕಾಂಗ್ರೆಸ್ ಪಕ್ಷ ರಾಜಕೀಯ ಸ್ವಾರ್ಥಕ್ಕೆ ಬಳಸಿಕೊಳ್ಳುತ್ತಿರುವುದು ಖಂಡನೀಯ. ರಾಜ್ಯದಲ್ಲಿ ಕಾಂಗ್ರೆಸ್‌ನವರು ಬಿಜೆಪಿ ಶಾಸಕರ ಮೇಲೆ ಹಲ್ಲೆ ಮಾಡಿದ್ದಾರೆ. ಪ್ರಜಾಪ್ರತಿನಿಧಿಗಳ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಸರ್ಕಾರ ಕೂಡಲೇ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಟಿ.ಹೆಚ್. ಹನುಮಂತರಾಜು, ಧನುಷ್, ಚೈತ್ರ ಮಂಜುನಾಥ್, ವಸಂತ ಸುದರ್ಶನ್, ವಿನಯ್ ಜೈನ್, ಸತ್ಯಮಂಗಲ ಜಗದೀಶ್, ಕೆ. ವೇದಮೂರ್ತಿ, ನವಚೇತನ್, ಬಂಬೂ ಮೋಹನ್, ಪ್ರೀತಂ ಜೈನ್, ವಿರೂಪಾಕ್ಷಪ್ಪ, ಸಿ.ಎನ್. ರಮೇಶ್, ಮಲ್ಲಿಕಾರ್ಜುನ್, ಪುಟ್ಟರಾಜು, ಹನುಮಂತರಾಜು, ರೇಖಾರಾಜ್, ಸಿದ್ಧಗಂಗಯ್ಯ, ಅಂಜನಮೂರ್ತಿ, ಗಂಗೇಶ್ ಹದ್ದಿನಕಲ್ಲು, ವೆಂಕಟೇಶಾಚಾರ್, ಎನ್. ರಾಜಣ್ಣ, ಬ್ರಹ್ಮಪ್ರಕಾಶ್, ಜಗದೀಶ್ ಸೇರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

## 25,26 ರಂದು ವಿದ್ಯುತ್ ವ್ಯತ್ಯಯ

ತುಮಕೂರು

ಬೆಸ್ಕಾಂ ಕ್ಯಾತ್ಸಂದ್ರ ಉಪವಿಭಾಗ ವ್ಯಾಪ್ತಿಯಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಂಡಿರುವುದರಿಂದ ಇದೇ 25 ಹಾಗೂ 26ರಂದು ಬೆಳಿಗ್ಗೆ 11 ರಿಂದ ಸಂಜೆ 6 ಗಂಟೆಯವರೆಗೆ ಮುಳುಕುಂಟೆ, ತೊಂಡಗೆರೆ, ಗವಿಯಪ್ಪನಪಾಳ್ಯ, ಬಿದನಗೆರೆ ಗ್ರಾಮ ಹಾಗೂ ಹೊನ್ನುಡಿಕೆ ಮತ್ತು ಹೊನಸಿಗೆರೆ ಗ್ರಾಮಪಂಚಾಯತಿ ವ್ಯಾಪ್ತಿಗೆ ಬರುವ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ವಕೀಲರ ಸಂಘದ ಅಧ್ಯಕ್ಷರಿಗೆ ಮಾಜಿ ಶಾಸಕರಿಂದ ಅಭಿನಂದನೆ



ಚಿಂತಾಮಣಿ

ವಕೀಲರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮಂಜುನಾಥರೆಡ್ಡಿಯವರನ್ನು ಜೆಡಿಎಸ್ ಪಕ್ಷದ ಕೋರ್ ಕಮಿಟಿ ರಾಜ್ಯಾಧ್ಯಕ್ಷರು ಹಾಗೂ ಮಾಜಿ ಶಾಸಕರೂ ಆದ ಜೆಕೆ ಕೃಷ್ಣಾರೆಡ್ಡಿಯವರು ಆತ್ಮೀಯವಾಗಿ ಅಭಿನಂದಿಸಿದ್ದಾರೆ.

ನಗರ ಹೊರವಲಯದ ಜೆಕೆ ಭವನಕ್ಕೆ ಆಗಮಿಸಿದ ವಕೀಲರ ಸಂಘಕ್ಕೆ ಅವಿರೋಧವಾಗಿ ಆಯ್ಕೆಯಾಗಿರುವ ಮಂಜುನಾಥರೆಡ್ಡಿಯವರನ್ನು ಮಾಜಿ ಶಾಸಕರು ಆತ್ಮೀಯವಾಗಿ ಅಭಿನಂದಿಸಿ ಶುಭ ಹಾರೈಸಿದರು. ಈ ವೇಳೆ ಹಲವು ವಕೀಲರು ಹಾಜರಿದ್ದರು.

# ನೂತನ ಅಧ್ಯಕ್ಷರಾಗಿ ರಾಮಮೂರ್ತಿ ಅವಿರೋಧವಾಗಿ ಆಯ್ಕೆ

ದೇವನಹಳ್ಳಿ

ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಅಧ್ಯಕ್ಷಸ್ಥಾನಕ್ಕೆ ನಡೆದ ಚುನಾವಣೆ ಯಲ್ಲಿ ಬೊಮ್ಮವಾರ ಗ್ರಾಮದ ರಾಮಮೂರ್ತಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿಗಳು ಘೋಷಿಸಿದರು.



ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ನೂತನ ಅಧ್ಯಕ್ಷ ರಾಮಮೂರ್ತಿ ಮಾತನಾಡಿ ನನಗೆ ಅವಕಾಶ ಕಲ್ಪಿಸಿಕೊಟ್ಟ ಎಲ್ಲಾ ಸದಸ್ಯರಿಗೂ ಕೃತಜ್ಞತೆ ಸಲ್ಲಿಸುತ್ತೇನೆ. ಹಿಂದಿನ ಎಲ್ಲಾ ಅಧ್ಯಕ್ಷರ ಮಾರ್ಗದರ್ಶನ ಪಡೆದು ಸಂಘದಲ್ಲಿ ಆಗಬೇಕಿರುವ ಕೆಲಸಗಳನ್ನು ಹಂತಹಂತವಾಗಿ ಮಾಡಲು ಕ್ರಮವಹಿಸಲಾಗುವುದು ಹಾಗೂ ಜನತಾ ಬಜಾರ್ ಹಳೆ ಕಟ್ಟದಲ್ಲಿ ನಡೆಯುತ್ತಿದ್ದು ನೂತನ ಕಟ್ಟಡ ಕಾಮಗಾರಿಯನ್ನು ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಳಿಸಿ ಉದ್ಘಾಟನೆ ಮಾಡಲು ಕ್ರಮವಹಿಸಲಾಗುವುದು. ಸಂಘದ ವ್ಯಾಪಾರ ವಹಿವಾಟು ಹೆಚ್ಚಿಸಿ ಸಂಘಕ್ಕೆ ಹೆಚ್ಚು ಲಾಭವವನ್ನು ತರಲು ಶ್ರಮಿಸಲಾಗುವುದು. ಕಳೆದ ಉತ್ತಮ ಲಾಭಾಂಶಬಂದಿದ್ದು ಮುಂದಿನ ಸಾಲಿನಲ್ಲಿ ಮತ್ತಷ್ಟು ಲಾಭ ಗಳಿಸಲು ಪ್ರಯತ್ನಿಸಲಾಗುವುದು ಸಂಘದಿಂದ ರೈತರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಸಕಾಲಕ್ಕೆ ಒದಗಿಸಲಾಗುವುದು ಸಂಘದ ಸದಸ್ಯರು ಜನತಾ ಬಜಾರ್‌ನಲ್ಲಿ ವಹಿವಾಟು ನಡೆಸಿ ಸಂಘದ ಅಭಿವೃದ್ಧಿ ಸಹಕರಿಸಬೇಕು ಎಲ್ಲರ ಸಹಕಾರದಿಂದ ಮಾತ್ರ ಸಂಘ ಮುನ್ನಡೆಯಲು ಸಾಧ್ಯ ಎಂದರು.

ಇದೆ ವೇಳೆ ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಉಪಾಧ್ಯಕ್ಷೆ ಭಾಗಮ್ಮ, ಮಾಜಿ ಅಧ್ಯಕ್ಷ ದೇವರಾಜ್, ಮುನಿರಾಜು, ಬಿಡಿಸಿಸಿ ಬ್ಯಾಂಕ್ ನಿರ್ದೇಶಕರಾದ ರಮೇಶ್, ಹಿತ್ತರಹಳ್ಳಿ ರಮೇಶ್, ಕಾರ್ಯದರ್ಶಿ ನಾರಾಯಣಸ್ವಾಮಿ, ಮತ್ತಿತರರು ಇದ್ದರು.

# ಹಸು ಮೃತಪಟ್ಟ ರೈತರಿಗೆ ಕೋಮುಲ್ ನಿಂದ ಚೆಕ್ ವಿತರಣೆ

ಕೋಲಾರ

ತಾಲೂಕಿನ ವೇಮಗಲ್ ಹಾಗೂ ಸುಗಟೂರು ಹೋಬಳಿಯ ಸುಮಾರ 17 ಹಾಲು ಉತ್ಪಾದಕ ರೈತರ ಮೃತಪಟ್ಟ ಹಸುಗಳಿಗೆ ವಿಮೆ ಪರಿಹಾರದ ಚೆಕ್‌ಗಳನ್ನು ಕೋಮುಲ್ ನಿರ್ದೇಶಕ ಚಂಜಿಮಲೆ ಬಿ.ರಮೇಶ್ ಗುರುವಾರ ತಮ್ಮ ನಿವಾಸದಲ್ಲಿ ವಿತರಿಸಿದರು



ಈ ವೇಳೆ ಮಾತನಾಡಿದ ಅವರು ರೈತರು ಜೀವನೋಪಾಯಕ್ಕಾಗಿ ಹೈನುಗಾರಿಕೆಯನ್ನು ಹೆಚ್ಚಾಗಿ ಅವಲಂಬಿಸಿದ್ದು, ಪ್ರತಿನಿತ್ಯ ಗುಣಮಟ್ಟದ ಹಾಲನ್ನು ಡೇರಿಗೆ ಪೂರೈಸುವ ಮೂಲಕ ತಮ್ಮ ಕುಟುಂಬದ ಬದುಕು ಹಾಗೂ ಮಕ್ಕಳ ಶಿಕ್ಷಣಕ್ಕೆ ನೆರವಾಗಲಿದೆ ಎಂದರು.

ಹಾಲು ಉತ್ಪಾದನೆಯಿಂದ ಕೋಮುಲ್‌ನಲ್ಲಿ ಸಾವಿರಾರು ಸಾವಿರಾರು ಉದ್ಯೋಗ ಸಿಕ್ಕಿದ್ದು, ಹಾಲು ಉತ್ಪಾದಕರ ಮಕ್ಕಳಿಗೆ ವಿವಿಧ ಶೈಕ್ಷಣಿಕ ಸೌಲಭ್ಯಗಳನ್ನೂ ಒಕ್ಕೂಟದಿಂದ ನೀಡಲಾಗುತ್ತಿದೆ ರೈತರು ತಮ್ಮ ಹಸುಗಳಿಗೆ ಕಾಲಕಾಲಕ್ಕೆ ವಿಮೆ ಮಾಡಿಸಬೇಕು. ಆಕಸ್ಮಿಕವಾಗಿ ಹಸು ಮೃತಪಟ್ಟರೆ ವಿಮೆ ಯೋಜನೆಯಡಿ ಹಾಲು ಒಕ್ಕೂಟದಿಂದ ಹೊಸ ಹಸು ಖರೀದಿಸಲು ಆರ್ಥಿಕ ನೆರವು ದೊರೆಯುತ್ತದೆ. ಇದರಿಂದ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೋಲಾರ ಉಪ ವ್ಯವಸ್ಥಾಪಕರಾದ ಡಾ.ಮಹೇಶ್, ಅಶ್ವಕ್ ಅಹಮದ್ ವಿಸ್ತರಣಾಧಿಕಾರಿ ಸಮೀರ್ ಪಾಷ ಸೇರಿದಂತೆ ಹಾಲು ಉತ್ಪಾದಕ ಸಹಕಾರ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ರೈತರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಆರೋಗ್ಯದ ಕಡೆ ಹೆಚ್ಚಿನ ಗಮನ ಕೊಡಿ:ಗೀತಾ

ಮುಳಬಾಗಿಲು

ಪ್ರಸ್ತುತ ದಿನಗಳಲ್ಲಿ ಮಕ್ಕಳು ಮೊಬೈಲ್ ಬಳಕೆ ಮತ್ತು ಜೇಮ್ಸ್ ಫುಡ್ ಬಳಕೆ ಮಾಡದೆ. ಕ್ರೀಡೆ, ಹಳೆಯ ಆಹಾರ ಪದ್ಧತಿ ಅಳವಡಿಸಿಕೊಳ್ಳುವುದರಿಂದ ಉತ್ತಮ ಆರೋಗ್ಯಕರ ಸಮಾಜವನ್ನು ನಿರ್ಮಾಣ ಮಾಡಬಹುದು ಎಂದು ಗಿವರ್ಲಿ ಫೌಂಡೇಶನ್ ವ್ಯವಸ್ಥಾಪಕಿ ಕೆ. ಗೀತಾ ತಿಳಿಸಿದರು.



ತಾಲೂಕಿನ ಮಲ್ಲನಾಯಕನಹಳ್ಳಿ, ಜಿಜೆಸಿ ಪ್ರೌಢಶಾಲೆಯಲ್ಲಿ ಗಿವರ್ಲಿ ಕೇರ್ ಫೌಂಡೇಶನ್ ವತಿಯಿಂದ ಉಚಿತ ಆರೋಗ್ಯ ಶಿಬಿರದಲ್ಲಿ ಮಾತನಾಡಿದ ಗಿವರ್ಲಿ ಕೇರ್ ಫೌಂಡೇಶನ್ ವ್ಯವಸ್ಥಾಪಕಿ ಕೆ. ಗೀತಾ ರವರು, ಜನರು ತಮ್ಮ ತಮ್ಮ ನಿತ್ಯ ಒತ್ತಡ ಜೀವನದಲ್ಲಿ ತೊಡಗಿಸಿಕೊಂಡು ಆರೋಗ್ಯದ ಕಡೆ ಗಮನ ಕೊಡದೆ ಆರೋಗ್ಯವನ್ನು ಕಾಪಾಡಿಕೊಳ್ಳಲು ವಿಫಲರಾಗುತ್ತಿದ್ದಾರೆ ಎಂದು ಹೇಳಿದರು .

ಜೀವನ ಶೈಲಿಎಲ್ಲಿ ಬಹಳ ಪರಿವರ್ತನೆ ಮಾಡುತ್ತಾರೆ ಮಕ್ಕಳು ಸಹ ಮೊಬೈಲ್ ಬಳಕೆ ಮತ್ತು ಜೇಮ್ಸ್ ಫುಡ್ ಗಳಿಂದ ಶಾಲೆಯ ಮಕ್ಕಳು ಅಭ್ಯಾಸ ಮಾಡಿಕೊಳ್ಳುತ್ತಾರೆ ಅದರಿಂದ ಆರೋಗ್ಯದಲ್ಲಿ ಏರುಪೇರು ಆಗುತ್ತದೆ ಮಕ್ಕಳು ಮೊಬೈಲ್ ಬಳಕೆ ಕಡಿಮೆ ಮಾಡಬೇಕು ಎಂದು ಇ. ಗೀತಾ ರವರು ಮಕ್ಕಳಿಗೆ ಆರೋಗ್ಯದ ಸಲಹೆಗಳನ್ನು ನೀಡುತ್ತಾರೆ. ಜಿಜೆಸಿ ಪ್ರೌಢ ಶಾಲೆಯಲ್ಲಿ ಉಚಿತ ಆರೋಗ್ಯ ಶಿಬಿರ ಗಿವರ್ಲಿ ಕೇರ್ ಫೌಂಡೇಶನ್ ಸಹವೊಂದಿಗೆ ಆರೋಗ್ಯ ಶಿಬಿರ ಬಹಳ ಅಚ್ಚುಕಟ್ಟಾಗಿ ನಡೀತು ಆರೋಗ್ಯ ಶಿಬಿರದಲ್ಲಿ ಸುಮಾರು 350 ರಿಂದ 360 ಶಾಲೆಯ ಮಕ್ಕಳು ಶಿಕ್ಷಕರು ಶಿಬಿರದಲ್ಲಿ ಪಾಲ್ಗೊಂಡಿದ್ದರು.

ಕಾರ್ಯಕ್ರಮಗಳು ಗಿವರ್ಲಿ ಕೇರ್ ಫೌಂಡೇಶನ್ ತಾಲೂಕುನಲ್ಲಿ ಹೆಚ್ಚು ಹೆಚ್ಚು ಆರೋಗ್ಯ ಶಿಬಿರ ಕಾರ್ಯಕ್ರಮಗಳು ಮಾಡಿ ಬಡವರಿಗೆ ಹಾಗೂ ರೈತ ಮಕ್ಕಳಿಗೆ ಸಹಾಯ ಹಸ್ತ ನೀಡಬೇಕೆಂದು ಕೆ. ಗೀತಾ ಅವರಿಗೆ ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಗಿವರ್ಲಿ ಕೇರ್ ಫೌಂಡೇಶನ್ ವ್ಯವಸ್ಥಾಪಕಿ ಕೆ.ಗೀತಾ. ಆರ್ ಎಲ್ ಜಾಲಪ್ಪ ಆಸ್ಪತ್ರೆ ಸಿಬ್ಬಂದಿ ವರ್ಗ. ಚಂದ್ರಶೇಖರ್ ಮುಖ್ಯ ಶಿಕ್ಷಕರು ಚಲಪತಿ ಮೋನಿಕಾ. ಉಷಾ. ಜ್ಯೋತಿ. ವನಜ. ಸುಬ್ರಮಣಿ. ಅನಿತಾ. ಶಾಲೆ ಸಿಬ್ಬಂದಿ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಕಾಂಗ್ರೆಸ್‌ನಲ್ಲಿ ನಿಷ್ಠಾವಂತ ಕಾರ್ಯಕರ್ತರ ಕಡೆಗಣನೆ: ಕುಣಿಗಲ್ ಶಿವಣ್ಣ ಆರೋಪ



ಕುಣಿಗಲ್

ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠೆ ಪ್ರಾಮಾಣಿಕವಾಗಿ ದುಡಿದ ಹಳೆಯ ಕಾರ್ಯಕರ್ತರನ್ನ ಮರೆತು ಕೇವಲ ರಾಜಕೀಯ ದೊಂಬರಾಟ ಮಾಡುವ ವ್ಯಕ್ತಿಗಳಿಗೆ ಮನ್ನಣೆ ನೀಡುತ್ತಿದೆ ಎಂದು ಕರ್ನಾಟಕ ರಾಜ್ಯ ಪ್ರಜಾಪ್ರಭುತ್ವವಾದಿಗಳ ಹೋರಾಟ ಸಮಿತಿ ರಾಜ್ಯಾಧ್ಯಕ್ಷರಾದ ಕುಣಿಗಲ್ ಶಿವಣ್ಣ ತಿಳಿಸಿದ್ದಾರೆ.

ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಹಳೆ ತಲೆಮಾರಿನ ಕಾಂಗ್ರೆಸ್ ಮುಖಂಡರನ್ನು ಮೂಲೆಗುಂಪು ಮಾಡುತ್ತಾ ಕೇವಲ ರಾಜಕೀಯಕ್ಕಾಗಿ ದಂಬರಾಟವಾಡುತ್ತಾ ಕಾಂಗ್ರೆಸ್ ಪಕ್ಷವನ್ನು ಹದ ಪತನಕ್ಕೆ ಕೊಂಡೊಯ್ಯುತ್ತಿದ್ದಾರೆ ಎಂದು ನಿಷ್ಠಾವಂತ ಕಾರ್ಯಕರ್ತರು ಹೇಳಿದರು.

ದಾವಣಗೆರೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಸೋಲಿಸಲು ಹೊರಟ ಮಾಜಿ ಮಂತ್ರಿ ಜಮೀರ್ ಅಹ್ಮದ್ ಖಾನ್ ಅವರ ಹಿಂಬಾಲಕರು ಕಾಂಗ್ರೆಸ್ ಪಕ್ಷದ ಬಗ್ಗೆ ಹವಾ ಹೇಳನಕಾರಿ ಹೊಲಸು ಭಾಷೆಯಲ್ಲಿ ಮಾತನಾಡುತ್ತಿದ್ದರು. ಕಾಂಗ್ರೆಸ್ ಪಕ್ಷವು ಈ ಬಗ್ಗೆ ಚಕಾರ ಎತ್ತದೆ ಜಮೀರ್ ಖಾನ್ ರವರನ್ನು ಮುಂದಿನ 2028 ರಲ್ಲಿ ಮುಂದಿನ ಮುಖ್ಯಮಂತ್ರಿ ಮಾಡಲು ಒಂದು ಸಮುದಾಯ ಮುಂದಾಗಿರುವುದು ಕಾಂಗ್ರೆಸ್ ಪಕ್ಷದಲ್ಲಿ ಒಳ್ಳೆಯ ಬೆಳವಣಿಗೆಯಲ್ಲಾ ಈ ಹಿಂದೆ ರಾಜಕೀಯ ಧುರೀಣರು ಸ್ಥಾಪಿಸಿದಂತಹ ಕಾನ್ಸೀರಾಂರವರ ಬಹುಜನ ಸಮಾಜ ಪಾರ್ಟಿ ಅಂಬೇಡ್ಕರ್ ಅವರು ಸ್ಥಾಪಿಸಿದಂತಹ ರಿಪಬ್ಲಿಕ್ ಪಾರ್ಟಿ ಕೆಂಗಲ್ ಹನುಮಂತಯ್ಯ ಸ್ಥಾಪಿಸಿದ ಸ್ವರಾಜ್ ಪಾರ್ಟಿ ದೇವರಾಜ್ ಅರಸು ಸ್ಥಾಪಿಸಿದಂತ ಕ್ರಾಂತಿರಂಗ ಎ ಕೆ ಸುಬ್ಬಯ್ಯ ಸ್ಥಾಪಿಸಿದ ಕನ್ನಡ ದೇಶ ಪಕ್ಷ ಏನಾಗಿವೆ,? ಕೆಲವು ಸ್ವಾಮೀಜಿಗಳು ರಾಜಕಾರಣಿಗಳ ಕೈ ಗೊಂಬೆ ಹೇಳಿಕೆ ನೀಡಲು ಹೊರಟಿರುವುದು ವಿಪರ್ಯಾಸವಾಗಿದೆ.

ಇಂತಹ ಒಂದು ಸಮಾಜದ ಮುಖಂಡರಿಂದ ಯಾವುದೇ ರಾಜಕೀಯ ಪಕ್ಷ ಮತ್ತು ಕಾಂಗ್ರೆಸ್ ಪಕ್ಷ ಏಳಿಗೆ ಆಗುವುದಿಲ್ಲ ಇತ್ತೀಚಿನ ದಿನಗಳಲ್ಲಿ ಹಿಂದುಳಿದ ವರ್ಗಗಳು ಸಿದ್ದರಾಮಯ್ಯ ಹಾಗೂ ಸತೀಶ್ ಜಾರಕಿಹೊಳಿಯನ್ನ ಅವಲಂಬಿಸಲು ಹೊರಟಿರುವುದು ಶೋಭೆ ತರುವುದಿಲ್ಲ ಅಲ್ಪಸಂಖ್ಯಾತ ವರ್ಗದ ಜಮೀರ್ ಅಹ್ಮದ್ ಖಾನ್ ರವರನ್ನು ಕಾಂಗ್ರೆಸ್ ಪಕ್ಷದಲ್ಲಿ ಅವರಿಗೆ ರಾಜ್ಯದಲ್ಲಿ ಸರಿಸಾಟಿ ಇಲ್ಲ ಎಂಬ ಹೇಳಿಕೆಗಳು ಮತ್ತು ಶಾಂತಿ ಭಂಗ ಉಂಟು ಮಾಡಲು ಹೊರಟಿರುವ ಇಂತಹವರ ಮೇಲೆ ಕಾಂಗ್ರೆಸ್ ಪಕ್ಷವು ಪ್ರಜಾಪ್ರಭುತ್ವ ಹೋರಾಟಕ್ಕೆ ಸಿದ್ದವಾಗಬೇಕಾಗಿದೆ. ರಾಜ್ಯದ ಗೃಹ ಸಚಿವ ಪ್ರಿಯಾಂಕ ಖರ್ಗೆ ರವರು ಆರ್‌ಎಸ್‌ಎಸ್ ಬಗ್ಗೆ ಮಾತನಾಡುತ್ತಿದ್ದು, ಎಲ್ಲಾ ಕಾಂಗ್ರೆಸ್ ನಾಯಕರು ಇದರ ಬಗ್ಗೆ ಧ್ವನಿ ಎತ್ತಬೇಕು ಮಾಜಿ ಮಂತ್ರಿ ಜಮೀರ್ ಅಹ್ಮದ್ ಖಾನ್‌ರವರು ಸೇರಿದಂತೆ ಅವರ ಕಾರ್ಯಕರ್ತರು ಕಾಂಗ್ರೆಸ್ ಬಗ್ಗೆ ಹವಾ ಹೇಳನಕಾರಿ ಕೀಳು ಮಟ್ಟದ ಭಾಷೆಗಳಲ್ಲಿ ಮಾತನಾಡುವುದನ್ನು ಕೂಡಲೇ ಕೈಬಿಡಬೇಕೆಂದು ಇಲ್ಲದಿದ್ದರೆ ಕಾಂಗ್ರೆಸ್ ಪಕ್ಷವೇ ಒಂದು ಸಮುದಾಯದ ಪರವಾಗಿದೆ ಎಂಬುದನ್ನು ನಿರೂಪಿಸಿದ್ದಂತಾಗುತ್ತದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮಾಜಿ ಪುರಸಭಾ ಸದಸ್ಯ ಗಂಗಾಧರ್ ಉಪಸ್ಥಿತರಿದ್ದರು.

# ದೆಹಲಿ ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯ ಖಂಡಿಸಿ, ಧರಣಿ ಸತ್ಯಾಗ್ರಹ

ತಿಪಟೂರು

ದೆಹಲಿಯಲ್ಲಿ ನೀಟ್ ಪರೀಕ್ಷೆಯಲ್ಲಿನ ಅಕ್ರಮವನ್ನು ಖಂಡಿಸಿ, ಹೋರಾಟ ನಡೆಸುತ್ತಿರುವ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯವನ್ನು ವಿರೋಧಿಸಿ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ, ನಗರದ ನಗರಸಭೆ ವೃತ್ತದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ವಿದ್ಯಾರ್ಥಿಗಳು ಮತ್ತು ಮುಖಂಡರು ಧರಣಿ ಸತ್ಯಾಗ್ರಹವನ್ನು ಶುಕ್ರವಾರ ಹಮ್ಮಿಕೊಳ್ಳಲಾಗಿದೆ.



ಈ ಕುರಿತು ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡ ಹಾಗೂ ಜನಸ್ಪಂದನ ಟ್ರಸ್ಟ್ ಅಧ್ಯಕ್ಷ ಸಿ.ಬಿ.ಶಶಿಧರ್(ಟೂಡಾ), ಕೇಂದ್ರ ಬಿಜೆಪಿ ಸರ್ಕಾರದ ಆಡಳಿತಾವಧಿಯಲ್ಲಿ ಸಾಲು ಸಾಲು ಪರೀಕ್ಷಾ ಅಕ್ರಮಗಳು ನಡೆಯುತ್ತಿದ್ದು, ನೀಟ್ ಪರೀಕ್ಷೆಯ ಅಕ್ರಮಗಳಿಂದ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಲಾಗುತ್ತಿದೆ ಎಂದು ಆರೋಪಿಸಿದರು.

ನೀಟ್ ಅಕ್ರಮವನ್ನು ವಿರೋಧಿಸಿ ದೆಹಲಿಯ ಜಂತರ್–ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಕೇಂದ್ರ ಬಿಜೆಪಿ ಸರ್ಕಾರ ಕೆಲವು ಗೂಂಡಾಗಳ ಜೊತೆ ಸೇರಿಕೊಂಡು, ಮಹಿಳಾ ವಿದ್ಯಾರ್ಥಿಗಳು ಎನ್ನದೆ, ಪೊಲೀಸ್ ವೇಷದ ರೂಪದಲ್ಲಿ ಬಂದು, ದೆಹಲಿ ಪೊಲೀಸರೊಂದಿಗೆ ಕೈಜೋಡಿಸಿ ಗೂಂಡಾಗಳು ಬೀದಿ ನಾಯಿಗಳ ಮೇಲೆ ಹೊಡೆದ ರೀತಿ, ರಕ್ತ ಬರುವಂತೆ ಲಾಠಿಚಾರ್ಜ್ ನಡೆಸಿ, ದೌರ್ಜನ್ಯ ಎಸಗಲಾಗಿದೆ. ಪ್ರತಿಭಟನೆಯನ್ನು ಹತ್ತಿಕ್ಕುವ ಉದ್ದೇಶದಿಂದ ವಿದ್ಯಾರ್ಥಿಗಳ ಮೇಲೆ ಅಮಾನವೀಯವಾಗಿ ವರ್ತಿಸಲಾಗಿದೆ. ಅಲ್ಲದೆ, ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಮೇಲೂ ಹಲ್ಲೆ ನಡೆದಿರುವುದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದು ಟೀಕಿಸಿದರು.

ಕೂಡಲೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ನೀಟ್ ಪರೀಕ್ಷೆಯ ಅಕ್ರಮದಿಂದ ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ತಲಾ 1ಕೋಟಿ ಪರಿಹಾರ ನೀಡಬೇಕು. ಅಕ್ರಮದ ಕುರಿತು ಸಮಗ್ರ ತನಿಖೆ ನಡೆಸಿ, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಸವರಾಜಪ್ಪ ಮಾತನಾಡಿ, ವಿದ್ಯಾರ್ಥಿಗಳ ಶಾಂತಿಯುತ ಹೋರಾಟದ ಮೇಲೆ ದೆಹಲಿ ಪೊಲೀಸರು ನಡೆಸಿರುವ ದೌರ್ಜನ್ಯ ಅಮಾನವೀಯ. ಹಾಗೂ ಪ್ರಜಾಪ್ರಭುತ್ವ ವಿರೋಧಿಯಾಗಿದೆ. ಪ್ರತಿಭಟನೆ ನಡೆಸುವುದು ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಹಕ್ಕಾಗಿದ್ದು, ಅದನ್ನು ಹತ್ತಿಕ್ಕುವ ಪ್ರಯತ್ನ ಖಂಡನೀಯವಾಗಿದೆ.

ನೀಟ್ ಹಗರಣದಲ್ಲಿ ಸುಮಾರು 80,000 ಕೋಟಿ ಅವ್ಯವಹಾರ ನಡೆದಿದೆ ಎಂದು ಗೊತ್ತಾಗಿದ್ದು, ತನಿಖೆಗೆ ಒಳಪಡಿಸಬೇಕು. ನೀಟ್ ನಲ್ಲಿ ಶಾಶ್ವತ ಪರಿಹಾರ ನೀಡುವುದರೊಂದಿಗೆ ಯುವ ಜನರಲ್ಲಿ ಭರವಸೆ ಮೂಡಿಸಬೇಕು ಎಂಬ ನಿಟ್ಟಿನಲ್ಲಿ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ವೇಳೆ ಸೌಹಾರ್ದ ತಿಪಟೂರು ಅಧ್ಯಕ್ಷ ಅಲ್ಲಾ ಬಕಾಶ್ ಮಾತನಾಡಿ, ಕೇಂದ್ರ ಸರ್ಕಾರ ತನ್ನ ಆಡಳಿತ ವೈಫಲ್ಯಗಳನ್ನು ಮುಚ್ಚಿಹಾಕಲು ವಿದ್ಯಾರ್ಥಿಗಳ ನ್ಯಾಯ ಸಮ್ಮತ ಹೋರಾಟವನ್ನು ಹತ್ತಿಕ್ಕಲು ಪ್ರಯತ್ನಿಸುತ್ತಿದೆ. ತಿಪಟೂರು ಜನಸ್ಪಂದನಾ ಟ್ರಸ್ಟ್, ಕರ್ನಾಟಕ ರಾಜ್ಯ ರೈತ ಸಂಘ, ಪ್ರಾಂತ ರೈತ ಸಂಘ, ಸಂವಿಧಾನ ರಕ್ಷಣಾ ಪಡೆ, ಸೌಹಾರ್ದ ತಿಪಟೂರು, ಕನ್ನಡಪರ ಹಾಗೂ ದಲಿತಪರ ಸಂಘಟನೆಗಳು ಹಾಗೂ ವಿದ್ಯಾರ್ಥಿಗಳು ಸೇರಿದಂತೆ ಹಲವು ಸಂಘ–ಸಂಸ್ಥೆಗಳು ಜುಲೈ 25ರ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಲಿವೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಚನ್ನಬಸವಣ್ಣ, ಜನವಾದಿ ಮಹಿಳಾ ಸಂಘಟನೆಯ ರಾಜಮ್ಮ,ಬೆಳೆಕಾವಲು ಸಮಿತಿ ರಾಜ್ಯ ಕಾರ್ಯದರ್ಶಿ ಶ್ರೀಕಾಂತ್ ಕೆಳಹಟ್ಟಿ,ಸಂವಿಧಾನ ರಕ್ಷಣಾ ಪಡೆ ಅಧ್ಯಕ್ಷ ಲೋಕೇಶ್ ಹಾಗೂ ಮುಖಂಡ ಸಾದತ್ ಸೇರಿದಂತೆ ಮುಖಂಡರು ಹಾಜರಿದ್ದರು.

25/07/2026
ಭಾರತ ಸಾರಥಿ
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಹೋಟೇಲ್‌ಗಳು, ಬೇಕರಿಗಳಿಗೆ ಭೇಟಿ: ಆಹಾರದ ಗುಣಮಟ್ಟ ಪರಿಶೀಲನೆ



ವಿಜಯಪುರ

ಪಟ್ಟಣದ ಹಾಟ್ ಚಿಪ್ಸ್ ಅಂಗಡಿಯೊಂದರಲ್ಲಿ ಕೊಳೆತ ಆಲೂಗಡ್ಡೆಯಿಂದ ಚಿಪ್ಸ್ ತಯಾರಿಕೆ ಕಂಡು ಬಂದಿದ್ದ ಹಿನ್ನೆಲೆಯಲ್ಲಿ, ಪುರಸಭೆಯ ಅಧಿಕಾರಿಗಳು, ಹೋಟೇಲ್‌ಗಳು ಹಾಗೂ ಬೇಕರಿಗಳಲ್ಲಿ ತಯಾರಿಸಲಾಗುತ್ತಿರುವ ತಿಂಡಿ, ಆಹಾರಗಳ ಗುಣಮಟ್ಟವನ್ನು ತಪಾಸಣೆ ನಡೆಸಿದರು.

ಹೋಟೇಲ್ ಗಳಲ್ಲಿ ತಯಾರಿಸಲಾಗುತ್ತಿರುವ ಆಹಾರ, ಅದಕ್ಕೆ ಬಳಕೆ ಮಾಡುತ್ತಿರುವ ಸಾಮಾಗ್ರಿಗಳನ್ನು ಪರಿಶೀಲನೆ ನಡೆಸದಿರು. ಹೋಟೇಲ್ ಗಳಲ್ಲಿರುವ ಸ್ವಚ್ಚತೆಯ ಕುರಿತು ತಪಾಸಣೆ ನಡೆಸಿದರು. ಕೆಲ ಬೇಕರಿಗಳಿಗೆ ಭೇಟಿ ನೀಡಿದ್ದ ಅವರು, ಬೇಕರಿಗಳಲ್ಲಿ ತಿಂಡಿಗಳನ್ನು ತಯಾರಿಸುವ ಸ್ಥಳಗಳನ್ನು ಪರಿಶೀಲನೆ ನಡೆಸಿದರು.

ಯಾವುದೇ ಕಾರಣಕ್ಕೂ, ತಿಂಡಿಗಳ ತಯಾರಿಕೆ, ಕೇಕ್ ತಯಾರಿಕೆ, ಸೇರಿದಂತೆ ಯಾವುದೇ ತಿಂಡಿಗಳಿಗೆ ನಿಷೇಧಿತ ಕಲ್ಲರ್ ಗಳು ಬಳಕೆ ಮಾಡದಂತೆ ಎಚ್ಚರಿಕೆ ನೀಡಿದರು. ಹೊಟೇಲ್ ಗಳು, ಬೇಕರಿಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಬಗ್ಗೆ ಮಾಹಿತಿ ಪಡೆದುಕೊಂಡ ಅವರು, ಅವರಿಗೆ ಕಲ್ಪಿಸಿರುವ ಸೌಕರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಸ್ವಚ್ಚತೆ ಮತ್ತು ಗ್ರಾಹಕರಿಗೆ ಗುಣಮಟ್ಟದ ಆಹಾರ ಪೂರೈಕೆ ಮಾಡುವ ಕಡೆಗೆ ಗಮನಹರಿಸುವಂತೆ ಸಲಹೆ ನೀಡಿದರು. ಉತ್ಪತ್ತಿಯಾಗುತ್ತಿರುವ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು, ಹಸಿ,ಕಸ ಮತ್ತು ಒಣಕಸವನ್ನು ವಿಂಗಡಣೆ ಮಾಡಿ, ಪುರಸಭೆ ಕಸ ಸಂಗ್ರಹಣೆ ವಾಹನಗಳಿಗೆ ಕೊಡುವಂತೆ ಸೂಚಿಸಿದರು.

ಪರಿಸರ ಎಂಜಿನಿಯರ್ ಶೇಖರ್ ರೆಡ್ಡಿ, ಆರೋಗ್ಯ ನಿರೀಕ್ಷಕಿ, ಲಾವಣ್ಯ, ಪೃಥ್ವಿ, ಸಹನಾ ಮುಂತಾದವರು ಹಾಜರಿದ್ದರು.

## ಮಹಿಳೆಯ ಬ್ಯಾಗ್ ಕಳವು ಪ್ರಕರಣ ಭೇದಿಸಿದ ಪೊಲೀಸರು; 38 ಗ್ರಾಂ ಮಾಂಗಲ್ಯ ಸರ ವಶಕ್ಕೆ

ಮಾಲೂರು

ನಗರದ ಬಸ್ ನಿಲ್ದಾಣದಿಂದ ಕೂರ್ನಹೊಸಹಳ್ಳಿ ಗ್ರಾಮಕ್ಕೆ ತೆರಳಲು ಬಸ್ಸಿಗಾಗಿ ಕಾಯುವ ವೇಳೆ ಮಹಿಳೆಯೊಬ್ಬರ ಬ್ಯಾಗ್ ಕಸಿದು ಬ್ಯಾಗಿನಲ್ಲಿದ್ದ ಸುಮಾರು 6ಲಕ್ಷ ಬೆಲೆ ಬಾಳುವ 38 ಗ್ರಾಂ ಮಾಂಗಲ್ಯ ಸರವನ್ನು ಕಳ್ಳತನ ಮಾಡಿಕೊಂಡು ಪರಾರಿಯಾಗಿದ್ದ ಆರೋಪಿಯನ್ನು ಮಾಲೂರು ನಗರದ ಪೊಲೀಸರು ಆರೋಪಿಯನ್ನು ಬಂಧಿಸಿ ಕಳ್ಳಿಯಿಂದ ಚಿನ್ನದ ಸರ ವಶಪಡಿಸಿಕೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುವ ಘಟನೆ ನಡೆದಿದೆ.

ಆರೋಪಿಯನ್ನು ತಮಿಳುನಾಡು ರಾಜ್ಯದ ಮಧುರೈ ಜಿಲ್ಲೆಯ ಕಡಪಲೂರು ಗ್ರಾಮದವರೆಂದು ಗುರುತಿಸಲಾಗಿದೆ.

ಜುಲೈ 22ರ ಸಂಜೆ 5:00 ಸಮಯದಲ್ಲಿ ನಗರದ ಬಸ್ ನಿಲ್ದಾಣದಲ್ಲಿ ಗ್ರಾಮಾಂತರ ಭಾಗದ ಕೂರ್ನಹೊಸಳ್ಳಿ ಗ್ರಾಮದ ಗಿರಿಜಮ್ಮ ಅವರು ಗ್ರಾಮಕ್ಕೆ ತರಲು ನಗರದ ಬಸ್ ನಿಲ್ದಾಣದಲ್ಲಿ ಬಸಿಗಾಗಿ ಕಾಯುತ್ತಿದ್ದ ವೇಳೆ ಬಾಗಿನಲ್ಲಿದ್ದ ಸುಮಾರು 6 ಲಕ್ಷ ಬೆಲೆಬಾಳುವ ಮಾಂಗಲ್ಯ ಸರವನ್ನು ಕಳ್ಳಿಯೊರ್ವಳು ಕಸಿದುಕೊಂಡು ಹೋಗಿರುವ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಳು, ಅದರಂತೆ ಕಳ್ಳಿಯ ಜಾಡು ಹಿಡಿದ ಹೋದ ಪೊಲೀಸರಿಗೆ ಕಳ್ಳಿಯ ಸುಳಿವು ಸಿಕ್ಕಿದ್ದು ಕಳ್ಳಿಯನ್ನು ಬಂಧಿಸಿ ತನಿಖೆ ನಡೆಸಿ ಸುಮಾರು 6 ಲಕ್ಷ ಬೆಲೆಬಾಳುವ 38 ಗ್ರಾಮದ ಮಾಂಗಲ್ಯ ಸರ ವಶಪಡಿಸಿಕೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಪ್ರಕರಣದ ಪತ್ತೆ ಕಾರ್ಯ ನಡೆಸಿ ಆರೋಪಿಯನ್ನು ಬಂದಿಸಿದ ತಂಡದಲ್ಲಿದ್ದ ಎಸ್.ಐ.ಶಾಂತಮ್ಮ, ಎಎಸ್ಐ ರಮೇಶ್ ಬಾಬು, ಸಿಬ್ಬಂದಿ ಮುರುಳಿ, ನಾಗರಾಜ್, ಪೂಜಾರ್, ನಾಗಪ್ಪ ತಳವಾರ್, ತೇಜಸ್ವಿನಿ, ಅನಿತಾ, ಐಯ್ಯಪ್ಪ ಅವರನ್ನು ಜಿಲ್ಲಾ ಎಸ್‌ಪಿ ಕನ್ನಿಕಾ ಸಿಕ್ರಿವಾಲ್ ಎಎಸ್‌ಪಿ ರವಿಶಂಕರ್ ಡಿವೈಎಸ್‌ಪಿ ಜಗದೀಶ್ ವಿ, ಕೃಷ್ಣಪ್ಪ, ಪೋಲಿಸ್ ಇನ್ಸ್‌ಪೆಕ್ಟರ್ ರಾಮಪ್ಪಗುತೆರ್ ಅವರು ಅಧಿಕಾರಿಗಳು ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವೈಖರಿಯನ್ನು ಶ್ಲಾಘಿಸಿದ್ದಾರೆ.

## ಮುದ್ದನಾಯ್ಕನಪಾಳ್ಯ ಗ್ರಾಮಕ್ಕೆ ಸಿಇಒ ಭೇಟಿ



ದೊಡ್ಡಬಳ್ಳಾಪುರ

ರಾಜಘಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ಮುದ್ದನಾಯಕನ ಪಾಳ್ಯ ಗ್ರಾಮದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಸಂತಿ ಅಮರ್ ರವರು ಗುರುವಾರ ಭೇಟಿ ನೀಡಿ ಸಾರ್ವಜನಿಕರ ಕುಡಿಯುವ ನೀರು, ಜಲ ಜೀವನ ಮಿಷನ್ ಓಎಚ್‌ಟಿ ಕಾಮಗಾರಿ, ಖ ಔ ಘಟಕ ಕುಡಿಯುವ ನೀರು ಪರಿಶೀಲಿಸಿದರು.

ರಸ್ತೆ ಮತ್ತು ಚರಂಡಿ ಕಾಮಗಾರಿಗಳ ಬಗ್ಗೆ ಚರ್ಚಿಸಿ ಸಾರ್ವಜನಿಕರಿಗೆ ಸಲಹೆ ಸೂಚನೆಗಳನ್ನು ನೀಡಿದರು.

ನಂತರ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಕ್ಕಳ ಜೊತೆ ಬಿಸಿ ಊಟ ಸವಿದರು. ಈ ಸಂದರ್ಭದಲ್ಲಿ ಆರ್‌ಡಬ್ಲ್ಯೂಎಸ್‌ಎಇಇ, ತಾಲ್ಲೂಕು ಮಟ್ಟದ ಅಧಿಕಾರಿಗಳು ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಇನ್ನಿತರ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಭೂ ಸ್ವಾಧೀನ, ರೈತ ವಿರೋಧಿ ನೀತಿ: ತಿಪಟೂರಿನಲ್ಲಿ ಪ್ರತಿಭಟನೆ

ತಿಪಟೂರು

ರೈತರ ಪರ ಹೇಳುವ ರಾಜ್ಯ ಸರ್ಕಾರ ಬೆಂಗಳೂರು–ಬಿಡದಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಟೌನ್‌ಶಿಪ್ ಹಾಗೂ ಅಭಿವೃದ್ಧಿಯ ಹೆಸರಿನಲ್ಲಿ ರೈತರ ಭೂಮಿಯನ್ನು ಬಲವಂತವಾಗಿ ಸ್ವಾಧೀನ ಪಡಿಸಿಕೊಳ್ಳುತ್ತಿರುವುದನ್ನು ವಿರೋಧಿಸಿ ಮತ್ತು ನೀಟ್ ಹಗರಣವನ್ನು ಖಂಡಿಸಿ, ಹೋರಾಟಗಾರರ ಮೇಲೆ ಕೇಂದ್ರ ಸರ್ಕಾರ ನಡೆಸುತ್ತಿರುವ ದೌರ್ಜನ್ಯವನ್ನು ಖಂಡಿಸಿ ಹಾಗೂ ಬಲವಂತದ ಭೂ ಸ್ವಾಧೀನ ವಿರೋಧಿ ದಿನವನ್ನಾಗಿ ಆಚರಿಸುವುದರ ಮೂಲಕ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಸೇರಿದಂತೆ ವಿವಿಧ ರೈತಪರ ಸಂಘಟನೆಗಳ ನೇತೃತ್ವದಲ್ಲಿ ನಗರದ ಆಡಳಿತ ಸೌಧದ ಮುಂಭಾಗ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ತಾ.ಅಧ್ಯಕ್ಷ ತಿಮ್ಲಾಪುರ ದೇವರಾಜು, ರಾಜ್ಯ ಸರ್ಕಾರ ಬೆಂಗಳೂರು–ಬಿಡದಿ ಸೇರಿದಂತೆ ರಾಜ್ಯದ ಹಲವೆಡೆ ಅಭಿವೃದ್ಧಿಯ ಹೆಸರಿನಲ್ಲಿ ರೈತರ ಬೆಲೆಬಾಳುವ ಕೃಷಿ ಭೂಮಿಯನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುವ ಮೂಲಕ ಅನ್ನದಾತರ ಬದುಕಿನ ಮೇಲೆ ಹೊಡೆತ ನೀಡುತ್ತಿದೆ. ಕೂಡಲೇ ಭೂಸ್ವಾಧೀನ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ, ಭೂ ಸುಧಾರಣೆ ಕಾಯ್ದೆಗೆ ತಂದಿರುವ ತಿದ್ದುಪಡಿಯನ್ನು ಹಿಂತೆಗೆದುಕೊಳ್ಳಬೇಕು.

ರೈತ ಮುಖಂಡ ಯೋಗಾನಂದಸ್ವಾಮಿ ಮಾತನಾಡಿ, ಸರ್ಕಾರ ಒಂದು ಕಡೆ ಅಭಿವೃದ್ಧಿಯ ಹೆಸರಿನಲ್ಲಿ ರೈತರ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುತ್ತಿದ್ದರೆ, ಮತ್ತೊಂದೆಡೆ ಹಲವು ವರ್ಷಗಳಿಂದ ಸಾಗುವಳಿ ಮಾಡಿಕೊಂಡು ಬದುಕುತ್ತಿರುವ ರೈತರನ್ನು ಅರಣ್ಯ ಭೂಮಿ ಒತ್ತುವರಿದಾರರೆಂದು ಗುರುತಿಸಿ, ಒಕ್ಕಲೆಬ್ಬಿಸುವ ಕೆಲಸ ಮಾಡುತ್ತಿದೆ. ಈ ಕ್ರಮವನ್ನು ತಕ್ಷಣವೇ ನಿಲ್ಲಿಸಿ, ಖಾತೆದಾರರು ಹಾಗೂ ಬಗರ್‌ಹುಕುಂ ಸಾಗುವಳಿದಾರರಿಗೆ ಮಂಜೂರು ಚೀಟಿಗಳನ್ನು ವಿತರಿಸಬೇಕು.

ಕೇಂದ್ರ ಸರ್ಕಾರ ಅಮೆರಿಕದೊಂದಿಗೆ ಮುಕ್ತ ವಾಣಿಜ್ಯ ಒಪ್ಪಂದಕ್ಕೆ ಯಾವುದೇ ಕಾರಣಕ್ಕೂ ಕೇಂದ್ರ ಸರ್ಕಾರ ಸಹಿ ಹಾಕಬಾರದು. ರೈತರ ಹಿತಾಸಕ್ತಿಗೆ ಧಕ್ಕೆ ತರುವ ಯಾವುದೇ ಒಪ್ಪಂದಗಳನ್ನು ಮಾಡಿಕೊಳ್ಳಬಾರದು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಬಳುವನೇರಲು ಸಿದ್ದಯ್ಯ, ನವೀನ್, ಲೋಕೇಶ್, ಬಸವರಾಜು, ಮಲ್ಲಿಕಾರ್ಜುನಯ್ಯ, ಸಿದ್ದಲಿಂಗಯ್ಯ, ಮಹಾಲಿಂಗಪ್ಪ ಚಂದ್ರಶೇಖರ್, ಶ್ರೀನಿವಾಸ್, ಮೂರ್ತಿ ಮತ್ತು ಸಿದ್ದ ಬಸವನಾಯಕ ಸೇರಿದಂತೆ ರೈತರು ಹಾಗೂ ಮುಖಂಡರು ಹಾಜರಿದ್ದರು



ಮಾಲೂರಿನಲ್ಲಿ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ 2026ನೇ ಸಾಲಿನ ಡಿವಿಜಿ ಪ್ರಶಸ್ತಿಗೆ ಬಾಜನರಾಗಿರುವ ಸಂಯುಕ್ತ ಕರ್ನಾಟಕ ಕೋಲಾರ ಚಿಕ್ಕಬಳ್ಳಾಪುರ ಬ್ಯುರೋ ಬಿ.ವಿ.ಗೋಪಿನಾಥ್ ಅವರನ್ನು ಇದೇ 25ರ ಶನಿವಾರ ಚಿಕ್ಕಮಂಗಳೂರು ಜಿಲ್ಲಾ ಕೇಂದ್ರದಲ್ಲಿ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ನಡೆದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾಲೂರು ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಅಭಿನಂದಿಸಲಾಯಿತು.ಈ ಸಂದರ್ಭದಲ್ಲಿ ರಾಜ್ಯ ಸಂಘದ ಖಜಾಂಚಿ ವಾಸುದೇವ ಹೊಳ್ಳ, ಜಿಲ್ಲಾ ಸಂಘದ ಅಧ್ಯಕ್ಷ ಎಸ್.ಕೆ.ಚಂದ್ರಶೇಖರ, ರಾಜ್ಯ ಸಂಘದ ಕಾರ್ಯಕಾರಿ ಸಮಿತಿ ವಿ.ಮುನಿರಾಜು, ಜಿಲ್ಲಾ ಸಂಘದ ಪ್ರದಾನ ಕಾರ್ಯದರ್ಶಿ ಸುರೇಶ್, ಖಜಾಂಚಿ ರಾಜೇಂದ್ರ ಸಿಂಹ, ಜಿಲ್ಲಾ ಕಾರ್ಯದರ್ಶಿ ರಾಜೇಂದ್ರ ವೈದ್ಯ, ಹಿರಿಯ ಪತ್ರಕರ್ತ ಅನಂತ್ ರಾಮು, ತಾಲ್ಲೂಕು ಸಂಘದ ಅಧ್ಯಕ್ಷ ಡಿ.ಎಂ.ವಿಜಯ್‌ಕುಮಾರ್, ಸಂಘದ ಪದಾಧಿಕಾರಿಗಳಾದ ಎಂ.ವಿ.ರವೀಂದ್ರ, ನಂಜುಂಡಪ್ಪ, ಟಿ.ಕೆ.ನಾಗರಾಜ್, ಎಸ್.ನಾರಾಯಣಸ್ವಾಮಿ, ಎಸ್.ಲಕ್ಷ್ಮೀಶ್, ಮಲ್ಲಿಕಾರ್ಜುನ್, ಕೋಟೆ ಮುನಿರಾಜು, ಭರತ್, ಲಕ್ಷ್ಮಣ್ ಯಾದವ್, ಚಂದ್ರಶೇಖರ, ಸಂಘದ ಸದಸ್ಯರು ಹಾಜರಿದ್ದರು.

## ಜಂತರ್ ಮಂತರ್‌ನಲ್ಲಿ ಹಲ್ಲೆ ಖಂಡಿಸಿ ಕೋಲಾರದಲ್ಲಿ ಪಂಜಿನ ಮೆರವಣಿಗೆ

ಕೋಲಾರ

ನವದೆಹಲಿಯ ಜಂತರ್ ಮಂತರ್‌ನಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಕಾಂಗ್ರೆಸ್ ನಾಯಕರು ಹಾಗೂ ಪ್ರತಿಭಟನಾನಿರತ ಕಾರ್ಯಕರ್ತರ ಮೇಲೆ ನಡೆದಿರುವ ಹಲ್ಲೆಯನ್ನು ಖಂಡಿಸಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಾಧಾನ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ವಿಭಾಗದ ವತಿಯಿಂದ ಗುರುವಾರ ನಗರದಲ್ಲಿ ಪಂಜಿನ ಮೆರವಣಿಗೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಯಿತು.

ನಗರದ ವಾಲ್ಮೀಕಿ ವೃತ್ತದಿಂದ ಪ್ರಾರಂಭವಾಗಿ ಎಂಜಿ ರಸ್ತೆ ಮೂಲಕ ಗಾಂಧಿವನದವರಗೆ ಮೆರವಣಿಗೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಂಜು ಹಿಡಿದು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ಪ್ರಜಾಪ್ರಭುತ್ವದ ಧ್ವನಿಯನ್ನು ಹತ್ತಿಕ್ಕುವ ಪ್ರಯತ್ನಗಳನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು.



ಈ ಸಂದರ್ಭದಲ್ಲಿ ಕಾಂಗ್ರೆಸ್ ಎಸ್ಸಿ ಘಟಕದ ಜಿಲ್ಲಾ ಅಧ್ಯಕ್ಷ ಎನ್. ಅಂಬರೀಶ್ ಮಾತನಾಡಿ, ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ಕಾಂಗ್ರೆಸ್ ನಾಯಕರ ಹಾಗೂ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸಿರುವುದು ಖಂಡನೀಯವಾಗಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಸಂವಿಧಾನ ನೀಡಿರುವ ಪ್ರತಿಭಟನೆಯ ಹಕ್ಕನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ. ವಿರೋಧದ ಧ್ವನಿಯನ್ನು ಹತ್ತಿಕ್ಕುವ ಮೂಲಕ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ದೇಶದಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಮೇಲಿದೆ ಇಂತಹ ನೂರು ಪ್ರತಿರೋಧ ವ್ಯಕ್ತಪಡಿಸಿದರು ಜಯ ಖಂಡಿತವಾಗಿ ಸತ್ಯಕ್ಕೆ ಇದೆ ಹೋರಾಟಗಾರನ್ನು ಧಮನ ಮಾಡಿದಷ್ಟು ಪ್ರತಿರೋಧ ಹೆಚ್ಚಾಗುತ್ತದೆ ಕೂಡಲೇ ಕೇಂದ್ರ ಶಿಕ್ಷಣ ಮಂತ್ರಿ ರಾಜೀನಾಮೆ ನೀಡಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಲ್ಲಿ ಭಾಗಿಯಾಗಿರುವರನ್ನು ಬಂಧಿಸಿ ವಿಧ್ಯಾರ್ಥಿಗಳಿಗೆ ನ್ಯಾಯ ಕೊಡಿಸುವಂತೆ ಕೇಂದ್ರ ಸರ್ಕಾರದ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು.

## ಸಾಮಾಜಿಕ ಜಾಲತಾಣಗಳಲ್ಲಿ ಸರ್ಕಾರಿ ನೌಕರರ ವಿರುದ್ಧ ಅವಹೇಳನ: ಕಾನೂನು ಕ್ರಮಕ್ಕೆ ಒತ್ತಾಯಿಸಿ ದೂರು

ಮಾಲೂರು

ಸಾಮಾಜಿಕ ಜಾಲತಾಣಗಳು ಹಾಗೂ ಮಾಧ್ಯಮಗಳಲ್ಲಿ ಸರ್ಕಾರಿ ನೌಕರರ ವಿರುದ್ಧ ಸುಳ್ಳು ಆರೋಪ, ಮಾನ ಹಾನಿಕರ ಹಾಗೂ ಅವಹೇಳನಕಾರಿ ಪೋಸ್ಟ್‌ಗಳನ್ನು ಪ್ರಕಟಿಸುತ್ತಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಸರ್ಕಾರಿ ನೌಕರರು ಪೊಲೀಸ್ ಠಾಣೆಯಲ್ಲಿ ದೂರು ನೀಡಿ ತಾಲ್ಲೂಕು ಕಚೇರಿಗೆ ತರಳಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.



ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಅಜಯ್ ಅವರ ನೇತೃತ್ವದಲ್ಲಿ ತಾಲ್ಲೂಕಿನ ವಿವಿಧ ಇಲಾಖೆಗಳ ಸರ್ಕಾರಿ ನೌಕರರು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಘ, ಗ್ರಾಮ ಲೆಕ್ಕಾಧಿಕಾರಿಗಳ ಸಂಘ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಮನವಿ ಸಲ್ಲಿಸಿದರು.

ಶಿವಾರಪಟ್ಟಣ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಿಂಡಹಳ್ಳಿ ಗ್ರಾಮದ ಖಾತೆಗೆ ಸಂಬಂಧಿಸಿದ ಪ್ರಕರಣದಲ್ಲಿ ನ್ಯಾಯಾಲಯದ ನಿರ್ದೇಶನದಂತೆ ಪಿಸಿಆರ್ (ಕಅಖ) ಪ್ರಕರಣ ದಾಖಲಾಗಿದ್ದು, ಅದರ ತನಿಖೆ ನಡೆಸುವುದು ಪೊಲೀಸರ ಜವಾಬ್ದಾರಿಯಾಗಿದೆ. ಆದರೆ ಕೆಲ ಕಿಡಿಗೇಡಿಗಳು ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ವಿ.ಮುನಿಯಪ್ಪ ಅವರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ರಾಜಕೀಯ ಪ್ರೇರಿತ, ದ್ವೇಷಪೂರಿತ ಹಾಗೂ ವೈಯಕ್ತಿಕ ನಿಂದನೆ ಮಾಡುವ ಪೋಸ್ಟ್‌ಗಳನ್ನು ಹರಿಬಿಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ನ್ಯಾಯಾಲಯದ ಆದೇಶದಲ್ಲಿ ಯಾವುದೇ ಸರ್ಕಾರಿ ನೌಕರರ ಹೆಸರಿಲ್ಲದಿದ್ದರೂ ಉದ್ದೇಶಪೂರ್ವಕವಾಗಿ ಹೆಸರುಗಳನ್ನು ಸೇರಿಸಿ ತೇಜೋವಧೆ ಮಾಡಲಾಗುತ್ತಿದೆ. ಇದರಿಂದ ಸರ್ಕಾರಿ ನೌಕರರ ನೈತಿಕ ಸ್ಥೈರ್ಯ ಕುಗ್ಗುವುದಲ್ಲದೆ, ಅವರ ಕುಟುಂಬದ ಸದಸ್ಯರೂ ಮಾನಸಿಕವಾಗಿ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಯಾವುದೇ ಅಧಿಕಾರಿಯಿಂದ ಕರ್ತವ್ಯ ನಿರ್ವಹಣೆಯಲ್ಲಿ ತಪ್ಪು ನಡೆದಿದ್ದರೆ ಸಂಬಂಧಿತ ಇಲಾಖೆ ಅಥವಾ ಮೇಲಾಧಿಕಾರಿಗಳಿಗೆ ದೂರು ಸಲ್ಲಿಸಲು ಅವಕಾಶವಿದೆ. ಆದರೆ ವೈಯಕ್ತಿಕ ಲಾಭಕ್ಕಾಗಿ ಮೂರನೇ ವ್ಯಕ್ತಿಗಳು ಸಾಮಾಜಿಕ ಜಾಲತಾಣಗಳು ಹಾಗೂ ಮಾಧ್ಯಮಗಳನ್ನು ದುರುಪಯೋಗಪಡಿಸಿಕೊಂಡು ಸರ್ಕಾರಿ ನೌಕರರನ್ನು ನಿಂದಿಸುವುದು ಖಂಡನೀಯ ಎಂದು ಸಂಘದ ಮುಖಂಡರು ಹೇಳಿದರು.

ಸಿದ್ದಾರ್ಥ ಆನಂದ್, ನವೀನ್, ದೇವರಾಜ್ ಎಂಬುವರ ವಿರುದ್ಧ ಪ್ರಕರಣ ದಾಖಲಿಸಿ, ಸಾಮಾಜಿಕ ಜಾಲತಾಣಗಳಲ್ಲಿರುವ ಅವಹೇಳನಕಾರಿ ಪೋಸ್ಟ್‌ಗಳನ್ನು ತಕ್ಷಣವೇ ಅಳಿಸುವಂತೆ ಅವರು ಒತ್ತಾಯಿಸಿದರು. ಮುಂದೆಯೂ ಸರ್ಕಾರಿ ನೌಕರರ ವಿರುದ್ಧ ಸುಳ್ಳು ಆರೋಪ, ಅವಹೇಳನಕಾರಿ ಪೋಸ್ಟ್‌ಗಳು ಹಾಗೂ ಕರ್ತವ್ಯಕ್ಕೆ ಅಡ್ಡಿಪಡಿಸುವ ಘಟನೆಗಳು ಮುಂದುವರಿದರೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ನೌಕರರು ಬೀದಿಗಿಳಿದು ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವಿ.ಮುನಿಯಪ್ಪ, ಎಂ.ರವಿ, ಖಜಾಂಚಿ ಆರ್. ನರಸಿಂಹ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಎಂ.ನಾರಾಯಣಸ್ವಾಮಿ, ಅಂಬರೀಶ್, ಗ್ರಾಮ ಲೆಕ್ಕಾಧಿಕಾರಿಗಳ ಸಂಘದ ಅಧ್ಯಕ್ಷ ಮುನೇಶ್, ಎಂ.ಜೆ.ನಾಗರಾಜ್, ಟೇಕಲ್ ಶಶಿಧರ್, ಎಂ.ಸಿ.ಮುನಿರಾಜು, ಎಸ್.ಪಿ. ಕಾಶೀನಾಥ್, ಅರುಣ್, ಸುರೇಶ್ ಬಾಬು, ಅಂಬರೀಶ್ ಬಾಬು, ಹರೀಂದ್ರಗೋಪಾಲ್, ಸಿ.ಆರ್.ಗೌಡ, ರಮೇಶ್ ನಾಯಕ್, ರಮೇಶ್, ಜವರೇಗೌಡ, ನವೀನ್, ತಿಮ್ಮರಾಯಪ್ಪ, ನಂದೀಶ್, ರವಿ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಶಿಕ್ಷಕರು ಹಾಜರಿದ್ದರು.

## 'ಕರ್ನಾಟಕದ ನೂತನ ವೈಮಾಂತರಿಕ್ಷ-ರಕ್ಷಣಾ ನೀತಿಯಲ್ಲಿ ಸಮಗ್ರ ಕೈಗಾರಿಕಾ ಸಮೂಹಗಳಿಗೆ ಒತ್ತು'

ಬೆಂಗಳೂರು



ರಾಜ್ಯದಲ್ಲಿ ಶೀಘ್ರದಲ್ಲೇ ಜಾರಿಗೆ ಬರಲಿರುವ 2026–2031ರ ನೂತನ ವೈಮಾಂತರಿಕ್ಷ ಮತ್ತು ರಕ್ಷಣಾ ನೀತಿಯಲ್ಲಿ ಆಧುನಿಕ ಎಲೆಕ್ಟ್ರಾನಿಕ್ ಸಮರ ಸಾಧನಗಳು, ಅಂತರ್ಗತ ತಂತ್ರಾಂಶ, ಇ–ವಿಟಾಲ್ ಸಾಧನಗಳು ಹಾಗೂ ಬಾಹ್ಯಾಕಾಶ ಕ್ಷೇತ್ರದಲ್ಲಿ ಬಳಸುವ ಪೇಲೋಡ್‌ಗಳಿಗೆ ಸಂಬಂಧಿಸಿದ ಸಮಗ್ರ ಕೈಗಾರಿಕಾ ಸಮೂಹಗಳ ಅಭಿವೃದ್ಧಿಗೆ ಒತ್ತು ನೀಡಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ತಿಳಿಸಿದ್ದಾರೆ.

ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಆರಂಭವಾದ 15ನೇ ವರ್ಷದ ವ್ಯೂಹಾತ್ಮಕ ವಿದ್ಯುನ್ಮಾನ ಸಮಾವೇಶದಲ್ಲಿ ಮಾತನಾಡಿದ ಅವರು, ಇದೇ ವರ್ಷದ ಡಿಸೆಂಬರ್ ವೇಳೆಗೆ ಕ್ವಿನ್ ಸಿಟಿಯ ಮೊದಲ ಹಂತದಲ್ಲಿ 200 ಎಕರೆ ವಿಸ್ತೀರ್ಣದ ಸೆಮಿಕಂಡಕ್ಟರ್ ಪಾರ್ಕ್ ಕಾರ್ಯಾಚರಣೆ ಆರಂಭಿಸಲಿದೆ ಎಂದು ಹೇಳಿದರು.

ಕರ್ನಾಟಕವು ಎರಡು ವರ್ಷಗಳ ಹಿಂದೆಯೇ ಸೆಮಿಕಂಡಕ್ಟರ್ ಮತ್ತು ಆಧುನಿಕ ಎಲೆಕ್ಟ್ರಾನಿಕ್ ವ್ಯವಸ್ಥೆಗಳ ವಿನ್ಯಾಸ ಹಾಗೂ ಉತ್ಪಾದನಾ ವಲಯಗಳಲ್ಲಿ ಒಟ್ಟು 23 ಸಾವಿರ ಕೋಟಿ ರೂಪಾಯಿ ಹೂಡಿಕೆಗೆ ಅನುಮೋದನೆ ನೀಡಿದೆ. ಇದರಿಂದ ಹೆಚ್ಚಿನ ಕೌಶಲ್ಯ ಅಗತ್ಯವಿರುವ 3,500ಕ್ಕೂ ಹೆಚ್ಚು ಎಂಜಿನಿಯರಿಂಗ್ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಸಚಿವರು ತಿಳಿಸಿದರು.

ಈ ಯೋಜನೆಗಳ ಅಡಿಯಲ್ಲಿ ಅಪ್ಲೈಡ್ ಮೆಟೀರಿಯಲ್ಸ್ ಇಂಡಿಯಾ ಸಂಸ್ಥೆ 4,851 ಕೋಟಿ ರೂಪಾಯಿ, ಲ್ಯಾಮ್ ರೀಸರ್ಚ್ ಸಂಸ್ಥೆ 15,901 ಕೋಟಿ ರೂಪಾಯಿ ಹಾಗೂ ಭಾರತ್ ಸೆಮಿ ಸಿಸ್ಟಮ್ಸ್ ಸಂಸ್ಥೆ 2,342 ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡುತ್ತಿವೆ. ಇದರ ಜೊತೆಗೆ ಕರ್ನಾಟಕದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಜಾಗತಿಕ ಪೂರೈಕೆ ಸರಪಳಿಯೊಂದಿಗೆ ಬೆಸೆಯಲು ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಕೇವಲ ಉತ್ಪಾದನಾ ಚಟುವಟಿಕೆಗಳಿಗೆ ಮಾತ್ರ ಸೀಮಿತವಾಗದೆ, ಕಂಪನಿಗಳು ವಿನ್ಯಾಸ, ಅಭಿವೃದ್ಧಿ, ಮೂಲಮಾದರಿ ತಯಾರಿಕೆ, ಪರೀಕ್ಷೆ, ಪ್ರಮಾಣೀಕರಣ ಮತ್ತು ರಫ್ತು ಸೇರಿದಂತೆ ಸಂಪೂರ್ಣ ಮೌಲ್ಯ ಸರಪಳಿಯನ್ನು ಕರ್ನಾಟಕದಲ್ಲೇ ಅಭಿವೃದ್ಧಿಪಡಿಸಬೇಕು. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಉದ್ಯಮಿಗಳೊಂದಿಗೆ ಕೈಜೋಡಿಸಲು ಸಿದ್ಧವಿದೆ ಎಂದು ಎಂ.ಬಿ. ಪಾಟೀಲ ಹೇಳಿದರು.

ಸೆಮಿಕಂಡಕ್ಟರ್ ಮಿಷನ್ 2.0 ಯೋಜನೆಯನ್ನು ಕರ್ನಾಟಕದ ಮೂಲಕ ಯಶಸ್ವಿಯಾಗಿ ಸಾಕಾರಗೊಳಿಸುವ ನಿಟ್ಟಿನಲ್ಲಿ ಉದ್ಯಮಿಗಳು ಹೆಚ್ಚಿನ ಹೂಡಿಕೆ ಮಾಡಬೇಕು ಎಂದು ಅವರು ಕರೆ ನೀಡಿದರು.

ಸಂಶೋಧನೆ, ಆಳ ತಂತ್ರಜ್ಞಾನ ವಿನ್ಯಾಸ ಮತ್ತು ಉಪಕರಣ ಎಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಕರ್ನಾಟಕ ಅಗ್ರಸ್ಥಾನದಲ್ಲಿದೆ. ಬೆಂಗಳೂರಿನಲ್ಲಿ ಈಗಾಗಲೇ 100ಕ್ಕೂ ಹೆಚ್ಚು ಚಿಪ್ ವಿನ್ಯಾಸ ಸಂಸ್ಥೆಗಳು ಮತ್ತು ಮೂರು ನ್ಯಾನೋಮೀಟರ್ ವಿನ್ಯಾಸ ಕೇಂದ್ರಗಳು ಸಕ್ರಿಯವಾಗಿದ್ದು, ಈ ಬಲವನ್ನು ಉದ್ಯಮಿಗಳು ಸದುಪಯೋಗಪಡಿಸಿಕೊಂಡು ರಾಜ್ಯದಲ್ಲಿ ಮತ್ತಷ್ಟು ಹೂಡಿಕೆ

## ವೀರ ಸೇನಾನಿ ಚಂದ್ರಶೇಖರ್ ಆಜಾದ್ 120ನೇ ಜಯಂತಿ ಅದ್ದೂರಿ ಆಚರಣೆ



ಬಂಗಾರಪೇಟೆ

ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ಹೋರಾಡಿದ ವೀರ ಸೇನಾನಿಗಳಲ್ಲಿ ಚಂದ್ರಶೇಖರ್ ಆಜಾದ್ ಅವರು ಅಗ್ರಗಣ್ಯರು ಎಂದು ಮಾಜಿ ಸಂಸದ ಎಸ್. ಮುನಿಸ್ವಾಮಿ ಹೇಳಿದರು. ಸ್ವಾತಂತ್ರ್ಯ ಹೋರಾಟದಲ್ಲಿ ಅವರ ತ್ಯಾಗ, ಧೈರ್ಯ ಮತ್ತು ದೇಶಭಕ್ತಿಯು ಇಂದಿನ ಯುವಜನತೆಗೆ ಸದಾ ಆದರ್ಶವಾಗಿದ್ದು, ದೇಶ ಮೊದಲು ಎಂಬ ಮನೋಭಾವವನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು ಎಂದರು.

ನಗರದ ಶಾಂತಿನಗರ ಬಡಾವಣೆಯಲ್ಲಿರುವ ಚಂದ್ರಶೇಖರ್ ಆಜಾದ್ ಉದ್ಯಾನವನದಲ್ಲಿ ವೀರ ಸೇನಾನಿ ಚಂದ್ರಶೇಖರ್ ಆಜಾದ್ ಅವರ 120ನೇ ಜಯಂತಿಯನ್ನು ವಿಶ್ವ ಹಿಂದೂ ಪರಿಷತ್ ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಅಭಿಮಾನಿ ಬಳಗದ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬ್ರಿಟಿಷರ ದಮನಕಾರಿ ಆಡಳಿತದ ವಿರುದ್ಧ ನಿರ್ಭಯವಾಗಿ ಹೋರಾಡಿ, ಕೊನೆಯ ಉಸಿರಿನವರೆಗೂ ಶತ್ರುಗಳಿಗೆ ಶರಣಾಗದೆ ವೀರಮರಣ ಹೊಂದಿದ ಮಹಾನ್ ಕ್ರಾಂತಿಕಾರಿ ಆಜಾದ್ ಅವರ ಆದರ್ಶಗಳನ್ನು ಯುವಕರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ದೇಶಭಕ್ತಿಯ ಮೌಲ್ಯಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಮೂಲಕ ರಾಷ್ಟ್ರಭಕ್ತಿ ಬೆಳೆಸುವ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕೆಂದು ತಿಳಿಸಿದರು.

ಇದಕ್ಕೂ ಮುನ್ನ ಆಜಾದ್ ಅವರ ಪ್ರತಿಮೆಗೆ ಪುಷ್ಪಮಾಲೆ ಅರ್ಪಿಸಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಲೇಖಕ ಬಾಬು ಕೃಷ್ಣಮೂರ್ತಿ, ಬಂಗಾರಪೇಟೆಯಲ್ಲಿ ಚಂದ್ರಶೇಖರ್ ಆಜಾದ್ ಅವರ ಪ್ರತಿಮೆ ಪ್ರತಿಷ್ಠಾಪನೆಗಾಗಿ ಶ್ರಮಿಸಿದ ವಿಶ್ವ ಹಿಂದೂ ಪರಿಷತ್ ಕೋಲಾರ ಜಿಲ್ಲಾ ಅಧ್ಯಕ್ಷ ದಿವಂಗತ ಎಂ.ಎಸ್. ರಘುರಾಮರೆಡ್ಡಿ ಅವರ ಸೇವೆಯನ್ನು ಸ್ಮರಿಸಿದರು. ರಾಷ್ಟ್ರಭಕ್ತಿಯ ಸಂಕೇತವಾಗಿರುವ ಆಜಾದ್ ಅವರ ಆದರ್ಶಗಳು ಇಂದಿನ ಪೀಳಿಗೆಗೆ ಸ್ಫೂರ್ತಿದಾಯಕವಾಗಿದ್ದು, ಇಂತಹ ಕಾರ್ಯಕ್ರಮಗಳು ದೇಶಪ್ರೇಮವನ್ನು ಬಲಪಡಿಸುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ಎಂ.ಆರ್. ಶಂಕರ್ ನಾರಾಯಣರೆಡ್ಡಿ, ಪರಿಸರ ಪ್ರೇಮಿ ಜನಾರ್ಧನರೆಡ್ಡಿ, ವಕೀಲ ವೇಣುಗೋಪಾಲ್, ಪುರಸಭೆಯ ಮಾಜಿ ಸದಸ್ಯ ಕಪಾಲಿ ಶಂಕರ್, ಕಾರಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ನಾರಾಯಣಸ್ವಾಮಿ ಸೇರಿದಂತೆ ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು, ಸ್ವಾತಂತ್ರ್ಯ ಹೋರಾಟಗಾರರ ಅಭಿಮಾನಿ ಬಳಗದ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## 'ಘನತ್ಯಾಜ್ಯ ವಿಲೇವಾರಿಯಲ್ಲಿ ವಿದ್ಯಾರ್ಥಿಗಳ ಪಾತ್ರ ಅಮೂಲ್ಯವಾದದ್ದು'

ವಿಜಯಪುರ

ನಗರ, ಪಟ್ಟಣ ಮಾತ್ರವಲ್ಲದೆ ಗ್ರಾಮೀಣ ಪ್ರದೇಶಗಳಲ್ಲಿಯೂ ಘನತ್ಯಾಜ್ಯದ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಪ್ಲಾಸ್ಟಿಕ್, ಆಹಾರ ತ್ಯಾಜ್ಯ, ಇ–ತ್ಯಾಜ್ಯದಿಂದ ಪರಿಸರ ಹಾಳಾಗುತ್ತಿರುವ ಈ ಸಂದರ್ಭದಲ್ಲಿ ಘನತ್ಯಾಜ್ಯ ವಿಲೇವಾರಿಯಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅಭಿಪ್ರಾಯಪಟ್ಟರು.

ಪಟ್ಟಣದ ಸರಕಾರಿ ಮಾದರಿ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ, ಘನತ್ಯಾಜ್ಯ ವಿಲೇವಾರಿಯಲ್ಲಿ ವಿದ್ಯಾರ್ಥಿಗಳ ಪಾತ್ರ ಎಂಬ ಅಂಶದಡಿ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಘನತ್ಯಾಜ್ಯವೆಂದರೆ ಮನೆ, ಶಾಲೆ, ಮಾರುಕಟ್ಟೆ, ಕಾರ್ಖಾನೆಗಳಿಂದ ಹೊರಬರುವ ಘನ ರೂಪದ ಕಸ. ಇದನ್ನು ಸರಿಯಾಗಿ ವಿಲೇವಾರಿ ಮಾಡದಿದ್ದರೆ ಆರೋಗ್ಯ ಸಮಸ್ಯೆ, ಜಲಮಾಲಿನ್ಯ, ವಾಯುಮಾಲಿನ್ಯ



ಉಂಟಾಗುತ್ತದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವಲ್ಲಿ ವಿದ್ಯಾರ್ಥಿ ಸಮುದಾಯವೇ ಭವಿಷ್ಯದ ಆಧಾರ ಸ್ತಂಭ ಎಂದರು.

ಪರಿಸರ ಎಂಜಿನಿಯರ್ ಶೇಖರ್ ರೆಡ್ಡಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಮನೆ, ಶಾಲೆ, ನೆರೆಹೊರೆಯಲ್ಲಿ ಕಸ ವಿಂಗಡಣೆಯ ಬಗ್ಗೆ ಜಾಗೃತಿ ಮೂಡಿಸಬಹುದು. ಹಸಿ ಕಸ, ಒಣ ಕಸ, ಅಪಾಯಕಾರಿ ತ್ಯಾಜ್ಯವನ್ನು ಬೇರೆ ಬೇರೆಯಾಗಿ ವಿಂಗಡಿಸುವ ಅಭ್ಯಾಸವನ್ನು ಚಿಕ್ಕ ವಯಸ್ಸಿನಿಂದಲೇ ಬೆಳೆಸಿಕೊಳ್ಳಬೇಕು. ಕಸವನ್ನು ಕಡಿಮೆ ಮಾಡುವುದು, ಮರುಬಳಕೆ ಮಾಡುವುದು ಮತ್ತು ಮರುಸಂಸ್ಕರಣೆ ಮಾಡುವುದು. ಪ್ಲಾಸ್ಟಿಕ್ ಬದಲು ಬಟ್ಟೆ ಚೀಲ ಬಳಕೆ, ಹಾಳೆ ಕಾಗದದ ಮರುಬಳಕೆ, ಹಳೆಯ ವಸ್ತುಗಳಿಂದ ಹೊಸ ವಸ್ತು ತಯಾರಿಕೆ ಇಂತಹ ಚಟುವಟಿಕೆಗಳನ್ನು ಶಾಲೆಗಳಲ್ಲಿ ಹಮ್ಮಿಕೊಳ್ಳಬಹುದು ಎಂದರು.

ಮುಖ್ಯಶಿಕ್ಷಕ ಮನೋಹರ್ ಮಾತನಾಡಿ, ಶಾಲಾ ಆವರಣದಲ್ಲಿ ಹಸಿ ಕಸದಿಂದ ಗೊಬ್ಬರ ತಯಾರಿಸುವ ಘಟಕ ಸ್ಥಾಪನೆ, ಸ್ವಚ್ಚ ಭಾರತ ಅಭಿಯಾನದಡಿ ಗ್ರಾಮ ಸ್ವಚ್ಚತೆ, ಪ್ಲಾಸ್ಟಿಕ್ ಮುಕ್ತ ಅಭಿಯಾನದಲ್ಲಿ ವಿದ್ಯಾರ್ಥಿಗಳು ಮುಂಚೂಣಿಯಲ್ಲಿ ನಿಲ್ಲಬಹುದು. ವಿದ್ಯಾರ್ಥಿಗಳು ಕಲಿತ ವಿಷಯವನ್ನು ತಮ್ಮ ಪೋಷಕರಿಗೆ ತಿಳಿಸಿ ಮನೆಯಲ್ಲಿಯೂ ಕಸ ವಿಂಗಡಣೆಯನ್ನು ಕಡ್ಡಾಯಗೊಳಿಸಿದರೆ ಇಡೀ ಸಮಾಜದಲ್ಲಿ ದೊಡ್ಡ ಬದಲಾವಣೆ ತರಬಹುದು ಎಂದರು. ಘನತ್ಯಾಜ್ಯ ವಿಲೇವಾರಿ ಎಂಬುದು ಕೇವಲ ಪುರಸಭೆ ಅಥವಾ ಸರಕಾರದ ಕೆಲಸವಲ್ಲ. ಇದು ಪ್ರತಿಯೊಬ್ಬರ ಜವಾಬ್ದಾರಿ. ಅದರಲ್ಲೂ ವಿದ್ಯಾರ್ಥಿಗಳು ಈ ಜವಾಬ್ದಾರಿಯನ್ನು ಹೊತ್ತರೆ, ನಾಡು ಸ್ವಚ್ಚ, ಸುಂದರ ಮತ್ತು ಆರೋಗ್ಯಕರವಾಗುವುದರಲ್ಲಿ ಸಂಶಯವಿಲ್ಲ ಎಂದರು. ಪುರಸಭೆ ಸಿಬ್ಬಂದಿ ಪೃಥ್ವಿ, ಸಹನಾ, ಕಮ್ಯೂನಿಟಿ ಮೊಬಲೈಜರ್ಸ್, ಶಾಲೆಯ ಶಿಕ್ಷಕರು ಹಾಜರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy